ಸಂಪುಟ: 05 ಸಂಚಿಕೆ: 76 ಪುಟಗಳು: 08 ಶುಕ್ರವಾರ 30 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ನಾವು ಮಾಡುವ ಕೆಲಸದಲ್ಲಿ ದೊಡ್ಡದು, ಚಿಕ್ಕದು ಎನ್ನುವ ವ್ಯತ್ಯಾಸವನ್ನು ಮಾಡಲು ಹೋಗಬಾರದು.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಬ್ರಹ್ಮೋಸ್ ನಮ್ಮ ಪ್ಲ್ಯಾನ್‌ಗಳನ್ನೆಲ್ಲಾ ತಲೆಕೆಳಗೆ ಮಾಡಿತು: ಪಾಕ್ ಪ್ರಧಾನಿ

• ಉದಯವಾಹಿನಿ, ಬೆಂಗಳೂರು

ಆಪರೇಷನ್ ಸಿಂಧೂರದ ಪರಾಕ್ರಮದ ಬಗ್ಗೆ ಪಾಕ್ ಪ್ರಧಾನಿ ಮತ್ತಷ್ಟು ಸತ್ಯ ಬಾಯಿಬಿಡ್ತಿದ್ದಾರೆ. ರಾವಲ್ಪಿಂಡಿ ಏರ್‌ಪೋರ್ಟ್ ಮೇಲೆ ಬ್ರಹ್ಮೋಸ್ ಕ್ಷಿಪಣಿಯ ದಾಳಿ ಆಯಿತು. ನಾವು ಪ್ಲ್ಯಾನ್ ಮಾಡುವ ಮೊದಲೇ ಅವರು ದಾಳಿ ಮಾಡಿದ್ದರು. ಇದು ನಮ್ಮ ಮಿಲಿಟರಿ ವೈಫಲ್ಯ ಅಂತ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಒಪ್ಪಿಕೊಂಡಿದ್ದಾರೆ.

ಅಜೆರ್ಬೈಜಾನ್‌ನ ಲಾಚಿನ್‌ನಲ್ಲಿ ನಡೆದ ಪಾಕಿಸ್ತಾನ-ಟರ್ಕಿ-ಅಜೆರ್ಬೈಜಾನ್ ತ್ರಿಪಕ್ಷೀಯ ಶೃಂಗಸಭೆಯಲ್ಲಿ ಮಾತನಾಡಿದ ಷರೀಫ್, ಮೇ 10ರಂದು ಬೆಳಗ್ಗಿನ ಜಾವ 4:30ಕ್ಕೆ ಪ್ರಾರ್ಥನೆ ಬಳಿಕ ಭಾರತದ ಮೇಲೆ ದಾಳಿ ಮಾಡಲು ಫೀಲ್ಡ್ ಮಾರ್ಷಲ್ ಅಸೀಮ್ ಮುನೀರ್ ನೇತೃತ್ವದ ನಮ್ಮ ಸೇನೆಯು ಪ್ಲ್ಯಾನ್ ಮಾಡಿತ್ತು. ಆದ್ರೆ ಭಾರತ ನಮ್ಮ ಯೋಜಿತ ದಾಳಿಯನ್ನೆಲ್ಲ ತಲೆಕೆಳಗೆ ಮಾಡಿತು ಅಂತ ಹೇಳಿದ್ದಾರೆ. ನಾವು ದಾಳಿ ಮಾಡುವ ಮೊದಲೇ ಭಾರತ ಬ್ರಹ್ಮೋಸ್‌ನಿಂದ (ಸೂಪರ್ ಸಾನಿಕ್ ಕ್ರೂಸ್ ಕ್ಷಿಪಣಿ) ಪಾಕ್‌ನ ಹಲವು ಮಿಲಿಟರಿ ಕೇಂದ್ರಗಳು ಹಾಗೂ ವಾಯುನೆಲೆಗಳ ಮೇಲೆ ದಾಳಿ ಮಾಡಿತ್ತು. ನಮ್ಮ ಕಾರ್ಯತಂತ್ರದ ನೆಲೆಗಳನ್ನೂ ನಾಶಗೊಳಿಸಿತು.




**ಏರ್‌ಪೋರ್ಟ್ ಧ್ವಂಸ ಆಗಿರೋದು ನಿಜ**

ಪಾಕಿಸ್ತಾನದ ವಿವಿಧ ಪ್ರಾಂತ್ಯಗಳನ್ನು ಗುರಿಯಾಗಿಸಿಕೊಂಡು ಬ್ರಹ್ಮೋಸ್ ಕ್ಷಿಪಣಿ ದಾಳಿ ನಡೆಸಿದಾಗ ರಾವಲ್ಪಿಂಡಿಯ ನೂರ್ ಖಾನ್ ಮತ್ತು ಮುರಿಯ್‌ನ (ಚಕ್ವಾಲ್) ವಾಯುನೆಲೆಗಳು ಧ್ವಂಸವಾದವು. ಇದರಿಂದ ನಮ್ಮ ಯೋಜಿತ ದಾಳಿ ತಲೆಕೆಳಗಾಯಿತು. ಆಪರೇಷನ್ ಸಿಂಧೂರ ಭಾಗವಾಗಿ ಭಾರತ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿ ಬ್ರಹ್ಮೋಸ್ ಅನ್ನು ಪ್ರಯೋಗಿಸಿತ್ತು. ಇದಾದ ಬಳಿಕ ಪಾಕ್ ಭಾರತದ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಚೀನಾ ನಿರ್ಮಿತ ಡ್ರೋನ್‌ಗಳನ್ನು ಹಾರಿಸಿತ್ತು. ಇದನ್ನೂ ನಮ್ಮ ವಾಯುರಕ್ಷಣಾ ವ್ಯವಸ್ಥೆ ಎಸ್-400 ವಿಫಲಗೊಳಿಸಿತು.

## ಸರ್ಕಾರಕ್ಕೆ ಮತ್ತೆ ಹಿನ್ನಡೆ, ಮನವೊಲಿಕೆಗೆ ಬಗ್ಗದ ರಾಜ್ಯಪಾಲರು

• ಉದಯವಾಹಿನಿ, ಬೆಂಗಳೂರು

ರಾಜ್ಯಪಾಲರು ಹಾಗೂ ರಾಜ್ಯ ಸರ್ಕಾರದ ನಡುವಿನ ಸಂಘರ್ಷ ಮತ್ತೆ ಮುಂದುವರಿದಿದೆ. ರಾಜ್ಯಪಾಲರು ಸರ್ಕಾರಕ್ಕೆ ಮತ್ತೆ ಟಕ್ಕರ್ ಕೊಟ್ಟಿದ್ದಾರೆ. ಅದು ಮುಸ್ಲಿಂ ಮೀಸಲಾತಿ ವಿಚಾರದಲ್ಲಿ. ಹೌದು. ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ಕಲ್ಪಿಸುವ ಸಲುವಾಗಿ ತಿದ್ದುಪಡಿ ಮಸೂದೆಗೆ ರಾಜ್ಯಪಾಲರ ಅಂಕಿತಕ್ಕೆ ಸರ್ಕಾರ ಕಳುಹಿಸಿತ್ತು ಆದ್ರೆ, ರಾಜ್ಯಪಾಲರು ಮೀಸಲಾತಿ ಮಸೂದೆಗೆ ಅಂಕಿತ ಹಾಕಿಲ್ಲ, ಸರ್ಕಾರದ ಮನವಿಗೆ ಸೊಪ್ಪುಹಾಕಿಲ್ಲ. ಧರ್ಮಾಧಾರಿತ ಮೀಸಲು' ಸಂವಿಧಾನದ ಆಶಯಕ್ಕೆ ವಿರುದ್ಧ ಎಂದು ಹೇಳಿ, ಮಸೂದೆಗೆ ಸಹಿ ಹಾಕದ ರಾಜ್ಯಪಾಲರು, ರಾಷ್ಟ್ರಪತಿ ಅಂಕಿತಕ್ಕೆ ಕಳುಹಿಸುವುದು ಸೂಕ್ತವೆಂದು ಖಡಕ್ ಆಗಿ ಹೇಳಿದ್ದಾರೆ.

ಸಿಎಂ ಸಿದ್ದರಾಮಯ್ಯ, ರಾಜ್ಯಪಾಲರನ್ನು ಭೇಟಿ ಮಾಡಿ, ಮುಸ್ಲಿಮರಿಗೆ ಗುತ್ತಿಗೆ ಮೀಸಲಾತಿ ಕಲ್ಪಿಸುವ ವಿಧೇಯಕಕ್ಕೆ ಅಂಕಿತ ಹಾಕುವಂತೆ ಮನವಿ ಮಾಡಿದ್ದರೆಂದು ತಿಳಿದು ಬಂದಿದೆ. ಗುತ್ತಿಗೆ ಸೌಲಭ್ಯ ಸಂವಿಧಾನಬದ್ಧವಾಗಿದೆ ಎಂಬ ವಿವರಣೆ ನೀಡಿ, ಸರ್ಕಾರ ನೀಡಿದ ಸ್ಪಷ್ಟೀಕರಣವನ್ನು ಪುರಸ್ಕರಿಸಿ ಮಸೂದೆ ಅನುಮೋದಿಸುವಂತೆ ಗವರ್ನರ್ ಎದುರು ಸಿದ್ದರಾಮಯ್ಯ ಅವರು ಕೋರಿಕೆ ಇಟ್ಟಿದ್ದರೆಂದು ಹೇಳಲಾಗಿತ್ತು. ಆದ್ರೆ ರಾಜ್ಯಪಾಲರು ಏ.15 ರಂದು ರಾಜ್ಯ ಸರ್ಕಾರಕ್ಕೆ ವಿಧೇಯಕ ವಾಪಸ್ ಕಳುಹಿಸಿ ನಾನು ತಿಳಿಸಿದ್ದ ಅಭಿಪ್ರಾಯಕ್ಕೆ ಬದ್ಧನಾಗಿದ್ದೇನೆ. ವಿಧೇಯಕವು ಸಾಂವಿಧಾನಿಕ ಬಿಕಟ್ಟು ಸೃಷ್ಟಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳ ಪರಿಗಣನೆಗೆ ಕಳುಹಿಸಬೇಕು ಎಂದು ಪುನರುಚ್ಚರಿಸಿದ್ದಾರೆ.

## ಒಲೈಕೆ ರಾಜಕಾರಣ ಬಿಟ್ಟು ಜನರ ಹಿತ ಕಾಪಾಡಲಿ: ಅರವಿಂದ್ ಬೆಲ್ಲದ್

• ಉದಯವಾಹಿನಿ, ಬೆಂಗಳೂರು

ಹುಬ್ಬಳ್ಳಿ ಗಲಭೆ ಪ್ರಕರಣ ಸೇರಿ 43 ಪ್ರಕರಣಗಳನ್ನು ರದ್ದುಗೊಳಿಸಿದ್ದ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ.

ಇದರಿಂದ ಸರ್ಕಾರಕ್ಕೆ ತೀವ್ರ ಮುಖಭಂಗವಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷ ಉಪನಾಯಕ ಅರವಿಂದ್ ಬೆಲ್ಲದ್ ಟೀಕಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆ ಮೇಲೆ ನಡೆಸಿದ ದಾಳಿ ಸೇರಿ 43 ಪ್ರಕರಣಗಳನ್ನು ರದ್ದುಗೊಳಿಸುವ ಕುರಿತು ಕೆಲ ತಿಂಗಳ ಹಿಂದೆ ಸರ್ಕಾರ ನಿರ್ಧರಿಸಿತ್ತು. ಇದನ್ನು ಪ್ರಶ್ನಿಸಿ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ, ಸರ್ಕಾರದ ನಡೆ ವಿರುದ್ಧಅಸಮಾ ಧಾನ ವ್ಯಕ್ತಪಡಿಸಿ ಪ್ರಕರಣ ವಾಪಸ್ ಪಡೆದಿದ್ದನ್ನು ರದ್ದು ಮಾಡುವಂತೆ ಆದೇಶಿಸಿದೆ.

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಬೆಲ್ಲದ್, ಅತ್ಯಂತ ಹೀನ ಕೃತ್ಯಗಳಲ್ಲಿ ಭಾಗಿಯಾದವರಿಗೆ ಕಠಿಣ ಶಿಕ್ಷೆ ನೀಡುವ ಬದಲು ಅವರ ರಕ್ಷಣೆ ಸರ್ಕಾರ ನಿಂತಿರುವುದು ನಾಚಿಗೇಡಿನ ಸಂಗತಿ ಎಂದು ಕಿಡಿಕಾರಿದ್ದಾರೆ. ಇಂತಹ ಪ್ರಕರಣ ವಾಪಸ್ ಪಡೆಯುವುದೇ ಸರಿಯಲ್ಲ. ಆದರೂ ರಾಜಕೀಯ ಒತ್ತಡ ಹಾಗೂ ಮುಸ್ಲಿಂ ಓಲೈಕೆ ರಾಜಕಾರಣಕ್ಕೆ ಕೇಸ್ ವಾಪಸ್ ಪಡೆದಿದೆ. ರಾಜ್ಯದ ಹಿತದೃಷ್ಟಿಯಿಂದ ಕೆಲಸ ಮಾಡಬೇಕೆ ಹೊರತು, ಮುಸ್ಲಿಂ ಓಲೈಕೆ ರಾಜಕಾರಣ ಮಾಡಬಾರದು. ಇನ್ನಾದರೂ ಸರ್ಕಾರ ಡಿಜೆ ಹಳ್ಳಿ, ಕೆಜೆ ಹಳ್ಳಿ ಗಲಭೆ ಪ್ರಕರಣದಲ್ಲಿ ಭಾಗಿಯಾದವರ ಮೇಲೆ ಕ್ರಮ ವಹಿಸಲಿ ಎಂದು ಆಗ್ರಹಿಸಿದ್ದಾರೆ.

## 43 ಕ್ರಿಮಿನಲ್ ಕೇಸ್ ಹಿಂದಕ್ಕೆ ಆದೇಶ ರದ್ದುಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶವನ್ನು ಗುರುವಾರ ರಾಜ್ಯ ಉಚ್ಚ ನ್ಯಾಯಾಲಯ ರದ್ದುಗೊಳಿಸಿದೆ. ಆ ಮೂಲಕ, ಸಿದ್ದರಾಮಯ್ಯ ನೇತೃತ್ವದ ಸರ್ಕಾರಕ್ಕೆ ತೀವ್ರ ಹಿನ್ನಡೆಯಾಗಿದೆ. 2022ರ ಹುಬ್ಬಳ್ಳಿ ಗಲಭೆ ಪ್ರಕರಣ ಸೇರಿದಂತೆ 43 ಕ್ರಿಮಿನಲ್ ಮೊಕದ್ದಮೆಗಳನ್ನು ಸರ್ಕಾರ ಹಿಂದಕ್ಕೆ ಪಡೆದಿತ್ತು. ಕರ್ನಾಟಕ ಹೈಕೋರ್ಟಿನ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾ.ಕೆ.ವಿ.ಅರವಿಂದ್, ಕ್ರಿಮಿನಲ್ ಪ್ರೊಸಿಜರ್ ಕೋಡ್ ಸೆಕ್ಷನ್ 321 ಪ್ರಕಾರ, ಸರ್ಕಾರದ ನಿರ್ಧಾರ ಕಾನೂನು ಬಾಹಿರ ಮತ್ತು ಕ್ರಿಮಿನಲ್ ಕಾಯಿದೆಯ ಉಲ್ಲಂಘನೆ ಎಂದು ಅಭಿಪ್ರಾಯ ಪಟ್ಟು, ತೀರ್ಪನ್ನು ನೀಡಿದೆ. ಗಿರೀಶ್ ಭಾರದ್ವಾಜ್ ಎನ್ನುವವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಶಕ್ತಿ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ಪುರಷ್ಕರಿಸಿ, ಸರ್ಕಾರದ ಆದೇಶವನ್ನು ರದ್ದುಗೊಳಿಸಿದೆ.

ಸಿದ್ದರಾಮಯ್ಯನವರ ಸರ್ಕಾರ ಅಕ್ಟೋಬರ್ 15, 2024ರಂದು ಹೊರಡಿಸಿದ್ದ ಆದೇಶದಲ್ಲಿ ಪ್ರಕರಣವನ್ನು ಹಿಂದಕ್ಕೆ ಪಡೆದುಕೊಳ್ಳಲಾಗಿತ್ತು. 2008 ರಿಂದ 2023ರ ಅವಧಿಯಲ್ಲಿ ದಾಖಲಾಗಿದ್ದ 43 ಪ್ರಕರಣಗಳನ್ನು ಹಿಂದಕ್ಕೆ ಪಡೆಯುವ ನಿರ್ಧಾರಕ್ಕೆ ಸಿದ್ದರಾಮಯ್ಯ ಸರ್ಕಾರ ಬಂದಿತ್ತು. ಇದನ್ನು ಪ್ರಶ್ನಿಸಿ, ಹೈಕೋರ್ಟಿಗೆ ಅರ್ಜಿ ಸಲ್ಲಿಸಲಾಗಿತ್ತು. ಇದು ಹಿಂದಕ್ಕೆ ಪಡೆಯಲು ಯೋಗ್ಯವಲ್ಲದ ಕೇಸುಗಳಾಗಿವೆ ಎಂದು ಅರ್ಜಿಯನ್ನು, ಹೈಕೋರ್ಟ್ ನಲ್ಲಿ ಸಲ್ಲಿಸಲಾಗಿತ್ತು.

## ಸಿಎಂ ವಿರುದ್ಧ ಡಿಸಿಎಂ ಗರಂ ಮುಸುಕಿನ ಗುದ್ದಾಟ ಬಹಿರಂಗ

### ಮತ್ತೆ ಭುಗಿಲೆದ್ದ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ನಡುವಿನ ಭಿನ್ನಾಭಿಪ್ರಾಯ



**ಜಲಸಂಪನ್ಮೂಲ ಇಲಾಖೆಗೆ ವರ್ಗಾವಣೆ**

**1** ಲೋಕೋಪಯೋಗಿ ಇಲಾಖೆಯಿಂದ ಜಲಸಂಪನ್ಮೂಲ ಇಲಾಖೆಗೆ ಹಿರಿಯ ಇಂಜಿನಿಯರ್‌ಗಳ ವರ್ಗಾವಣೆ ವಿಚಾರಕ್ಕೆ ಸಿಎಂ ಡಿಸಿಎಂ ನಡುವೆ ಮನಸ್ತಾಪ.

**2** ತಮ್ಮ ಇಲಾಖೆಗೆ ಸಂಬಂಧಿಸಿದ ವರ್ಗಾವಣೆಗಳಲ್ಲಿ ಸಿಎಂ ಅವರ ಮಧ್ಯಪ್ರವೇಶವನ್ನು ವಿರೋಧಿಸಿ ಡಿಕೆ ಶಿವಕುಮಾರ್ ಮುಖ್ಯ ಕಾರ್ಯದರ್ಶಿಗೆ ಪತ್ರ

• ಉದಯವಾಹಿನಿ, ಬೆಂಗಳೂರು

ಕೆಲ ತಿಂಗಳುಗಳಿಂದ ತಣ್ಣಗಿದ್ದ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ನಡುವಿನ ಭಿನ್ನಾಭಿಪ್ರಾಯ ಮತ್ತೆ ಜೋರಾಗಿದೆ. ಸದ್ಯ ಹಿರಿಯ ಇಂಜಿನಿಯರ್‌ಗಳ ವರ್ಗಾವಣೆ ವಿಚಾರದಲ್ಲಿ ಸಿಎಂ ಮತ್ತು ಡಿಸಿಎಂ ನಡುವೆ ಮುಸುಕಿನ ಗುದ್ದಾಟ ಬಹಿರಂಗವಾಗಿದೆ.

ಡಿಕೆ ಶಿವಕುಮಾರ್ ಅವರು ಸಿಎಂ ಸಿದ್ದರಾಮಯ್ಯ ಅವರ ಅಧೀನದಲ್ಲಿರುವ ಇಲಾಖೆಯ ಅಧಿಕಾರಿಗಳ ವರ್ಗಾವಣೆ ವಿಚಾರಕ್ಕೆ ಮಧ್ಯಪ್ರವೇಶ ಮಾಡಿದ್ದಾರೆ. ಈಗಾಗಲೇ ಡಿಪಿಎಆರ್ ಇಲಾಖೆ ಹೊರಡಿಸಿದ್ದ ವರ್ಗಾವಣೆ ಆದೇಶವನ್ನು ಹಿಂಪಡೆಯುವಂತೆ ಮುಖ್ಯ ಕಾರ್ಯದರ್ಶಿಗೆ ಡಿಕೆ ಶಿವಕುಮಾರ್ ಪತ್ರ ಬರೆದಿದ್ದಾರೆ. ಈ ಮೂಲಕ ಸಿಎಂ ನಡೆಗೆ ಡಿಸಿಎಂ ವಿರೋಧ ವ್ಯಕ್ತಪಡಿಸಿದ್ದಾರೆ.

ಲೋಕೋಪಯೋಗಿ ಇಲಾಖೆಯಲ್ಲಿದ್ದ ಇಂಜಿನಿಯರ್‌ಗಳನ್ನು ಜಲಸಂಪನ್ಮೂಲ ಇಲಾಖೆಗೆ ವರ್ಗಾವಣೆ ಮಾಡಲಾಗಿತ್ತು. ಪ್ರಮುಖ ಹುದ್ದೆಗಳಿಗೆ ಅಧಿಕಾರಿಗಳು ಬದಲಾವಣೆಯಾಗಿದ್ದರು.

ಸದ್ಯ ಜಲಸಂಪನ್ಮೂಲ ಖಾತೆಯನ್ನು ಹೊಂದಿರುವ ಡಿಕೆ ಶಿವಕುಮಾರ್ ಅವರ ಅನುಮತಿ ಪಡೆಯದೆ ವರ್ಗಾವಣೆ ಮಾಡಲಾಗಿದೆ ಇದು ಡಿಸಿಎಂ ಕೋಪಕ್ಕೆ ಕಾರಣವಾಗಿದೆ.

**ಪತ್ರ ಬರೆದು ಅಸಮಾಧಾನ:** ಈ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಡಿಕೆ ಶಿವಕುಮಾರ್ ಪತ್ರ ಬರೆದಿದ್ದು, ಕಾಂಗ್ರೆಸ್ ಸರ್ಕಾರ ರಚನೆಯಾದಾಗ ಸಂಪುಟ ಸಹೋದ್ಯೋಗಿಗಳ ನಡುವೆ ಒಂದು ಒಪ್ಪಂದವಾಗಿತ್ತು. ನನ್ನ ಇಲಾಖೆಗೆ ಸಂಬಂಧಿಸಿದ ಯಾವುದೇ ವರ್ಗಾವಣೆ ಅಥವಾ ನೇಮಕಾತಿಗಳನ್ನು ನನ್ನ ಸ್ಪಷ್ಟ ಅನುಮೋದನೆ ಇಲ್ಲದೆ ಮಾಡಬಾರದು. ಈ ವರ್ಗಾವಣೆಗಳನ್ನು ಸಂಬಂಧಪಟ್ಟ ಸಚಿವರ ಗಮನಕ್ಕೆ ತರದೆ ಮಾಡಲಾಗಿದೆ ಎಂದು ಶಿವಕುಮಾರ್ ಹೇಳಿದ್ದಾರೆ. ಈ ನಿರ್ಧಾರಗಳು ನಿಯಮಗಳನ್ನು ಉಲ್ಲಂಘಿಸುತ್ತವೆ, ಜತೆಗೆ ಸಚಿವರ ಅಧಿಕಾರವನ್ನು ದುರ್ಬಲಗೊಳಿಸುತ್ತವೆ ಎಂದು ಡಿಕೆ ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



### ಇಂಜಿನಿಯರ್‌ಗಳ ವರ್ಗಾವಣೆ ವಿಚಾರಕ್ಕೆ ಭಿನ್ನಾಭಿಪ್ರಾಯ!

ಇನ್ನು ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಥವಾ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಯಾವುದೇ ಪ್ರತಿಕ್ರಿಯಿಸಿಲ್ಲ. ಆದರೆ, ಈಗಾಗಲೇ ಇಬ್ಬರ ನಡುವೆ ಆಡಳಿತ ವಿಚಾರವಾಗಿ ಭಾರೀ ಭಿನ್ನಾಭಿಪ್ರಾಯ ಆರಂಭವಾಗಿದೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬರುತ್ತಿವೆ.

**ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿಲ್ಲ**

ಇಬ್ಬರೂ ಪ್ರಭಾವಿ ನಾಯಕರಾಗಿರುವುದರಿಂದ ಆಗಾಗ ಭಿನ್ನಾಭಿಪ್ರಾಯಗಳು ಉಂಟಾಗುತ್ತವೆ. ಈ ಹಿಂದೆ ಬಜೆಟ್ ಹಂಚಿಕೆ, ಸಂಪುಟ ಖಾತೆಗಳು ಮತ್ತು ಮಂಡಳಿ ಹಾಗೂ ನಿಗಮಗಳ ನೇಮಕಾತಿ, ಬೆಂಗಳೂರು ನಗರಾಭಿವೃದ್ಧಿ ವಿಚಾರದಲ್ಲಿಯೂ ಈ ಇಬ್ಬರು ನಾಯಕರ ನಡುವೆ ಭಿನ್ನಾಭಿಪ್ರಾಯಗಳು ಇದ್ದವು. ಆದರೆ, ಸರ್ಕಾರದ ಆರಂಭದ ದಿನಗಳು ಎಂಬ ಕಾರಣಕ್ಕೆ ಎಲ್ಲಾವೂ ಸರಿಯಾಗಿದೆ ಎಂಬಂತೆ ಬಿಂಬಿಸಲಾಗಿತ್ತು.

| ಯಾವೆಲ್ಲಾ ಅಧಿಕಾರಿಗಳ ವರ್ಗಾವಣೆ | |
|---|---|
| ಪಿ.ಬಿ.ಪ್ರಕಾಶ್ | ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಸೌಲಭ್ಯಗಳ ಅಭಿವೃದ್ಧಿ ನಿಗಮ, ಬೆಂ. |
| ಎಚ್.ಸಿ.ರಮೇಂದ್ರ | ಅಂತರರಾಜ್ಯ ಜಲ ವಿವಾದ, ಬೆಂಗಳೂರು |
| ವಿನಾಯಕ ಜಿ.ಸುಗೂರ | ನೀರಾವರಿ ಯೋಜನೆಗಳ ವಲಯ, ಕರ್ನಾಟಕ ನೀರಾವರಿ ನಿಗಮ, ತುಮಕೂರು |
| ಜಿ.ಇ. ಯತೀಶ್ ಚಂದ್ರನ್ | ಎತ್ತಿನಹೊಳೆ ಯೋಜನಾ ವಲಯ, ಕರ್ನಾಟಕ ನೀರಾವರಿ ನಿಗಮ, ತುಮಕೂರು |
| ಶಿವಾನಂದ ಆರ್.ನಾಯಕ್ | ಆಡಳಿತಾಧಿಕಾರಿ, ಕಾಡಾ ನೀರಾವರಿ ಯೋಜನೆಗಳ ವಲಯ, ಕಲಬುರಗಿ |

**ಡಿಕೆಶಿ ಸಮರ್ಥನೆ**

ನೀರಾವರಿ ಇಲಾಖೆಯಲ್ಲಿ ಹೆಚ್ಚು ಇಂಜಿನಿಯರ್‌ಗಳಿಲ್ಲದ ಕಾರಣ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿರುವುದಾಗಿ ಡಿಸಿಎಂ ಡಿಕೆ ಶಿವಕುಮಾರ್ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ. ಜಲಸಂಪನ್ಮೂಲ ಇಲಾಖೆಯಲ್ಲಿ ಹೆಚ್ಚು ಇಂಜಿನಿಯರ್‌ಗಳಿಲ್ಲ. ನಮಗೆ ತುರ್ತಾಗಿ ಇಂಜಿನಿಯರ್‌ಗಳು ಬೇಕು. ಹೀಗಾಗಿ ನಮ್ಮ ಇಲಾಖೆಯಿಂದ ಯಾರನ್ನೂ ಬೇರೆಡೆಗೆ ಕಳಿಸಬೇಡಿ ಎಂದು ಪತ್ರ ಬರೆದಿದ್ದೇನೆ. ನಮ್ಮ ಇಲಾಖೆಗೆ ಬಂದು ಬಡ್ತಿ ಪಡೆದು ನಂತರ ಲೋಕೋಪಯೋಗಿ, ಜಿಲ್ಲಾ ಪಂಚಾಯಿತಿ ಸೇರಿದಂತೆ ಇತರ ಇಲಾಖೆಗಳಿಗೆ ವರ್ಗಾವಣೆ ಪಡೆಯುತ್ತಾರೆ ಎಂದು ಸ್ಪಷ್ಟನೆ ನೀಡಿದರು. ನಿಮ್ಮ ಅನುಮತಿ ಇಲ್ಲದೆ ಯಾರು ವರ್ಗಾವಣೆ ಮಾಡಿದ್ದಾರೆ ಎಂದು ಕೇಳಿದಾಗ, ಉನ್ನತ ಮಟ್ಟದಲ್ಲಿ ಈ ರೀತಿ ವರ್ಗಾವಣೆ ಮಾಡಲು ಅವಕಾಶ ಇದೆ. ಅನೇಕ ಶಾಸಕರು ತಮಗೆ ಬೇಕಾದವರನ್ನು ಬೇರೆ ಇಲಾಖೆಗೆ ಕಳಿಸಿಕೊಡಿ ಎಂದು ಒತ್ತಡ ಹಾಕುತ್ತಾರೆ. ನೀರಾವರಿ ಇಲಾಖೆಯಲ್ಲಿ ಕೆಲಸ ಮಾಡಲು ಎಂಜಿನಿಯರ್‌ಗಳು ಮುಂದೆ ಬರುತ್ತಿಲ್ಲ. ಈ ದೃಷ್ಟಿಯಿಂದ ನನ್ನ ಗಮನಕ್ಕೆ ತರದೇ ಯಾರನ್ನೂ ವರ್ಗಾವಣೆ ಮಾಡಬೇಡಿ ಎಂದು ಹೇಳಿದ್ದೇನೆ ಎಂದರು.

**ತಣ್ಣಗಾಗಿರುವ ಮುಂದಿನ ಸಿಎಂ ಚರ್ಚೆ**

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಪೂರ್ಣಗೊಳ್ಳುತ್ತಿದ್ದಂತೆ ಸಿಎಂ ಸ್ಥಾನ ಬದಲಾವಣೆ ಚರ್ಚೆ ಮುನ್ನೆಲೆಗೆ ಬಂದಿತ್ತು. ಸಿಎಂ ಸ್ಥಾನದ ತಲಾ 2.5 ವರ್ಷ ಹಂಚಿಕೆಯಾಗಿದೆ ಎಂಬ ಚರ್ಚೆಗಳು ಜೋರಿದ್ದವು. ಆದರೆ, ಕಾಂಗ್ರೆಸ್ ಹೈಕಮಾಂಡ್ ಮಧ್ಯಪ್ರವೇಶಿಸಿ ಎಲ್ಲಾವನ್ನೂ ತಣ್ಣಗಾಗಿಸಿತು. ಆ ಬಳಿಕ ಮುಂದಿನ ಸಿಎಂ ಯಾರು ಎಂಬ ಚರ್ಚೆ ಜೋರಾಗಿ ಸಿಎಂ ಬೆಂಬಲಿಗರು, ಡಿಕೆ ಶಿವಕುಮಾರ್ ಬೆಂಬಲಿಗರ ನಡುವೆ ವಾಕ್ಸಮರ ನಡೆದಿತ್ತು. ಈ ನಡೆಯನ್ನೂ ಆರಂಭದಲ್ಲಿ ಗಮನಿಸಿದ್ದ ಹೈಕಮಾಂಡ್ ಮತ್ತೊಮ್ಮೆ ಎಲ್ಲಾ ನಾಯಕರಿಗೆ ಬಾಯಿಮುಚ್ಚಿಕೊಂಡು ಕೆಲಸ ಮಾಡಿ ಎಂದು ಎಚ್ಚರಿಕೆ ನೀಡಿತ್ತು. ಸದ್ಯ ಮತ್ತೆ ಸಿಎಂ, ಡಿಸಿಎಂ ನಡುವೆ ಭಿನ್ನಾಭಿಪ್ರಾಯ ಜೋರಾಗಿದೆ.


## ದಕ್ಷಿಣ ಕನ್ನಡದ ಹಿರಿಯ ಐಪಿಎಸ್ ಅಧಿಕಾರಿಗಳ ಎತ್ತಂಗಡಿ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆದ ಸರಣಿ ಕೊಲೆ, ಕೋಮು ಸಂಘರ್ಷಗಳ ಬಳಿಕ ಕೊನೆಗೂ ರಾಜ್ಯ ಸರಕಾರ ಎಚ್ಚೆತ್ತುಕೊಂಡಿದೆ. ಮಂಗಳೂರು ನಗರ ಪೊಲೀಸ್ ಆಯುಕ್ತರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯನ್ನು ವರ್ಗಾವಣೆ ಮಾಡಿ ಗುರುವಾರ ಆದೇಶ ಹೊರಡಿಸಿದೆ. ಭಾರೀ ಆರೋಪ ಎದುರಿಸುತ್ತಿದ್ದ ಹಾಗೂ ಹಲವು ಸ್ಥಳೀಯ ಸಂಘಟನೆಗಳ ಕೆಂಗಣ್ಣಿಗೂ ಗುರಿಯಾಗಿದ್ದ ಮಂಗಳೂರು ನಗರ ಪೊಲೀಸ್ ಆಯುಕ್ತ, 2008ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿ ಅನುಪಮ್ ಅಗರವಾಲ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಆರ್ಥಿಕ ಅಪರಾಧಗಳು, ಅಪರಾಧ ತನಿಖಾ ಇಲಾಖೆ ಡಿಐಜಿ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ. ಈ ಹುದ್ದೆಯಲ್ಲಿದ್ದ ವಂಶಿ ಕೃಷ್ಣ ಅವರಿಗೆ ಜವಾಬ್ದಾರಿಯಿಂದ ಬಿಡುಗಡೆ ನೀಡಲಾಗಿದೆ.

**ಸುಧೀರ್ ಕುಮಾರ್ ರೆಡ್ಡಿ ಹೊಸ ಕಮಿಷನರ್:** ಮಂಗಳೂರು ನಗರ ಪೊಲೀಸ್ ಆಯುಕ್ತರನ್ನಾಗಿ ಗುಪ್ತಚರ ವಿಭಾಗದ ಡಿಐಜಿ ಸುಧೀರ್ ಕುಮಾರ್ ರೆಡ್ಡಿ ಅವರನ್ನು ನೇಮಕ ಮಾಡಲಾಗಿದೆ. ಇವರು 2010ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದಾರೆ.

**ಉಡುಪಿ ಎಸ್‌ಪಿ ಇನ್ಮುಂದೆ ದಕ್ಷಿಣ ಕನ್ನಡ ಎಸ್‌ಪಿ:** ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಎನ್ ಯತೀಶ್ ಅವರನ್ನು ವರ್ಗಾವಣೆ ಮಾಡಲಾಗಿದೆ. ಅವರ ಜಾಗಕ್ಕೆ ಉಡುಪಿ ಎಸ್‌ಪಿ ಡಾ.



ಅರುಣ್ ಕೆ ಅವರನ್ನು ಕರೆತರಲಾಗಿದೆ. ಇವರು 2014ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದಾರೆ. ಅರುಣ್ ಅವರಿಂದ ಖಾಲಿಯಾಗಿರುವ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹುದ್ದೆಗೆ ಗುಪ್ತಚರ ದಳದ ಎಸ್‌ಪಿ, 2017ನೇ ಬ್ಯಾಚ್‌ನ ಪೊಲೀಸ್ ಅಧಿಕಾರಿ ಹರಿರಾಮ್ ಶಂಕರ್ ಅವರನ್ನು ಕರೆತರಲಾಗಿದೆ. ಕುಡುಪು ಎಂಬಲ್ಲಿ ಅಶ್ರಫ್ ಕೊಲೆ ಪ್ರಕರಣ ನಿರ್ವಹಣೆಯಲ್ಲಿ ಪೊಲೀಸ್ ಇಲಾಖೆಯ ವೈಫಲ್ಯ, ಬಜಪೆಯಲ್ಲಿ ಸುಹಾಸ್ ಶೆಟ್ಟಿ ಕೊಲೆ ನಂತರ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆ ವೈಫಲ್ಯ ಕಂಡಿತ್ತು ಎಂಬ ಆರೋಪ ಕೇಳಿ ಬಂದಿತ್ತು. ಇದೇ ಹಿನ್ನೆಲೆಯಲ್ಲಿ ಕಾಂಗ್ರೆಸಿಗರಿಂದ ಪಕ್ಷಕ್ಕೆ ರಾಜೀನಾಮೆ ಪರ್ವ ಆರಂಭವಾಗಿತ್ತು. ಈ ಹಿನ್ನೆಲೆಯಲ್ಲಿ ಬೆಳಗ್ಗಿನಿಂದ ಸಭೆಗಳ ಹಿಂದೆ ಸಭೆಗಳು ನಡೆದು, ಸಂಜೆ ಅಧಿಕಾರಿಗಳ ತಲೆತಂಡವಾಗಿದೆ.

**ಬೆಳಗಾವಿ ಪೊಲೀಸ್ ಆಯುಕ್ತರನ್ನೂ ವರ್ಗಾವಣೆ ಮಾಡಿದ ಸರಕಾರ:** ಮಂಗಳೂರಿನ ಜೊತೆ ಬೆಳಗಾವಿ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬಾನ್ಯಾಂಗ್ ಅವರನ್ನೂ ವರ್ಗಾವಣೆ ಮಾಡಲಾಗಿದೆ. ಇವರ ಜಾಗಕ್ಕೆ ಸೈಬರ್ ಅಪರಾಧ ಮತ್ತು ಮಾದಕ ದ್ರವ್ಯ, ಕ್ರಿಮಿನಲ್ ಇನ್ವೆಸ್ಟಿಗೇಷನ್ ವಿಭಾಗದ ಡಿಐಜಿ ಬೊರಸೆ ಭೂಷಣ್ ಗುಲಾಬ್ರಾವ್ ಅವರನ್ನು ಕರೆ ತರಲಾಗಿದೆ. ಇವರು 2009ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದಾರೆ.

**ವಿಶೇಷ ಕಾರ್ಯಪಡೆ ರಚನೆ**

ಇದಲ್ಲದೆ ಕರಾವಳಿ ಭಾಗದಲ್ಲಿ ಹೆಚ್ಚುತ್ತಿರುವ ಕೋಮು ಹಿಂಸಾಚಾರ ತಡೆ ಪ್ರಯತ್ನವಾಗಿ ಹೊಸದಾಗಿ ವಿಶೇಷ ಕಾರ್ಯಪಡೆಯನ್ನು (ಸ್ಪೆಷಲ್ ಆಕ್ಷನ್ ಫೋರ್ಸ್- ಎಸ್‌ಎಎಫ್) ರಚಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದೆ. ಸದ್ಯದ ರಾಜ್ಯ ನಕ್ಸಲ್ ನಿಗ್ರಹ ಪಡೆಯಲ್ಲಿನ ಒಟ್ಟು 656 ಹುದ್ದೆಗಳಲ್ಲಿ 248 ಹುದ್ದೆಗಳನ್ನು ಬೇರ್ಪಡಿಸಿ ಈ ವಿಶೇಷ ಕಾರ್ಯಪಡೆಯನ್ನು ರಚಿಸಲಾಗಿದೆ. ಡಿಐಜಿಪಿ ನೇತೃತ್ವದ ಈ ಕಾರ್ಯಪಡೆ ಉಡುಪಿ, ದಕ್ಷಿಣ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದೊಂದು ತುಕಡಿಗಳನ್ನು ಹೊಂದಿರಲಿದ್ದು, ವಲಯ ಐಜಿಪಿ ನಿಯಂತ್ರಣದಲ್ಲಿ ವಿಶೇಷ ಕಾರ್ಯಪಡೆ ಕಾರ್ಯ ನಿರ್ವಹಿಸಲಿದೆ.

## ಮಳೆ ನೀರಿನ ಹರಿವಿಗೆ ತೊಡಕಾಗಿರುವ ಕಟ್ಟಡಗಳ ತೆರವು

• ಉದಯವಾಹಿನಿ, ಬೆಂಗಳೂರು

ಮಳೆ ನೀರು ಸರಾಗವಾಗಿ ಹರಿದು ಹೋಗುವುದಕ್ಕೆ ತೊಡಕಾಗಿರುವ ಕಟ್ಟಡಗಳನ್ನು ವಿಪತ್ತು ನಿರ್ವಹಣೆ ಕಾಯಿದೆಯಡಿ ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಉಪ ಮುಖ್ಯಮಂತ್ರಿ, ಡಿಕೆ ಶಿವಕುಮಾರ್ ತಿಳಿಸಿದರು. ನಗರದ ಮಾನ್ಯತಾ ಟೆಕ್‌ಪಾರ್ಕ್ ಬಳಿ ಪ್ರವಾಹ ಪರಿಸ್ಥಿತಿಗೆ ಕಾರಣವಾದ ರಾಜಕಾಲುವೆ ಹಾಗೂ ನಾಲೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಈಗಾಗಲೇ ನಾನು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಮಾಹಿತಿ ಪಡೆದಿದ್ದೇವೆ. ಮಾನ್ಯತಾ ಟೆಕ್‌ಪಾರ್ಕ್ ಬಹುಮುಖ್ಯ ಜಂಕ್ಷನ್ ಆಗಿದ್ದು, ಇಲ್ಲಿ ಸಮಸ್ಯೆ ಶುರುವಾಗಿ ಉಳಿದ ಪ್ರದೇಶಗಳಿಗೂ ವ್ಯಾಪಿಸುತ್ತಿದೆ. ಕೆಲವರು ತೆರವು ಕಾರ್ಯಕ್ಕೆ ನ್ಯಾಯಾಲಯದಿಂದ ತಡೆಯಾಜ್ಞೆ ತಂದು ಅಡ್ಡಿಪಡಿಸುತ್ತಿದ್ದಾರೆ. ಅಧಿಕಾರಿಗಳಿಗೂ ಸಹಕಾರ ನೀಡಿಲ್ಲ. ಹೀಗಾಗಿ, ಸಮಸ್ಯೆಗೆ ಕಾರಣವಾದ ಪ್ರದೇಶಗಳಲ್ಲಿ ವಿಪತ್ತು ನಿರ್ವಹಣಾ ಕಾಯಿದೆಯಡಿ ಕಟ್ಟಡಗಳನ್ನು ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ, ಎಂದು ಹೇಳಿದರು.

## ಕರ್ನಾಟಕದ 14 ಜಲಾಶಯಗಳಿಗೆ ವಾರಕ್ಕೆ ಹರಿದುಬಂತು 54 ಟಿಎಂಸಿ ನೀರು!


### ● ಕಬಿನಿ ಡ್ಯಾಂ ಮುಕ್ಕಾಲು, ನಾರಾಯಣಪುರ ಡ್ಯಾಂ ಅರ್ಧ ಭರ್ತಿ! ● ಜಲಾಶಯಗಳಲ್ಲಿ ನೀರಿನ ಸಂಗ್ರಹಮಟ್ಟ ಶೇಕಡಾ 33 ಕ್ಕೆ ಏರಿಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಕಳೆದ ಒಂದು ವಾರದಿಂದ ಸುರಿಯುತ್ತಿರುವ ಭಾರೀ ಮಳೆಯಿಂದ ರಾಜ್ಯದ 14 ಜಲಾಶಯಗಳಿಗೆ ಒಳ ಹರಿವು ಹೆಚ್ಚಳವಾಗಿದ್ದು, ಒಂದೇ ವಾರದಲ್ಲಿ 54 ಟಿಎಂಸಿ ನೀರು ಹರಿದು ಬಂದಿದೆ. ಇನ್ನು ಜಲಾಶಗಳಲ್ಲಿ ನೀರು ಸಂಗ್ರಹಮಟ್ಟವು 50 ಟಿಎಂಸಿ ಯಷ್ಟು ಹೆಚ್ಚಳವಾಗಿದೆ. ವಾಯುಭಾರ ಕುಸಿತ ಹಾಗೂ ಮುಂಗಾರು ಪ್ರವೇಶದಿಂದ ಕರ್ನಾಟಕದಲ್ಲಿ ಮೇ 23 ರಿಂದ ಜೋರು ಮಳೆಯಾಗುತ್ತಿದೆ. ಹೀಗಾಗಿ, ಕಾವೇರಿ, ಕೃಷ್ಣಾ, ತುಂಗಭದ್ರಾ, ಕಬಿನಿ, ಹೇಮಾವತಿ ನದಿಗಳಲ್ಲಿ ನೀರಿನಮಟ್ಟ ಹೆಚ್ಚಾಗಿ ಕೆಆರ್‌ಎಸ್, ಆಲಮಟ್ಟಿ, ಕಬಿನಿ, ನಾರಾಯಣಪುರ ಸೇರಿದಂತೆ ರಾಜ್ಯ ಜಲಾಶಯಗಳಿಗೆ ಹೆಚ್ಚಿನ ಪ್ರಮಾಣದ ನೀರು ಹರಿದುಬರುತ್ತಿದೆ.

ಮುಂಗಾರು ಆರಂಭದ ದಿನಗಳಲ್ಲಿಯೇ ಮಳೆ ಉತ್ತಮವಾಗಿ ಜಲಾಶಯಕ್ಕೆ ನೀರು ಬರುತ್ತಿರುವುದು ರೈತರ ಮೊಗದಲ್ಲಿ ಸಂತಸ ಮೂಡಿಸಿದೆ.

| ಜಲಾನಯನ ಪ್ರದೇಶದಿ ಡ್ಯಾಂಗಳಿಗೆ ಒಳಹರಿವು | |
|---|---|
| ಕೃಷ್ಣಾ ಜಲಾನಯನ ಪ್ರದೇಶದ ಡ್ಯಾಂಗಳಿಗೆ | 27 ಟಿಎಂಸಿ |
| ಕಾವೇರಿ ಜಲಾನಯನ ಪ್ರದೇಶ ಡ್ಯಾಂಗಳಿಗೆ | 19 ಟಿಎಂಸಿ |
| ಇತರೆ ಜಲಾಶನಯನ ಪ್ರದೇಶಕ್ಕೆ | 8 ಟಿಎಂಸಿ |
| ಒಟ್ಟು ಹರಿದು ಬಂದ ನೀರು | 54 ಟಿಎಂಸಿ |



**ಜಲಾಶಯದಲ್ಲಿ ನೀರು ಸಂಗ್ರಹ**

● ಲಿಂಗನಮಕ್ಕಿ - 23 % ● ಸೂಪಾ - 28 % ● ವರಾಹಿ - 28 % ● ಭದ್ರಾ - 37 % ● ತುಂಗಭದ್ರಾ - 12% ● ಘಟಪ್ರಭಾ - 19 % ● ಮಲಪ್ರಭಾ - 28 % ● ಆಲಮಟ್ಟಿ - 37 % ● ನಾರಾಯಣಪುರ - 60 % ● ಹಾರಂಗಿ - 43 % ● ಹೇಮಾವತಿ - 62 % ● ಕೆಆರ್‌ಎಸ್ - 43 % ● ಕಬಿನಿ - 73 % ● ವಾಣಿವಿಲಾಸ ಸಾಗರ - 84 % ● 14 ಜಲಾಶಯಗಳಲ್ಲಿ ಒಟ್ಟಾರೆ - 33 %

**ಒಂದೇ ವಾರಕ್ಕೆ 54 ಟಿಎಂಸಿ ನೀರು ಜಲಾಶಯ ಸೇರಿದೆ:** ಜೂನ್ 23 ರಿಂದ 29 ರ ನಡುವೆ ಕರ್ನಾಟಕದ 14 ಜಲಾಶಯಗಳಿಗೆ ಒಟ್ಟು 54 ಟಿಎಂಸಿ ನೀರು ಬಂದು ಸೇರಿದೆ. ಈ ಪೈಕಿ ನಾಲ್ಕೈದು ಟಿಎಂಸಿ ವಿವಿಧ ಉದ್ದೇಶಗಳಿಂದ ನೀರು ಹೊರಹೋಗಿದೆ. ಉಳಿದಂತೆ 50 ಟಿಎಂಸಿ ಜಲಾಶಯಗಳಲ್ಲಿ ಸಂಗ್ರವಾಗಿದೆ.

**ಜಲಾಶಯಗಳಲ್ಲಿ ಶೇಕಡಾ33 ರಷ್ಟು ನೀರು ಸಂಗ್ರಹ:** ಕೆಎಸ್‌ಎನ್‌ಡಿಎಂಸಿ ಪ್ರಕಾರ ಕರ್ನಾಟಕದ ಜಲಾಶಯಗಳಲ್ಲಿ ಗುರುವಾರಕ್ಕೆ (ಮೇ 29) 298 ಟಿಎಂಸಿ ನೀರು ಸಂಗ್ರಹವಾಗಿದೆ. ಒಟ್ಟಾರೆ ನೀರು ಸಂಗ್ರಹ ಸಾಮರ್ಥ್ಯವು 895 ಟಿಎಂಸಿಯಾಗಿದ್ದು, ಸದ್ಯ ಶೇಕಡಾ 33 ರಷ್ಟು ನೀರು ಸಂಗ್ರಹವಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,704/Gram24ct ₹8,895/Gram22ct ಬೆಳ್ಳಿ: ₹99.90/Gram

## ಭರತನಾಟ್ಯ ರಂಗಪ್ರವೇಶ



• ಉದಯವಾಹಿನಿ, ಬೆಂಗಳೂರು

ನಾಟ್ಯೇಶ್ವರ ನೃತ್ಯ ಶಾಲೆ ಮತ್ತು ನೃತ್ಯ ಕುಟೀರ ಇವುಗಳ ಸಂಯುಕ್ತಾಶ್ರಯದಲ್ಲಿ ಮೇ 31, ಶನಿವಾರ ಸಂಜೆ 4–30ಕ್ಕೆ ಕು|| ಕೆ. ಹರಿಣಿ (ಕಲಾ ಯೋಗಿ ಶ್ರೀ ಕೆ.ಪಿ. ಸತೀಶ್ ಬಾಬು ಇವರ ಶಿಷ್ಯೆ), ಕು|| ಕೆ. ಪ್ರಗತಿ (ವಿದುಷಿ ಲಿಖಿತಾ ಯು.ಕೆ. ಇವರ ಶಿಷ್ಯೆ) ಇವರುಗಳ ಭರತನಾಟ್ಯ ರಂಗಪ್ರವೇಶ. ಮುಖ್ಯ ಅತಿಥಿಗಳು : ಶ್ರೀಮತಿ ರೇಖಾ ಜಗದೀಶ್ (ನಿರ್ದೇಶಕರು : ಶ್ರೀ ಲಲಿತ ಕಲಾ ನಿಕೇತನ), ಶ್ರೀ ರಘುನಂದನ್ (ನಿರ್ದೇಶಕರು : ಕೇಶವ ನೃತ್ಯ ಮತ್ತು ಸಂಗೀತ ಕಾಲೇಜು), ಡಾ|| ಮಾನಸಿ ರಘುನಂದನ್ (ನಿರ್ದೇಶಕರು : ಅಭಿವ್ಯಕ್ತಿ ಕಲ್ಚರಲ್ ಟ್ರಸ್ಟ್). ಸ್ಥಳ : ಶ್ರೀಕೃಷ್ಣದೇವರಾಯ ಕಲಾ ಭವನ, (ತೆಲುಗು ವಿಜ್ಞಾನ ಸಮಿತಿ), ಮಲ್ಲೇಶ್ವರಂ, ಬೆಂಗಳೂರು

## ನನ್ನಿಷ್ಟ ನನ್ನ ಗಾಡಿ, ದಂಡ ಕಟ್ಟಲ್ಲ, ನೀವ್ಯಾರು ಕೇಳೋಕೆ

• ಉದಯವಾಹಿನಿ, ಬೆಂಗಳೂರು

ಹೆಲ್ಮೆಟ್ ಧರಿಸದಕ್ಕೆ ಸ್ಕೂಟಿ ತಡೆದ ಟ್ರಾಫಿಕ್ ಪೊಲೀಸರಿಗೆ ಮಹಿಳೆಯೊಬ್ಬರು ಅವಾಜ್ ಹಾಕಿರುವ ಘಟನೆ ಬೆಂಗಳೂರಿನ ಮಾಗಡಿ ರಸ್ತೆ ಸಂಚಾರಿ ಠಾಣೆಯ ಮುಂಭಾಗ ನಡೆದಿದೆ. ಮಾಗಡಿ ರೋಡ್‌ನಲ್ಲಿ ಸ್ಕೂಟಿ ಸವಾರೆ, ತನ್ನ ಸ್ನೇಹಿತೆ ಜೊತೆ ಬರುತ್ತಿದ್ದರು. ಈ ವೇಳೆ ಸ್ಕೂಟಿ ಸವಾರೆ ಹೆಲ್ಮೆಟ್ ಹಾಕಿದ್ರೆ, ಹಿಂದೆ ಕುಳಿತಿದ್ದ ಸ್ನೇಹಿತೆ ಹೆಲ್ಮೆಟ್ ಹಾಕಿರಲಿಲ್ಲ. ಇದನ್ನು ಗಮನಿಸಿದ ಟ್ರಾಫಿಕ್ ಪೊಲೀಸರು ಸ್ಕೂಟಿ ಅಡ್ಡಗಟ್ಟಿ, ದಂಡ ಕಟ್ಟುವಂತೆ ಹೇಳಿದ್ದಾರೆ. ಆಗ ನಾನು ಫೈನ್ ಕಟ್ಟಲ್ಲ. ನನ್ನಿಷ್ಟ ನನ್ನ ಗಾಡಿ, ನೀವ್ಯಾರು ಕೇಳೋಕೆ ಎಂದು ಟ್ರಾಫಿಕ್ ಪೊಲೀಸರೊಂದಿಗೆ ಮಹಿಳೆ ಗಲಾಟೆ ಮಾಡಿದ್ದಾರೆ. ಫೈನ್ ಚೆಕ್ ಮಾಡಿದ ಪೊಲೀಸರಿಗೆ 15,000 ರೂ. ದಂಡ ಇದೆ ಎಂದು ಗೊತ್ತಾಗಿದೆ. ಈ ವೇಳೆ 500 ರೂ. ದಂಡ ಕಟ್ಟುವಂತೆ ಪೊಲೀಸರು ಗಾಡಿ ಹಿಡಿದು ನಿಲ್ಲಿಸಿದ್ದರು. ಆದರೆ ಮಹಿಳೆ ಗಲಾಟೆ ಮಾಡಿ, ಗಾಡಿ ತೆಗೆದುಕೊಂಡು ಪರಾರಿಯಾಗಿದ್ದಾರೆ. ಸದ್ಯ ಮಹಿಳೆ ವಿರುದ್ಧ ಮಾಗಡಿ ಟ್ರಾಫಿಕ್ ಪೊಲೀಸರು ಹೆಲ್ಮೆಟ್ ರಹಿತ ಚಾಲನೆ ದಂಡ ವಿಧಿಸಿರುವ ಬಗ್ಗೆ ಮಾಹಿತಿ ದೊರೆತಿದೆ.

## ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ 28 ವರ್ಷದ ನೃತ್ಯ ಶಿಕ್ಷಕನ ಬಂಧನ

• ಉದಯವಾಹಿನಿ, ಬೆಂಗಳೂರು

ತನ್ನ ಕಾರಿನಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ 28 ವರ್ಷದ ನೃತ್ಯ ಶಿಕ್ಷಕನನ್ನು ಬಂಧಿಸಲಾಗಿದೆ ಎಂದು ಬೆಂಗಳೂರಿನಲ್ಲಿ ಪೊಲೀಸರು ಗುರುವಾರ ತಿಳಿಸಿದ್ದಾರೆ. ಮೇ 24 ರಂದು ಕಾಡುಗೋಡಿ ಪ್ರದೇಶದಲ್ಲಿ ಈ ಘಟನೆ ನಡೆದಿತ್ತು. ಭಾರತಿ ಕಣ್ಣನ್ ಬಂಧಿತ ಆರೋಪಿ. ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಸಂತ್ರಸ್ತೆಯ ಬಳಿ ಕಾರು ನಿಲ್ಲಿಸಿದ್ದಾನೆ, ನಂತರ ತಾನು ನೃತ್ಯ ಶಿಕ್ಷಕ ಎಂದು ಪರಿಚಯಿಸಿಕೊಂಡು ನೃತ್ಯ ತರಗತಿಗಳ ಬಗ್ಗೆ ವಿವರಗಳನ್ನು ವಿವರಿಸುವ ನೆಪದಲ್ಲಿ ಆಕೆಯನ್ನು ಕಾರಿಗೆ ಹತ್ತಿಸಿಕೊಂಡಿದ್ದಾನೆ. ಸಂತ್ರಸ್ತೆ ಕಾರು ಹತ್ತುತ್ತಿದ್ದಂತೆ, ಆರೋಪಿ ಬಾಗಿಲುಗಳನ್ನು ಲಾಕ್ ಮಾಡಿ ಸ್ವಲ್ಪ ದೂರ ಹೋಗಿದ್ದಾನೆ. ಈ ಸಮಯದಲ್ಲಿ, ಅವನು ಹುಡುಗಿಯ ಜೊತೆ ಅನುಚಿತವಾಗಿ ವರ್ತಿಸಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸ್ವಲ್ಪ ಸಮಯದ ನಂತರ ಕಣ್ಣನ್, ಸಂತ್ರಸ್ತೆಯನ್ನು ತಾನು ಕರೆದುಕೊಂಡು ಹೋದ ಸ್ಥಳದಲ್ಲೇ ಇಳಿಸಿದ್ದಾನೆ. ಸಂತ್ರಸ್ತೆ ಮನೆಗೆ ತಲುಪಿದ ನಂತರ, ಘಟನೆಯ ಬಗ್ಗೆ ತನ್ನ ಪೋಷಕರಿಗೆ ತಿಳಿಸಿದ್ದಾಳೆ. ಅದಾದ ಮೇಲೆ ಅವರು ದೂರು ದಾಖಲಿಸಿದ್ದರು, ನಂತರ, ಕಣ್ಣನ್ ನನ್ನು ಬಂಧಿಸಲಾಯಿತು ಎಂದು ವಿವರಿಸಿದ್ದಾರೆ.



## ವೀರ ಸಾವರ್ಕರ್ ಜಯಂತ್ಯುತ್ಸವ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಯಲಹಂಕ

ಬಿಜೆಪಿ ನಗರಮಂಡಲ, ಸಂಘಪರಿವಾರದ ಸಹಯೋಗದೊಂದಿಗೆ ಶಾಸಕ ಎಸ್. ಆರ್. ವಿಶ್ವನಾಥ್ ನೇತೃತ್ವದಲ್ಲಿ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಅವರ 142ನೇ ಜಯಂತ್ಯುತ್ಸವವನ್ನು ಉಪನಗರದಲ್ಲಿ ಆಚರಿಸಲಾಯಿತು.ವೀರಸಾವರ್ಕರ್ ಅವರ ಭಾವಚಿತ್ರವನ್ನು ರಥದಲ್ಲಿಟ್ಟು ಪೂಜೆ ನೆರವೇರಿದ ಬಳಿಕ ಜ್ಞಾನಜ್ಯೋತಿ ಕಾಲೇಜಿನಿಂದ ಆರಂಭವಾದ ಮೆರವಣಿಗೆಯು, ಚಿಕ್ಕಬೊಮ್ಮಸಂದ್ರ ಕ್ರಾಸ್, ಮದರ್ ಡೈರಿ ಕ್ರಾಸ್ ಮೂಲಕ ವೀರ ಸಾವರ್ಕರ್ ಮೇಲೇತುವೆಯವರೆಗೆ ಸಾಗಿತು. ಎಸ್. ಆರ್.ವಿಶ್ವನಾಥ್ ಮಾತನಾಡಿ, ಬಾಲ್ಯದಲ್ಲಿಯೇ ಬಾಲಗಂಗಾಧರ ತಿಲಕ್ ಅವರ ಪ್ರೇರಣೆಯಿಂದ ಸ್ವಾತಂತ್ರ್ಯ ಹೋರಾಟದ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದ ಸಾವರ್ಕರ್ ಅವರು, ತಮ್ಮ ಕ್ರಾಂತಿಕಾರಿ ಹೋರಾಟದ ಮೂಲಕ ಬ್ರಿಟಿಷರನ್ನು ದೇಶದಿಂದ ತೊಲಗಿಸಲು ಮಾಡಿದ್ದ ಸಂಕಲ್ಪ ಸದಾ ಸ್ಫೂರ್ತಿಯಾಗಿದೆ ಎಂದರು. ಬಿಜೆಪಿ ಮುಖಂಡರಾದ ಎಸ್.ಎನ್.ರಾಜಣ್ಣ, ದಿಟ್ಟೂರು ಜಯಣ್ಣ, ಸತೀಶ್ ಕಡತನಮಲೆ, ಚೊಕ್ಕನಹಳ್ಳಿ ವೆಂಕಟೇಶ್, ಅಲೋಕ್ ವಿಶ್ವನಾಥ್, ಡಿ.ಜಿ.ಅಪ್ಪಯ್ಯಣ್ಣ, ಈಶ್ವರ್, ಎಂ.ಮಂಜುನಾಥ್, ಎಂ.ಮುನಿರಾಜು, ಪವನ್‌ಕುಮಾರ್.ವಿ. ಮಧುಸೂದನ್, ಮುರಾರಿರಾಮು ಉಪಸ್ಥಿತರಿದ್ದರು.

## ಬಿಬಿಎಂಪಿ ಶಾಲಾ, ಕಾಲೇಜು ಇಂದಿನಿಂದ ಪ್ರಾರಂಭ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿಯ ಶಿಶುವಿಹಾರ, ಪ್ರಾಥಮಿಕ ಶಾಲೆ, ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು, ಪದವಿ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳು ಮೇ 29ರಿಂದ ಪ್ರಾರಂಭವಾಗಲಿವೆ ಎಂದು ಶಿಕ್ಷಣ ವಿಭಾಗದ ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್ ತಿಳಿಸಿದರು 2025–26ನೇ ಶೈಕ್ಷಣಿಕ ಸಾಲಿನ ವಿವಿಧ ತರಗತಿಗಳಿಗೆ ಪ್ರವೇಶ ಪ್ರಾರಂಭವಾಗಿದ್ದು, ಜೂನ್ 20ರವರೆಗೆ ನಡೆಯಲಿದೆ ಎಂದರು. ಬಿಬಿಎಂಪಿ ಶಾಲಾ, ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತವಾಗಿ ನೋಟ್ ಪುಸ್ತಕಗಳು, ಪಠ್ಯ ಪುಸ್ತಕಗಳು, ಸಮವಸ್ತ್ರಗಳು, ಶೂ ಮತ್ತು ಕಾಲುಚೀಲ, ಬ್ಯಾಗ್, ಸ್ವೆಟರ್ ಸಿಗಲಿವೆ. ಮಧ್ಯಾಹ್ನ ಬಿಸಿಯೂಟ (ಶಿಶುವಿಹಾರ, ಪದವಿ ಪೂರ್ವ ಕಾಲೇಜು, ಪದವಿ ಹಾಗೂ ಸ್ನಾತಕೋತ್ತರ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ) ಬಿಸಿ ಹಾಲು, ಮೊಟ್ಟೆ, ಬಾಳೆಹಣ್ಣು ಹಾಗೂ ಚಿಕ್ಕಿ (ಶಿಶುವಿಹಾರ ಶಾಲಾ ಮಕ್ಕಳಿಗೆ), ಮಕ್ಕಳ ಆಟಿಕೆಗಳು (ಶಿಶುವಿಹಾರ ಶಾಲಾ ಮಕ್ಕಳಿಗೆ), ಆಸೀನರಾಗಲು ಮ್ಯಾಟ್‌ಗಳು (ಶಿಶುವಿಹಾರ ಶಾಲಾ ಮಕ್ಕಳಿಗೆ), ಉನ್ನತ ಶಿಕ್ಷಣ ಒದಗಿಸಲು ಸ್ಮಾರ್ಟ್ ತರಗತಿ. ಗಣಕಯಂತ್ರ ತರಬೇತಿ (ಕಂಪ್ಯೂಟರ್ ಲ್ಯಾಬ್) ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು. ಎಸ್‌ಎಸ್‌ಎಲ್‌ಸಿಯಲ್ಲಿ ಅತ್ಯುನ್ನತ ಶ್ರೇಣಿ (ಶೇ 85) ಪಡೆದ ವಿದ್ಯಾರ್ಥಿಗಳಿಗೆ ತಲಾ ರೂ,25 ಸಾವಿರ, ದ್ವಿತೀಯ ಪಿಯುಸಿಯಲ್ಲಿ ಅತ್ಯುನ್ನತ ಶ್ರೇಣಿ ಪಡೆದ ವಿದ್ಯಾರ್ಥಿಗಳಿಗೆ ತಲಾ ರೂ.35 ಸಾವಿರ ಪ್ರೋತ್ಸಾಹ ಧನ ನೀಡಲಾಗುತ್ತದೆ ಎಂದರು.

# ಗಲಭೆ ಸೇರಿ 43 ಕೇಸ್ ವಾಪಸ್ ಆದೇಶ ರದ್ದುಗೊಳಿಸಿದ ಹೈಕೋರ್ಟ್

### ಸರ್ಕಾರದ ಈ ಆದೇಶವನ್ನು ಪ್ರಶ್ನಿಸಿ ಗಿರೀಶ್ ಭಾರದ್ವಾಜ್ ಎಂಬವರು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

2022ರಲ್ಲಿ ಹಳೇ ಹುಬ್ಬಳ್ಳಿಯಲ್ಲಿ ನಡೆದಿದ್ದ ಗಲಭೆ ಪ್ರಕರಣ ಸೇರಿದಂತೆ 43 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆದಿದ್ದ ರಾಜ್ಯ ಸರ್ಕಾರದ ಆದೇಶವನ್ನು ಕರ್ನಾಟಕ ಹೈಕೋರ್ಟ್ ಗುರುವಾರ ರದ್ದುಗೊಳಿಸಿದೆ. ಇದರಿಂದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ತೀವ್ರ ಹಿನ್ನಡೆಯಾಗಿದೆ.

ಹುಬ್ಬಳ್ಳಿ ಗಲಭೆ ಸೇರಿದಂತೆ 43 ಪ್ರಕರಣಗಳನ್ನು ವಾಪಸ್ ಪಡೆಯಲು ರಾಜ್ಯ ಸಚಿವ ಸಂಪುಟದಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿತ್ತು. ಅದರಂತೆ ಅಕ್ಟೋಬರ್ 2024ರಲ್ಲಿ ಮಾಜಿ ಸಚಿವರು, ಮಾಜಿ ಶಾಸಕರು, ವಿವಿಧ ಸಂಘಟನೆಗಳ ಹೋರಾಟಗಾರರು ಮತ್ತು ಪ್ರಭಾವಿ ಸಂಸ್ಥೆಗಳಿಗೆ ಸೇರಿದ ವ್ಯಕ್ತಿಗಳ ವಿರುದ್ಧದ 43 ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ಆದೇಶ ಹೊರಡಿಸಲಾಗಿತ್ತು.

ಸರ್ಕಾರದ ಈ ಆದೇಶವನ್ನು ಪ್ರಶ್ನಿಸಿ ಗಿರೀಶ್ ಭಾರದ್ವಾಜ್ ಎಂಬವರು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ಸಿಜೆ ಎನ್.ವಿ.ಅಂಜಾರಿಯಾ, ನ್ಯಾ. ಕೆ.ವಿ.ಅರವಿಂದ್ ಅವರಿದ್ದ ಹೈಕೋರ್ಟ್ ದ್ವಿಸದಸ್ಯ ಪೀಠ ರಾಜ್ಯ ಸರ್ಕಾರದ ಆದೇಶವನ್ನು ರದ್ದುಗೊಳಿಸಿ ಆದೇಶ ಹೊರಡಿಸಿದೆ.






ಸಾಮಾಜಿಕ ಮಾಧ್ಯಮದಲ್ಲಿ ವಿವಾದಾತ್ಮಕ ಪೋಸ್ಟ್ ವಿಷಯಕ್ಕೆ ಸಂಬಂಧಿಸಿದಂತೆ ಹಲವಾರು ಪೊಲೀಸ್ ಸಿಬ್ಬಂದಿಯ ಮೇಲೆ ಗುಂಪೊಂದು ದಾಳಿ ನಡೆಸಿ ಹಲ್ಲೆ ನಡೆಸಿದ್ದ 2022ರ ಹುಬ್ಬಳ್ಳಿ ಗಲಭೆ ಪ್ರಕರಣ ಸೇರಿದಂತೆ ಈ 43 ಪ್ರಕರಣಗಳಲ್ಲಿ ಕೆಲವು ಆರೋಪಿಗಳ ವಿರುದ್ಧ ಕಾನೂನುಬಾಹಿರ ಚಟುವಟಿಕೆಗಳ(ತಡೆಗಟ್ಟುವಿಕೆ) ಕಾಯ್ದೆ, 1967, ಸಾರ್ವಜನಿಕ ಆಸ್ತಿ ನಾಶ ತಡೆ ಕಾಯ್ದೆ, 1984 ಮತ್ತು ಧಾರ್ಮಿಕ ಸಂಸ್ಥೆ(ದುರುಪಯೋಗ ತಡೆ) ಕಾಯ್ದೆ, 1988ರ ಅಡಿಯಲ್ಲಿ ಗಂಭೀರ ಆರೋಪಗಳನ್ನು ಹೊರಿಸಲಾಗಿದೆ ಎಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿತ್ತು. ಅಕ್ಟೋಬರ್ 15, 2024 ರ ಸರ್ಕಾರಿ ಆದೇಶವು ಕ್ರಿಮಿನಲ್ ಪ್ರೊಸೀಜರ್ ಕೋಡ್‌ನ ಸೆಕ್ಷನ್ 321ರ ಉಲ್ಲಂಘನೆಯಾಗಿದೆ ಎಂದು ಅರ್ಜಿದಾರರು ವಾದಿಸಿದ್ದರು.

ಈ ನಿಬಂಧನೆಯು ನಿರ್ದಿಷ್ಟವಾಗಿ ಪ್ರಾಸಿಕ್ಯೂಟರ್‌ಗೆ ಮಾತ್ರ ಕಾನೂನು ಕ್ರಮದಿಂದ ಹಿಂದೆ ಸರಿಯಲು ಯಾವುದೇ ಕ್ರಮವನ್ನು ಪ್ರಾರಂಭಿಸುವ ಅಧಿಕಾರವನ್ನು ನೀಡುತ್ತದೆ.

ಆದ್ದರಿಂದ, ಈ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ಪ್ರಾಸಿಕ್ಯೂಟರ್ ನಿರ್ದೇಶನ ನೀಡುವ ಅಧಿಕಾರ ರಾಜ್ಯ ಸಚಿವ ಸಂಪುಟಕ್ಕೆ ಇಲ್ಲ ಎಂದು ಅರ್ಜಿದಾರರ ಪರ ವಕೀಲರು ವಾದಿಸಿದ್ದರು.



> ವಾದ-ಪ್ರತಿವಾದ ಆಲಿಸಿದ ಕೋರ್ಟ್, ಸಚಿವ ಸಂಪುಟದ ಕ್ರಮ ನಿಯಮಬಾಹಿರವಾಗಿದ್ದರೆ ಒಪ್ಪುವುದಿಲ್ಲ. ಪ್ರಕರಣಗಳನ್ನು ಹಿಂಪಡೆಯಲು ಅನುಮತಿ ನೀಡುವುದಿಲ್ಲ. ಅರ್ಜಿದಾರರ ಪರ ವಕೀಲರು ಪ್ರಭಾವಿ ವ್ಯಕ್ತಿಗಳೂ ಸೇರಿದಂತೆ ಕೆಲವು ರಾಜಕಾರಣಿಗಳ ವಿರುದ್ಧದ ಕ್ರಿಮಿನಲ್ ಪ್ರಕರಣಗಳನ್ನು ಅಪರಾಧ ದಂಡ ಸಂಹಿತೆ ಸೆಕ್ಷನ್ 321ಕ್ಕೆ ವಿರುದ್ಧವಾಗಿ ಸರ್ಕಾರ ಹಿಂಪಡೆದಿದೆ ಎಂದು ಹೇಳಿರುವುದು ಮೇಲ್ನೋಟಕ್ಕೆ ಸಮರ್ಥನೀಯವಾಗಿದೆ ಎಂದು ಹೇಳಿದೆ.

## ತಂಬಾಕು ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ

• ಉದಯವಾಹಿನಿ, ಬೆಂಗಳೂರು

ತಂಬಾಕು ವ್ಯಾಪಾರಿಗಳು ಬಿಬಿಎಂಪಿಯಿಂದ ಲೈಸೆನ್ಸ್ ಪಡೆಯುವುದು ಕಡ್ಡಾಯವಾಗಿದ್ದು, ಪರವಾನಗಿ ಇಲ್ಲದೆ ತಂಬಾಕು ಮಾರಾಟ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಬೆಂಗಳೂರು ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು, ಮೇ 31 ರಂದು ವಿಶ್ವ ಧೂಮಪಾನ ನಿಷೇಧ ದಿನದ ಪ್ರಯುಕ್ತ ಸಾರ್ವಜನಿಕ ಆರೋಗ್ಯವನ್ನು ರಕ್ಷಿಸಲು, ತಂಬಾಕು ನಿಯಂತ್ರಣ ಕಾನೂನುಗಳ ಅನುಸರಣೆಯನ್ನು ಖಚಿತ ಪಡಿಸಿಕೊಳ್ಳಲು ನಗರ ಪೊಲೀಸರು ಬೆಂಗಳೂರಿನಾದ್ಯಂತ ಜಾಗೃತಿ ಅಭಿಯಾನ ಕಾರ್ಯಕ್ರಮಗಳನ್ನು ನಡೆಸಲಿದ್ದಾರೆಂದು ಹೇಳಿದರು.

ತಂಬಾಕು ಮುಕ್ತ ವಾತಾವರಣವನ್ನು ಉತ್ತೇಜಿಸಲು ಪ್ರಯತ್ನ ನಡೆಸಲಾಗುತ್ತಿದ್ದು, ಎಲ್ಲಾ ತಂಬಾಕು ವ್ಯಾಪಾರಿಗಳು ಮಾನ್ಯ ಪರವಾನಗಿಯನ್ನು ಹೊಂದಿರಬೇಕು. ಮೇ 27 ರಿಂದ ಜೂನ್ 2 ರವರೆಗೆ, ಪೊಲೀಸ್ ಇಲಾಖೆ ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಕಾಯ್ದೆ, 2003 ಜಾರಿಗೊಳಿಸುವಿಕೆಯನ್ನು ತೀವ್ರಗೊಳಿಸಲಿದೆ.



ಉದಯವಾಹಿನಿ ಚಿತ್ರ

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ, ಅಪ್ರಾಪ್ತ ವಯಸ್ಕರಿಗೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದು ಮತ್ತು ಶಿಕ್ಷಣ ಸಂಸ್ಥೆಗಳ ಬಳಿ ತಂಬಾಕು ಮಾರಾಟ ಮಾಡುವುದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.

ಇಂತಹವರ ವಿರುದ್ಧ ಕೋಟ್ಪಾ ಕಾಯ್ದೆಯಡಿ ಪ್ರಕರಣ ದಾಖಲಿಸಲಿದ್ದಾರೆ ಎಂದು ತಿಳಿಸಿದರು. ತಂಬಾಕು ವ್ಯಾಪಾರಿಗಳು ಬಿಬಿಎಂಪಿಯಿಂದ ಲೈಸೆನ್ಸ್ ಪಡೆಯುವುದು ಕಡ್ಡಾಯವಾಗಿದೆ.

ಈ ಸಂಬಂಧ ಬಿಬಿಎಂಪಿ ಅಧಿಕಾರಿಗಳು ಪೊಲೀಸರು ವ್ಯಾಪಾರಿಕ ಪ್ರದೇಶಗಳಲ್ಲಿ ಜಾಗೃತಿ ಮೂಡಿಸಲಿದ್ದಾರೆ.

ತಂಬಾಕು ಮಾರಾಟ ಲೈಸೆನ್ಸ್ ಪಡೆಯುವ ಅಗತ್ಯತೆ ಪ್ರಕ್ರಿಯೆ ಬಗ್ಗೆ ಮಾರ್ಗದರ್ಶನ ನೀಡಲಿದ್ದಾರೆ ಎಂದು ತಿಳಿಸಿದರು. ಶೀಘ್ರ ಟೋಯಿಂಗ್ ರೂಪುರೇಷೆ ಸಿದ್ಧ ನಗರದಲ್ಲಿ ಟೋಯಿಂಗ್ ಮರು ಜಾರಿ ಸಂಬಂಧ ಸರ್ಕಾರದ ಮಟ್ಟದಲ್ಲಿ ಚರ್ಚೆಯಾಗುತ್ತಿದೆ. ನಮ್ಮದೇ ವಾಹನಗಳನ್ನು ಬಳಸಬೇಕಾ ಅಥವಾ ಹೊಸ ವಾಹನ ಖರೀದಿಸಿ ಟೋಯಿಂಗ್ ಮಾಡಬೇಕಾ ಎಂಬುದು ಇನ್ನೂ ತೀರ್ಮಾನವಾಗಿಲ್ಲ. ಶೀಘ್ರದಲ್ಲೇ ಅದರ ರೂಪುರೇಷೆಗಳು ಸಿದ್ಧವಾಗಬೇಕಿದೆ. ಶೀಘ್ರದಲ್ಲೇ ನಗರದ ಸಂಚಾರ ದಟ್ಟಣೆ ಹೆಚ್ಚಿರುವ ರಸ್ತೆಗಳಲ್ಲಿ ಟೋಯಿಂಗ್ ಮರು ಜಾರಿಯಾಗಲಿದೆ ಎಂದು ಇದೇ ವೇಳೆ ತಿಳಿಸಿದರು.

> ಇ-ಸಿಗರೇಟ್‌ಗಳು ಮತ್ತು ವೇಪಿಂಗ್ ಸಾಧನಗಳನ್ನು ಒಳಗೊಂಡ ಎಲೆಕ್ಟ್ರಾನಿಕ್ ನಿಕೋಟಿನ್ ಡೆಲಿವರಿ ಸಿಸ್ಟಮ್‌ಗಳ ನಿಷೇಧ ಸಂಬಂಧ ಮಾಲ್‌ಗಳು, ಕಾಫಿ ಬಾರ್‌ಗಳು ಮತ್ತು ಅಂಗಡಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಲಾಗುವುದು. ನಿಷೇಧಿತ ಹುಕ್ಕಾ ಬಾರ್‌ಗಳ ವಿರುದ್ಧ ಈಗಾಗಲೇ ಕ್ರಮ ಕೈಗೊಳ್ಳಲಾಗುತ್ತಿದೆ. ಇದೀಗ ಅಂತಹ ಅಕ್ರಮ ಸ್ಥಳಗಳನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಲಾಗುವುದು ಎಂದರು.

## ಬಿಜೆಪಿ ಮುಖಂಡನ ಮೇಲೆ ಹಲ್ಲೆ ಪ್ರಕರಣ

• ಉದಯವಾಹಿನಿ, ಬೆಂಗಳೂರು

ಪಶ್ಚಿಮ ಬಂಗಾಳದಲ್ಲಿ 2024ರ ಆಗಸ್ಟ್ 28ರಂದು ನಡೆದಿದ್ದ ಗುಂಪು ಘರ್ಷಣೆ ವೇಳೆ, ಅಲ್ಲಿನ ಬಿಜೆಪಿ ಮುಖಂಡ ಪ್ರಿಯಾಂಗು ಪಾಂಡೆ ಅವರ ಮೇಲೆ ಹಲ್ಲೆ ನಡೆಸಿ ತಲೆಮರೆಸಿಕೊಂಡಿದ್ದ ಪ್ರಮುಖ ಆರೋಪಿ ಮೋಹಿತ್ ಮಹಾತೋ ಅಲಿಯಾಸ್ ಸಾಹಿಲ್ ಎಂಬಾತನನ್ನು ರಾಷ್ಟ್ರೀಯ ತನಿಖಾ ದಳದ (ಎನ್‌ಐಎ) ಅಧಿಕಾರಿಗಳು, ಬೆಂಗಳೂರಿನಲ್ಲಿ ಬಂಧಿಸಿದ್ದಾರೆ.

ಖಚಿತ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಲಾಯಿತು. ಆರೋಪಿಯಿಂದ ಮೊಬೈಲ್ ಸೇರಿ ವಿವಿಧ ವಸ್ತುಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ. ತನಿಖೆ ಮುಂದುವರಿದಿದೆ ಎಂದು ಎನ್‌ಐಎ ತಿಳಿಸಿದೆ. ಮಾಜಿ ಸಂಸದ ಅರ್ಜುನ್ ಸಿಂಗ್ ಅವರ ನಿವಾಸಕ್ಕೆ ಪ್ರಿಯಾಂಗು ಪಾಂಡೆ ಮತ್ತು ಅವರ ಬೆಂಬಲಿಗರು ತೆರಳುತ್ತಿದ್ದ ವೇಳೆ ಗುಂಪೊಂದು ದಾಳಿ ನಡೆಸಿ ಹಲ್ಲೆ ಮಾಡಿತ್ತು. ಈ ಪ್ರಕರಣದಲ್ಲಿ ಇದುವರೆಗೂ 17 ಆರೋಪಿಗಳನ್ನು ಬಂಧಿಸಲಾಗಿದೆ. ಆರಂಭದಲ್ಲಿ ಪ್ರಕರಣದ ತನಿಖೆಯನ್ನು ಪಶ್ಚಿಮ ಬಂಗಾಳದ ಸ್ಥಳೀಯ ಪೊಲೀಸರೇ ನಡೆಸಿ 12 ಮಂದಿಯನ್ನು ಬಂಧಿಸಿದ್ದರು. ನಂತರ ಪ್ರಕರಣವನ್ನು ಎನ್‌ಐಎಗೆ ವರ್ಗಾವಣೆ ಮಾಡಲಾಗಿತ್ತು. ಎನ್‌ಐಎ ಅಧಿಕಾರಿಗಳು ಐವರನ್ನು ಬಂಧಿಸಿದ್ದರು.





ಉದಯವಾಹಿನಿ ಚಿತ್ರ

> ಕಳೆದ ನವೆಂಬರ್‌ನಲ್ಲಿ ಪ್ರಕರಣದ ತನಿಖೆಯನ್ನು ಎನ್‌ಐಎಗೆ ವರ್ಗಾವಣೆ ಮಾಡಲಾಗಿತ್ತು. ಪ್ರಕರಣದಲ್ಲಿ ಪಶ್ಚಿಮ ಬಂಗಾಳದ ನಿವಾಸಿಯಾದ ಸಾಹಿಲ್‌ನ ಪಿತೂರಿ ಇರುವುದು ತನಿಖೆಯಿಂದ ಗೊತ್ತಾಗಿತ್ತು. ಆತನನ್ನು ಬುಧವಾರ ಬೆಳಿಗ್ಗೆ ಬೆಂಗಳೂರಿನ ಸ್ಥಳವೊಂದರಲ್ಲಿ ವಶಕ್ಕೆ ಪಡೆದು ಬಂಧಿಸಲಾಯಿತು. ಪ್ರಕರಣದಲ್ಲಿ ಇದುವರೆಗೂ 14 ಆರೋಪಿಗಳ ವಿರುದ್ಧ ಎನ್‌ಐಎ ನ್ಯಾಯಾಲಯಕ್ಕೆ ಮೂರು ದೋಷಾರೋಪ ಪಟ್ಟಿ ಸಲ್ಲಿಸಲಾಗಿದೆ' ಎಂದು ಎನ್‌ಐಎ ತಿಳಿಸಿದೆ.

## ಸಿನಿಮಾ ಬಹಿಷ್ಕರಿಸುವುದು ಸ್ವಲ್ಪ ಜಾಸ್ತಿ ಆಯ್ತು ಅಲ್ಲವೇ ಎಂದ ನಟಿ

• ಉದಯವಾಹಿನಿ, ಬೆಂಗಳೂರು

ತಮಿಳಿನಿಂದ ಕನ್ನಡ ಹುಟ್ಟಿದ್ದು ಎಂದ ನಟ ಕಮಲ್ ಹಾಸನ್ ಪರವಾಗಿ ಮಾಜಿ ಸಂಸದೆ, ನಟಿ ರಮ್ಯಾ ಬ್ಯಾಟ್ ಬೀಸಿದ್ದಾರೆ. ಈ ಕುರಿತು ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಸ್ಟೋರಿಯೊಂದನ್ನ ಹಂಚಿಕೊಂಡಿದ್ದಾರೆ. ಕನ್ನಡ, ತಮಿಳು, ತೆಲುಗು ಮತ್ತು ಮಲಯಾಳಂ ಎಲ್ಲವೂ ದ್ರಾವಿಡ ಭಾಷೆಗಳ ಒಂದೇ ಕೊಡಿಯಡಿಯಲ್ಲಿ ಬರುತ್ತವೆ.

ಆದ್ರೆ ನಮ್ಮಲ್ಲಿನ ಕೆಲವು ಸಾಮಾನ್ಯತೆ ಮತ್ತು ಹಂಚಿಕೆಯಾಗಿರುವ ಭಾಷಾ ವಂಶಾವಳಿ ಬೇರೆ ಇರಬಹುದು. ಅವರೆಡೂ ಶ್ರೇಷ್ಠವಲ್ಲ. ಸಂಸ್ಕೃತ ಎಲ್ಲಾ ಭಾಷೆಗಳ ತಾಯಿ ಎಂದು ಭಾವಿಸುವವರಿಗೆ ನೀವು ಕೂಡ ತಪ್ಪಾಗಿ ಕಾಣಿಸುತ್ತಿದ್ದೀರಿ. ಏಕೆಂದರೆ ಸಂಸ್ಕೃತ ಇಂಡೋ ಆರ್ಯನ್ ಭಾಷೆ. ನಾವು ದ್ರಾವಿಡರು, ಎರಡೂ ಪಸ್ಪರ ಭಿನ್ನ. ಕಮಲ್ ಹಾಸನ್ ಅವರು ತಪ್ಪು ಮಾಡಿದ್ದಾರೆ ಆದ್ರೆ ಚಿತ್ರವನ್ನ ಬಹಿಷ್ಕರಿಸುವುದು ಸ್ವಲ್ಪ ಜಾಸ್ತಿ ಆಯ್ತು ಅಲ್ಲವೇ ಹಿಂದಿ ಹೇರಿಕೆಯ ವಿರುದ್ಧ ನಾವು ಒಂದಾಗಬೇಕು. ಅದಕ್ಕಾಗಿ ನಾವು ಮೊದಲು ಪರಸ್ಪರ ಗೌರವಿಸುವದನ್ನು ಕಲಿಯಬೇಕು ಎಂದು ತಮ್ಮ ಇನ್‌ಸ್ಟಾ ಸ್ಟೋರಿಯಲ್ಲಿ ಚಾರ್ಟ್ ಸಮೇತ ಹಂಚಿಕೊಂಡಿದ್ದಾರೆ. ಇನ್ನೂ ತಮಿಳಿನಿಂದ ಕನ್ನಡ ಹುಟ್ಟಿದೆ ಅನ್ನೋ ಕಮಲ್ ಹಾಸನ್ ವಿವಾದದಲ್ಲಿ ತಮಿಳುನಾಡಿನ ರಾಜಕಾರಣಿಗಳು ಮೂಗು ತೂರಿಸ್ತಿದ್ದಾರೆ. ವಿಸಿಕೆ ಪಕ್ಷದ ಮುಖ್ಯಸ್ಥ ತಿರುಮಾವಳವನ್, ತಮಿಳು ದ್ರಾವಿಡ ಭಾಷೆಯ ತಾಯಿ, ಈಗಾಗಲೇ ಇತಿಹಾಸದಿಂದ ಸಾಬೀತಾಗಿದೆ. ಇತಿಹಾಸ ತಜ್ಞರು ಕೂಡ ಇದನ್ನು ಸಾಬೀತುಪಡಿಸಿದ್ದಾರೆ. ಕಮಲ್ ಹಾಸನ್ ಹೇಳಿರೋ ಮಾತನ್ನು ಕನ್ನಡಿಗರು ಹಾಗೂ ಮಲಯಾಳಿಗಳು ಒಪ್ಪುತ್ತಿಲ್ಲ. ತಮಿಳು ಎಲ್ಲ ಭಾಷೆಗಳ ತಾಯಿ ಅನ್ನೋದು ಇತಿಹಾಸ. ಇದು ಸತ್ಯ ಅಂತ ತುಪ್ಪ ಸುರಿದಿದ್ದಾರೆ. ಆದರೆ, ಕಮಲ್ ಹಾಸನ್ ದುರಂಹಕಾರಿ, ವಿಷಬೀಜ ಬಿತ್ತುತ್ತಿದ್ದಾರೆ ಅಂತ ವಿಜಯೇಂದ್ರ ಖಂಡಿಸಿದ್ರೆ, ಕ್ಷಮೆ ಕೇಳಲೇಬೇಕು ಅಂತ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.




## ಕಸದ ಸೆಸ್ ಜೊತೆಗೆ ಬಳಕೆದಾರರ ಶುಲ್ಕ ಕೈಬಿಡುವಂತೆ ಬಿಜೆಪಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಜನತೆಯ ಮೇಲೆ ಪದೇ ಪದೇ ಬೆಲೆ ಏರಿಕೆಯ ಭಾರ ಹೊರಿಸಿ, ಸಾಮಾನ್ಯ ಜನರ ಬದುಕನ್ನು ರಾಜ್ಯ ಕಾಂಗ್ರೆಸ್ ಸರ್ಕಾರದ ಸಂಕಷ್ಟಕ್ಕೆ ತಳ್ಳುತ್ತಿದೆ ಎಂದು ಬಿಜೆಪಿ ಕಿಡಿಕಾರಿದ್ದು, ಕೂಡಲೇ ಕಸದ ಸೆಸ್ ಜೊತೆಗೆ ಬಳಕೆದಾರರ ಶುಲ್ಕ ವಿಧಿಸಿರುವ ನಿರ್ಧಾರವನ್ನು ಹಿಂಪಡೆಯಬೇಕೆಂದು ಆಗ್ರಹಿಸಿದೆ. ವಿಧಾನಮಂಡಲದ ಉಭಯ ಸದನಗಳ ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ ನೇತೃತ್ವದ ನಿಯೋಗವು ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್‌ಗಿರಿನಾಥ್ ಹಾಗೂ ಮುಖ್ಯ ಆಯುಕ್ತ ಎಂ.ಮಹೇಶ್ವರರಾವ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅಶೋಕ್ ಅವರು, ಬೆಂಗಳೂರಿನ ಜನರ ಮೇಲೆ ಕಾಂಗ್ರೆಸ್ ಸರ್ಕಾರ ಟನ್ನುಗಟ್ಟಲೆ ತೆರಿಗೆಯ ಭಾರವನ್ನು ಹೇರಿದೆ.



ಉದಯವಾಹಿನಿ ಚಿತ್ರ

ಈಗ ಕಸದಿಂದ ರಸ ತೆಗೆಯುವ ಸ್ಕೀಮ್ ಮಾಡಿದ್ದಾರೆ. ಇಡೀ ದೇಶದಲ್ಲಿ ಅತಿ ಹೆಚ್ಚು ಕಸದ ತೆರಿಗೆಯನ್ನು ಕಾಂಗ್ರೆಸ್ ವಿಧಿಸಿದೆ. ಕೆಂಪೇಗೌಡರು ನಾಡು ಕಟ್ಟಿದ ನಾಡಪ್ರಭು ಎಂಬ ಹೆಸರು ಪಡೆದಿದ್ದರೆ, ಕಾಂಗ್ರೆಸ್ ನಾಯಕರು ನಾಡನ್ನು ಹಾಳು ಮಾಡಿದವರು ಎಂಬ ಬಿರುದು ಪಡೆದಿದ್ದಾರೆ ಎಂದು ಟೀಕಿಸಿದರು. ಈ ಮೊದಲು ನಗರದಲ್ಲಿ ಸೆಸ್ ಇತ್ತು. ಈಗ ಇದರ ಜೊತೆಗೆ ಬಳಕೆದಾರರ ಶುಲ್ಕ ವಿಧಿಸಿದ್ದಾರೆ. ಸೆಸ್‌ನಿಂದಲೇ ಸುಮಾರು 7250 ಕೋಟಿ ಸಂಗ್ರಹವಾಗುತ್ತಿದೆ. ಕಸದ ಟೆಂಡರ್‌ನ ಮೌಲ್ಯವೇ ರೂ.147 ಕೋಟಿ ಆಗಿದ್ದು, ಜನರಿಂದ ಅತ್ಯಧಿಕ ಶುಲ್ಕ ವಸೂಲಿ ಮಾಡುತ್ತಿದ್ದಾರೆ. ಇನ್ನು ಬಳಕೆದಾರರ ಶುಲ್ಕವೂ ಸೇರಿದರೆ ರೂ.500ರಿಂದ 600 ಕೋಟಿ ಸಂಗ್ರಹವಾಗುತ್ತದೆ ಎಂದರು.

> ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್‌ಗಿರಿನಾಥ್ ಹಾಗೂ ಮುಖ್ಯ ಆಯುಕ್ತ ಎಂ.ಮಹೇಶ್ವರರಾವ್ ಅವರನ್ನು ಭೇಟಿ ಮಾಡಿದ ಬಿಜೆಪಿ ನಾಯಕರು. ಎರಡೂ ಶುಲ್ಕಗಳಿಂದ ಮನೆಗಳ ಬಾಡಿಗೆ ದರ ಹೆಚ್ಚಲಿದೆ. ವಾಣಿಜ್ಯ ಕಟ್ಟಡ, ಕಲ್ಯಾಣ ಮಂಟಪ, ಆಸ್ಪತ್ರೆ, ಶಾಲೆ, ಹೋಟೆಲ್‌ಗಳ ದರ ಹೆಚ್ಚಲಿದೆ. ಇದು ಕೇಂದ್ರ ಸರ್ಕಾರದ ಕಾಯ್ದೆ ಎಂದು ನೆಪ ಹೇಳುತ್ತಾರೆ. 2 ಬಗೆಯ ಶುಲ್ಕ ವಿಧಿಸಬೇಕೆಂದು ಕೇಂದ್ರ ಸರ್ಕಾರ ಎಲ್ಲೂ ಹೇಳಿಲ್ಲ ಎಂದರು.

## ಮೂವರು ಅಂತರರಾಜ್ಯ ಕಳ್ಳರ ಬಂಧನ: 550 ಗ್ರಾಂ ಚಿನ್ನಾಭರಣ ಜಪ್ತಿ

• ಉದಯವಾಹಿನಿ, ಬೆಂಗಳೂರು

ಬೀಗ ಹಾಕಿರುವ ಮನೆಗಳನ್ನು ಗುರಿಯಾಗಿಸಿ ಕಾರಿನ ಜಾಕ್‌ನಿಂದ ಕಿಟಕಿ ಮೀಟಿ ಚಿನ್ನ ಹಾಗೂ ನಗದು ಕಳ್ಳತನ ಮಾಡುತ್ತಿದ್ದ ಇಬ್ಬರು ಅಂತರರಾಜ್ಯ ಕಳ್ಳರು ಹಾಗೂ ಕದ್ದ ವಸ್ತುಗಳನ್ನು ಖರೀದಿಸುತ್ತಿದ್ದ ವ್ಯಕ್ತಿಯನ್ನು ಎಚ್‌ಎಎಲ್ ಠಾಣೆ ಪೊಲೀಸರು ಬಂಧಿಸಿದ್ದಾರೆ.ತಮಿಳುನಾಡಿನ ದಿನಕರನ್ (38) ರಘುರಾಮ್ (28) ಹಾಗೂ ಆರೋಪಿಗಳಿಂದ ಚಿನ್ನವನ್ನು ಖರೀದಿ ಸುತ್ತಿದ್ದ ಆರ್ಮುಗಮ್ (58) ಎಂಬುವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು.

ಬಂಧಿತರಿಂದ 50 ಲಕ್ಷ ಮೌಲ್ಯದ 550 ಗ್ರಾಂ ಚಿನ್ನಾಭರಣ ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು. ಎಚ್‌ಎಎಲ್ ಎಇಸಿಎಸ್ ಬಡಾವಣೆಯ ನಿವಾಸಿ ಕಮಲ್‌ಚರಣ್ ಪೀಠೋಪಕರಣ ಅಂಗಡಿ ನಡೆಸುತ್ತಿದ್ದಾರೆ. ಮಾರ್ಚ್ 4ರಂದು ಕುಟುಂಬ ಸಮೇತ ಚೆನ್ನೈಗೆ ಹೋಗಿದ್ದರು. ಆರೋಪಿಗಳು, ಇವರ ಮನೆಯ ಕಿಟಕಿಯ ಗ್ರಿಲ್ ಮುರಿದು ಒಳನುಗ್ಗಿ ಬೀರುವಿನಲ್ಲಿದ್ದ ರೂ.3 ಲಕ್ಷ ನಗದು ಹಾಗೂ ಚಿನ್ನಾಭರಣ ಕದ್ದು ಪರಾರಿ ಆಗಿದ್ದರು. ಕಮಲ್‌ಚರಣ್ ಅವರು ವಾಪಸ್ ಬಂದು ನೋಡಿದಾಗ ಕಳ್ಳತನ ನಡೆದಿರುವುದು ಗೊತ್ತಾಗಿತ್ತು.

ಕಮಲ್‌ಚರಣ್ ಅವರು ನೀಡಿದ ದೂರಿನ ಮೇರೆಗೆ ತನಿಖೆ ನಡೆಸಿ ಶಿಕಾರಿಪಾಳ್ಯದ ಆಟೋ ನಿಲ್ದಾಣದ ಬಳಿ ಆರೋಪಿ ದಿನಕರ್‌ನನ್ನು ವಶಕ್ಕೆ ಪಡೆದುಕೊಳ್ಳಲಾಯಿತು. ದಿನಕರ್ ನೀಡಿದ ಮಾಹಿತಿ ಆಧರಿಸಿ ಮತ್ತಿಬ್ಬರನ್ನು ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು.



# ಬಂಟ್ವಾಳ ಅಬ್ದುಲ್ ಹತ್ಯೆ ಪ್ರಕರಣ: ನಾಲ್ವರ ಬಂಧನ

### ತಕ್ಷಣ ಜಾರಿಗೆ ಬರುವಂತೆ ಕೋಮು ವಿರೋಧಿ ಪಡೆ ರಚಿಸುವ ಬಗ್ಗೆ ಸರ್ಕಾರಿ ಆದೇಶ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನಲ್ಲಿ 32 ವರ್ಷದ ಮುಸ್ಲಿಂ ವ್ಯಕ್ತಿಯ ಹತ್ಯೆಗೆ ಸಂಬಂಧಿಸಿದಂತೆ ನಾಲ್ವರನ್ನು ಬಂಧಿಸಲಾಗಿದ್ದು, ಅವರಿಂದ ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ ಮುಲಾಜಿಲ್ಲದೇ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಜಿ. ಪರಮೇಶ್ವರ ಅವರು ಗುರುವಾರ ಹೇಳಿದ್ದಾರೆ.

ರಾಜ್ಯ ಸರ್ಕಾರ ಈ ಹತ್ಯೆಯನ್ನು ಬಹಳ ಗಂಭೀರವಾಗಿ ಪರಿಗಣಿಸಿದೆ ಮತ್ತು ಅಂತಹ ಕೋಮು ಚಟುವಟಿಕೆಗಳು ಹಾಗೂ ಕೊಲೆಗಳನ್ನು ನಿಗ್ರಹಿಸುವವರೆಗೆ ತಾವು ವಿಶ್ರಾಂತಿ ಪಡೆಯುವುದಿಲ್ಲ ಎಂದು ಗೃಹ ಸಚಿವರು ತಿಳಿಸಿದ್ದಾರೆ.

ತಕ್ಷಣ ಜಾರಿಗೆ ಬರುವಂತೆ ಕೋಮು ವಿರೋಧಿ ಪಡೆ ರಚಿಸುವ ಬಗ್ಗೆ ಸರ್ಕಾರಿ ಆದೇಶ ಹೊರಡಿಸಲಾಗಿದೆ ಎಂದು ಪರಮೇಶ್ವರ ಹೇಳಿದ್ದಾರೆ. ಕೊಲೆಯ ನಂತರ ನಾಲ್ವರನ್ನು ಬಂಧಿಸಲಾಗಿದೆ ಮತ್ತು ಅವರ ಹೇಳಿಕೆಗಳ ಆಧಾರದ ಮೇಲೆ ನಮಗೆ ಕೆಲವು ಗಂಭೀರ ಮಾಹಿತಿ ಸಿಕ್ಕಿದೆ. ಅದನ್ನು ಬಳಸಿಕೊಂಡು ಮುಂದಿನ ತನಿಖೆ ಮತ್ತು ಕ್ರಮ ಕೈಗೊಳ್ಳಲಾಗುವುದು ಎಂದು ಪರಮೇಶ್ವರ ತಿಳಿಸಿದರು.

**ಕರಾವಳಿ ಸೂಕ್ಷ್ಮ ಎಂದು ಪರಿಗಣಿಸಿದ್ದೇವೆ**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆದ ಘಟನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ, ಯಾರೇ ಆಗಿರಲಿ ಯಾವುದೇ ಮುಲಾಜಿಲ್ಲದೇ ನಾವು ನಿರ್ದಯವಾಗಿ ಕ್ರಮ ಕೈಗೊಳ್ಳುತ್ತೇವೆ. ಏಕೆಂದರೆ ಇಂತಹ ಘಟನೆಗಳು ಪ್ರತಿ ಬಾರಿಯೂ ನಡೆಯುತ್ತಿದ್ದರೆ, ನಾವು ಕಣ್ಣು ಮುಚ್ಚಿ ಸುಮ್ಮನಿರಲು ಸಾಧ್ಯವಿಲ್ಲ. ಯಾವುದೇ ಕರುಣೆಯಿಲ್ಲದೆ ನಾವು ಕಾನೂನನ್ನು ಕಠಿಣಗೊಳಿಸುತ್ತೇವೆ ಎಂದು ಪರಮೇಶ್ವರ ಎಚ್ಚರಿಸಿದರು. ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರನ್ನು ಭೇಟಿಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವರು, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಮತ್ತು ಕೋಮು ಚಟುವಟಿಕೆಗಳು ನಡೆಯುವ ಇತರ ಸ್ಥಳಗಳನ್ನು ಒಳಗೊಂಡ ಕರಾವಳಿ ಪ್ರದೇಶ ವನ್ನು ಸೂಕ್ಷ್ಮ ಎಂದು ಪರಿಗಣಿಸಲಾಗುತ್ತದೆ ಮತ್ತು ಅಂತಹ ಚಟುವಟಿಕೆಗಳಲ್ಲಿ ಭಾಗಿಯಾಗಿರುವವರ ವಿರುದ್ಧ ನಿರ್ದಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಕರಾವಳಿಯಲ್ಲಿ ವಾತಾವರಣ ಹಾಳಾಗಿದೆ. ಒಂದು ಕಡೆ ಕೊಲೆ ಮಾಡಿದರೆ, ಇನ್ನೊಂದು ಕಡೆ ಪ್ರತೀಕಾರ ತೀರಿಸಿಕೊಳ್ಳುತ್ತಾರೆ. ಅಂತಹ ವಿಷಯಗಳು ಪುನರಾವರ್ತನೆಯಾಗುತ್ತವೆ. ಅಂತಹ ದ್ವೇಷದ ಭಾವನೆ ಇದ್ದರೆ, ಸಮಾಜ ಹೇಗೆ ಉಳಿಯುತ್ತದೆ. ಯಾರಾದರೂ ಜೀವನ ನಡೆಸಲು ಸಾಧ್ಯವೇ ಸರ್ಕಾರ ಮೂಕ ಪ್ರೇಕ್ಷಕರಾಗಿ ಮೌನವಾಗಿ ಕುಳಿತುಕೊಳ್ಳುವುದಿಲ್ಲ, ನಾವು ಅದನ್ನು ತಡೆಯುತ್ತೇವೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

> ಶಿವಮೊಗ್ಗ, ಉಡುಪಿ ಮತ್ತು ದಕ್ಷಿಣ ಕನ್ನಡ – ಮೂರು ಜಿಲ್ಲೆಗಳಲ್ಲಿ ಹೆಚ್ಚಿನ ಗಮನ ಹರಿಸಿ ಅವು ಪ್ರಾರಂಭವಾಗಲಿವೆ ಎಂದು ಅವರು ಹೇಳಿದರು. ದಕ್ಷಿಣ ಕನ್ನಡದಲ್ಲಿ ಕೋಮು ಭಾವನೆಗಳನ್ನು ಪ್ರಚೋದಿಸುವ ಪ್ರಯತ್ನಗಳು ನಡೆಯುತ್ತಿವೆಯೇ ಎಂಬ ಪ್ರಶ್ನೆಗೆ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದರ ಜೊತೆಗೆ ಶಾಂತಿ ಮತ್ತು ಸಮುದಾಯ ಸಭೆಗಳನ್ನು ನಡೆಸಲು ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವರು ತಿಳಿಸಿದರು.

> ಇಂತಹ ಘಟನೆಗಳನ್ನು ಎದುರಿಸಲು ಮೊದಲೇ ಘೋಷಿಸಲಾದ ಕೋಮು ವಿರೋಧಿ ಪಡೆಯ ರಚನೆಯ ಬಗ್ಗೆ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಆದೇಶ ಹೊರಡಿಸಲಾಗಿದೆ. ಅದನ್ನು ಹೇಗೆ ರಚಿಸುವುದು, ಯಾರು ಅದರ ನೇತೃತ್ವ ವಹಿಸುತ್ತಾರೆ, ಅವರಿಗೆ ಯಾವ ಅಧಿಕಾರ ನೀಡಬೇಕು – ಆ ಎಲ್ಲಾ ವಿಷಯ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ಸಮಯ ಹಿಡಿಯಿತು. ನಾವು ಅಂತಿಮವಾಗಿ ಆದೇಶ ಹೊರಡಿಸಿದ್ದೇವೆ. ನಾವು ನಕ್ಸಲ್ ವಿರೋಧಿ ಪಡೆಯನ್ನು ವಿಸರ್ಜಿಸಲು ಯೋಜಿಸಿದ್ದೇವೆ. ಆ ನಕ್ಸಲ್ ವಿರೋಧಿ ಪಡೆಯ ಅರ್ಧದಷ್ಟು ಭಾಗವನ್ನು ಕೋಮು ವಿರೋಧಿ ಪಡೆಯಾಗಿ ಪರಿವರ್ತಿಸಲಾಗಿದೆ. ಅಗತ್ಯವಿರುವ ಎಲ್ಲಾ ಅಧಿಕಾರ ಮತ್ತು ಸೌಲಭ್ಯಗಳನ್ನು ಅವರಿಗೆ ಒದಗಿಸಲಾಗುವುದು ಎಂದು ಗೃಹ ಸಚಿವರು ತಿಳಿಸಿದರು.

ಅಂತರಾಳದಿಂದ.. EDITORIAL

# ಕೋವಿಡ್ ಪ್ರಕರಣಗಳ ನಿರ್ವಹಣೆ: ನಿರಂತರ ನಿಗಾ ವ್ಯವಸ್ಥೆ ಬೇಕು

ದೇಶದ ವಿವಿಧೆಡೆಗಳಿಂದ ಕೋವಿಡ್ ಪ್ರಕರಣಗಳು ಮತ್ತೆ ವರದಿಯಾಗುತ್ತಿವೆ. ಆದರೆ, ವರದಿಯಾಗಿರುವ ಪ್ರಕರಣಗಳ ಸಂಖ್ಯೆ ಕಡಿಮೆ ಇದೆ. ಸೋಂಕಿನ ಪರಿಣಾಮವು ಮಂದವಾಗಿದೆ. ಹದಿನೈದು ದಿನಗಳ ಅವಧಿಯಲ್ಲಿ ಒಂದು ಸಾವಿರಕ್ಕೂ ಹೆಚ್ಚು ಕೋವಿಡ್ ಪ್ರಕರಣಗಳು ವರದಿಯಾಗಿವೆ. ಅದರಲ್ಲೂ ಕೇರಳ, ಮಹಾರಾಷ್ಟ್ರ ಮತ್ತು ದೆಹಲಿಯಲ್ಲಿ ಈ ಪ್ರಕರಣಗಳು ಹೆಚ್ಚಾಗಿವೆ. ಇದು. ತುಸು ಕಳವಳ ಮೂಡಿಸುವಂತಿದೆ. ಕರ್ನಾಟಕದಲ್ಲಿ 100 ಸಕ್ರಿಯ ಪ್ರಕರಣಗಳು ಇವೆ. ಕೋವಿಡ್ ಸೋಂಕಿತರು ಮೃತಪಟ್ಟ ವರದಿಗಳೂ ಇವೆ. ಆದರೆ ಅವರ ಸಾವಿಗೆ ಕೋವಿಡ್ ಕಾರಣ ಎಂದು ಹೇಳಿಲ್ಲ. ಕೋವಿಡ್ ಪರೀಕ್ಷಾ ಕಿಟ್‌ಗಳನ್ನು ಸಂಗ್ರಹಿಸಿ ಇಟ್ಟುಕೊಳ್ಳುವಂತೆ ಅಧಿಕಾರಿಗಳಿಗೆ, ಹೃದಯ ಸಂಬಂಧಿ ಮತ್ತು ಉಸಿರಾಟ ಸಂಬಂಧಿ ಸಮಸ್ಯೆಗಳು ಇರುವ ರೋಗಿಗಳನ್ನು ತಪಾಸಣೆಗೆ ಒಳಪಡಿಸುವಂತೆ ಆಸ್ಪತ್ರೆಗಳಿಗೆ ರಾಜ್ಯ ಸರ್ಕಾರವು ಸೂಚನೆ ನೀಡಿದೆ. ಮುನ್ನೆಚ್ಚರಿಕೆ ಕ್ರಮಗಳಿಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಹಾಗೂ ಸೂಚನೆಗಳನ್ನು ಆಸ್ಪತ್ರೆಗಳಿಗೆ ಮತ್ತು ಶಾಲೆಗಳಿಗೆ ಕಳುಹಿಸಲಾಗಿದೆ. ಇದು ಒಮಿಕ್ರಾನ್ ತಳಿಯ ರೂಪಾಂತರಿ, ಇದು ಬಹಳ ಬೇಗ ಹರಡುತ್ತದೆ ಯಾದರೂ ಗಂಭೀರ ಸ್ವರೂಪದ ಸಮಸ್ಯೆಗಳನ್ನು ಇದು ಉಂಟುಮಾಡುವುದಿಲ್ಲ ಎಂದು ವರದಿಗಳು ಹೇಳುತ್ತಿವೆ. ಭಾರತದಲ್ಲಿ ಪತ್ತೆಯಾಗಿರುವ ಕೋವಿಡ್ ಉಪತಳಿಗಳ ಮೂಲ ಇರುವುದು ಜೆಎನ್.1 ತಳಿಯಲ್ಲಿ. ಕೋವಿಡ್ ಪ್ರಕರಣಗಳಲ್ಲಿನ ಹೆಚ್ಚಳಕ್ಕೆ ಹಲವು ಕಾರಣಗಳು ಇದ್ದಿರಬಹುದು. ಲಸಿಕೆಯ ಕಾರಣದಿಂದಾಗಿ ಸಿಕ್ಕಿದ್ದ ರೋಗನಿರೋಧಕ ಶಕ್ತಿ ಹಾಗೂ ರೋಗ ಬಂದಿದ್ದರಿಂದಾಗಿ ಸಮುದಾಯದಲ್ಲಿ ಮೂಡಿದ್ದ ರೋಗನಿರೋಧಕ ಶಕ್ತಿಯು ಕೆಲವರಲ್ಲಿ ಈಗ ಕುಗ್ಗಿರಬಹುದು. ಬೂಸ್ಟರ್ ಲಸಿಕೆಯನ್ನು ಹಾಕಿಸಿ ಕೊಳ್ಳದೇ ಇರುವುದು ಕೂಡ ಇದಕ್ಕೆ ಒಂದು ಕಾರಣ ಆಗಿರಬಹುದು. ಕೊರೋನಾ ವೈರಾಣು ರೂಪಾಂತರ ಹೊಂದಿ, ಹೊಸ ತಳಿಗಳನ್ನು, ಉಪತಳಿಗಳನ್ನು ಸೃಷ್ಟಿಸಿ ರಬಹುದು. ಇವುಗಳಿಗೆ ಲಸಿಕೆಯು ಹೆಚ್ಚು ಪರಿಣಾಮ ಕಾರಿಯಾಗಿ ಕೆಲಸ ಮಾಡದೇ ಇರಬಹುದು. ಕೆಲವು ದೇಶಗಳಲ್ಲಿ ವಾರ್ಷಿಕ ಕೋವಿಡ್ ಬೂಸ್ಟರ್ ಲಸಿಕೆ ನೀಡುವುದಕ್ಕೆ ವ್ಯವಸ್ಥೆ ಮಾಡಲಾಗಿದೆ. ಅದರಲ್ಲೂ ಮುಖ್ಯವಾಗಿ, ಕೋವಿಡ್‌ನಿಂದಾಗಿ ಹೆಚ್ಚಿನ ಅಪಾಯ ಎದುರಿಸುವ ಸಾಧ್ಯತೆ ಇರುವವರಿಗೆ ಈ ವ್ಯವಸ್ಥೆ ಕಲ್ಪಿಸಲಾಗಿದೆ. ಭಾರತದಲ್ಲಿಯೂ ಈ ಬಗ್ಗೆ ಆಲೋಚಿಸಬಹುದು. ವೈರಾಣುವಿನ ಬಗ್ಗೆ, ಸಮುದಾಯದಲ್ಲಿ ಅದು ಹರಡುವ ಬಗೆಯ ಕುರಿತು, ಲಸಿಕೆಗಳು ಅದೆಷ್ಟು ಪರಿಣಾಮಕಾರಿ ಎಂಬ ಕುರಿತು ನಿರಂತರವಾಗಿ ಸಂಶೋಧನೆ ನಡೆಯಬೇಕು. ಲಸಿಕೆಗಳನ್ನು ಕಾಲಕಾಲಕ್ಕೆ ಮೇಲ್ದರ್ಜೆಗೆ ಏರಿಸಬೇಕು. ಹಿರಿಯ ನಾಗರಿಕರು, ಕೋವಿಡ್‌ಗೆ ಸುಲಭವಾಗಿ ತುತ್ತಾಗುವವರನ್ನು ಗಮನದಲ್ಲಿ ಇರಿಸಿಕೊಂಡು ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಮಾಸ್ಕ್ ಧರಿಸುವುದು, ಕೈಗಳನ್ನು ಆಗಾಗ ತೊಳೆದುಕೊಳ್ಳುವುದು ಕೋವಿಡ್‌ನಿಂದ ರಕ್ಷಣೆಗೆ ಇರುವ ಮಾರ್ಗೋಪಾಯಗಳ ಪೈಕಿ ಕೆಲವು. ಇಂತಹ ಕ್ರಮಗಳ ಬಗ್ಗೆ ವ್ಯಾಪಕ ಪ್ರಚಾರ ಆಗಬೇಕು. ಕೋವಿಡ್ ಈಗ ನಿರ್ದಿಷ್ಟ ಪ್ರದೇಶಗಳಲ್ಲಿ ಶಾಶ್ವತವಾಗಿ ಕಂಡುಬರುವ ಒಂದು ಆರೋಗ್ಯ ಸಮಸ್ಯೆಯಾಗಿ ಪರಿವರ್ತನೆ ಕಂಡಿದೆ. ಅದು ಈಗ ಮೊದಲಿನಷ್ಟು ಅಪಾಯಕಾರಿ ಆಗಿಲ್ಲದಿರಬಹುದು. ಆದರೆ ವೈರಾಣು ರೂಪಾಂತರ ಹೊಂದಿ ಅಪಾಯಕಾರಿ ಕೂಡ ಆಗಬಲ್ಲದು. ಸರ್ಕಾರಗಳು, ವೈದ್ಯಕೀಯ ವ್ಯವಸ್ಥೆ ಮತ್ತು ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು. ಇಂತಹ ಆರೋಗ್ಯ ಸಮಸ್ಯೆಗಳನ್ನು ಎದುರಿಸುವ ಉದ್ದೇಶದಿಂದ ವಿಶ್ವ ಆರೋಗ್ಯ ಸಂಸ್ಥೆಯ (ಡಬ್ಲ್ಯುಎಚ್‌ಒ) ನೇತೃತ್ವದಲ್ಲಿ ವಿವಿಧ ದೇಶಗಳು ಒಪ್ಪಂದವೊಂದಕ್ಕೆ ಸಹಿ ಹಾಕಿವೆ. ಇದರಿಂದಾಗಿ ಇಂತಹ ಸಮಸ್ಯೆಗಳನ್ನು ಎದುರಿಸಲು ಜಗತ್ತು ಈಗ ಹೆಚ್ಚು ಪರಿಣಾಮಕಾರಿಯಾಗಿ ಸಜ್ಜಾಗಿದೆ ಎನ್ನಬಹುದು

**ಕೋವಿಡ್ ಹರಡುವುದರ ಮೇಲೆ ನಿಗಾ ಇರಿಸಲು, ಹರಡುವುದನ್ನು ತಡೆಯುವ ಸುರಕ್ಷತಾ ಕ್ರಮಗಳು ಜಾರಿಯಲ್ಲಿ ಇವೆ ಎಂಬುದನ್ನು ಖಾತರಿಪಡಿಸಲು ಇತರ ರಾಜ್ಯಗಳು ಕೂಡ ಇದೇ ಬಗೆಯ ಕ್ರಮಗಳನ್ನು ಕೈಗೊಂಡಿವೆ.ಹಾಂಗ್‌ಕಾಂಗ್, ವಿಯೆಟ್ನಾಂ, ಸಿಂಗಪುರ ಮತ್ತು ಥಾಯ್ಲೆಂಡ್‌ನಲ್ಲಿ ಈಚಿನ ವಾರಗಳಲ್ಲಿ ಕೋವಿಡ್ ಪ್ರಕರಣಗಳಲ್ಲಿ ಏರಿಕೆ ಆಗಿದೆ. 2023ರ ಆಗಸ್ಟ್‌ನಲ್ಲಿ ಮೊದಲು ಪತ್ತೆಯಾಗಿದ್ದ ಜೆಎನ್.1 ತಳಿಯ ಕೊರೋನಾ ವೈರಾಣು ಈ ಹೆಚ್ಚಳಕ್ಕೆ ಕಾರಣ ಎಂದು ಗುರುತಿಸಲಾಗಿದೆ.**






• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಆಮೇಲೆ ಕೌಸಲಾದೇವಿಯು ಶಾಂತನಾದ ಯಜ್ಞಪುರುಷನಂತೆಯೂ ಉದಕವಿಲ್ಲದ ಸಮುದ್ರದಂತೆಯೂ ಕಾಂತಿಯಿಲ್ಲದ ಸೂರ್ಯನಂತೆಯೂ ಜೀವರಹಿತನಾದ ದಶರಥ ರಾಯನನ್ನು ಕಂಡು ಕಣ್ಣೀರುಬಿಡುತ್ತ, ನಾನಾಪ್ರಕಾರವಾಗಿ ಹಂಬಲಿಸಲಾರಂಭಿಸಿದಳು. ಅವಳು ದಶರಥನ ಶಿರಸ್ಸನ್ನು ತನ್ನ ತೊಡೆಯಮೇಲಿರಿಸಿಕೊಂಡು ಕೈಕೇಯಾದೇವಿಯನ್ನು ನೋಡಿ ಎಲೇ ದುಷ್ಟೆ ಕೈಕೇಯಿ, ನಿನ್ನ ಅಭೀಷ್ಟವು ಸಂದಿತೆ ಏಕಾಗ್ರಚಿತ್ತಳಾಗಿ ಶತ್ರುಗಳಿಲ್ಲದ ರಾಜ್ಯವನ್ನು ಅನುಭವಿಸು. ಶ್ರೀರಾಮನೂ ನನ್ನನ್ನು ಬಿಟ್ಟು ಹೋದನು. ನನ್ನ ಪತಿಯಾದ ದಶರಥರಾಯನೂ ಸ್ವರ್ಗವನ್ನೈದಿದನು. ತಪ್ಪಾದ ಮಾರ್ಗದಲ್ಲಿ ನಡೆದು ನಾನು ಜೀವಿಸಲಾರೆನು. ಧರ್ಮಮಾರ್ಗವನ್ನು ಬಿಟ್ಟು ನಡೆಯುವ ನೀನೊಬ್ಬಳು ಹೊರತಾಗಿ ಲೋಕದಲ್ಲಿ ಮತ್ತೊಬ್ಬ ಸ್ತ್ರೀಯು ತನ್ನ ಇಷ್ಟ ದೇವತಾಸ್ವರೂಪನಾದ ಪತಿಯನ್ನು ಬಿಟ್ಟು ಬದುಕುವಳೆ ? ಲೋಕದಲ್ಲಿ ಲೋಭಿಯಾದವನು ದೋಷವನ್ನರಿಯದೆ ವಿಷಮಿಶ್ರಿತವಾದ ಆಹಾರವನ್ನು ತಿನ್ನುವಂತೆ ನೀನು ಮಂಥರೆಯ ಮಾತನ್ನು ಕೇಳಿ ದಶರಥರಾಯನ ವಂಶಕ್ಕೆ ಕೊಡಲಿಯಾಗಿ ಆ ರಾಯನಿಗೆ ದುರ್ಬೋಧನೆ ಮಾಡಿ ಶ್ರೀರಾಮನನ್ನು ಸೀತಾಲಕ್ಷ್ಮಣರೊಡನೆ ವನಕ್ಕೆ ಕಳುಹಿಸಿದೆ. ಈ ವೃತ್ತಾಂತವನ್ನು ಜನಕರಾಯನು ಕೇಳಿದರೆ ನನ್ನ ಹಾಗೆಯೇ ವ್ಯಥೆಪಡುವನು. ಆ ರಾಮನು ನನಗೆ ವೈಧವಾವಸ್ಥೆಯು ಬಂದಿತೆಂದರಿಯನು. ಕಮಲದಳಾಕ್ಷನಾದ ಶ್ರೀರಾಮನಿಗೆ ತಂದೆಯು ಹೋದನೆಂಬ ವಿಷಯ ತಿಳಿಯದು. ಒಂದು ದಿನವಾದರೂ ದುಃಖವನ್ನು ಕಾಣದಿದ್ದ ಸೀತೆಯು ವನದಲ್ಲಿ ಮಃಖವನ್ನನುಭವಿಸುತ್ತಿದ್ದಾಳೆ. ರಾತ್ರಿ ಕಾಲದಲ್ಲಿ ಭಯಂಕರವಾದ ಮೃಗಪಕ್ಷಿಗಳ ಧ್ವನಿಯನ್ನು ಕೇಳಿ ಬೆದರಿ ಕಂಗೆಟ್ಟು ಶ್ರೀರಾಮನ ಸಮೀಪಕ್ಕೆ ಹೋಗಿ ತಬ್ಬಿಕೊಳ್ಳುವಳು. ಜನಕರಾಯನಿಗೆ ಸೀತಾದೇವಿ ಒಬ್ಬಳೇ ಪ್ರೇಮಪುತ್ರಿ ಆದ್ದರಿಂದ ಆತನು ಆ ದೇವಿಯನ್ನು ಕುರಿತು ಕಂಗೆಟ್ಟು, ದುಃಖಾತಿಶಯದಿಂದ ಹಂಬಲಿಸಿ ಶರೀರವನ್ನು ಬಿಡುವನು. ನಾನು ದಶರಥರಾಯನ ತೋಳುಗಳನ್ನು ಆಶ್ರಯಿಸಿ ಆತನ ಕೂಡ ಅಗ್ನಿ ಪ್ರವೇಶವನ್ನು ಮಾಡುವೆನು ಎಂದು ಅತ್ಯಂತವಾಗಿ ಹಂಬಲಿಸುತ್ತಿದ್ದಳು. ಆ ಸಮಯದಲ್ಲಿ ಕೌಸಲ್ಯಾದೇವಿಯ ಊಳಿಗದ ಸ್ತ್ರೀಯರು ಆ ದೇವಿಯನ್ನು ಕೈ ಹಿಡಿದೆತ್ತಿ ಆಚೆಗೆ ಕರೆದುಕೊಂಡು ಹೋದರು. ಆಮೇಲೆ ಪ್ರಧಾನಿಗಳು ಮೃತನಾದ ದಶರಥರಾಯನನ್ನು ಎಣ್ಣೆಯ ಕೊಪ್ಪರಿಗೆಯಲ್ಲಿಟ್ಟು ಮುಂದೆ ನಡೆಯಬೇಕಾದ ಕರ್ಮಗಳಿಗೆ ಯೋಚನೆ ಮಾಡಿ ಆ ರಾಯನ ಮಕ್ಕಳು ಹೊರತು ಮತ್ತಾರೂ ಅಗ್ನಿಸಂಸ್ಕಾರವನ್ನು ಮಾಡಬಾರದೆಂದು ನಿಶ್ಚಯಿಸಿದರು. ಆ ರಾಯನನ್ನು ಎಣ್ಣೆಯ ಕೊಪ್ಪರಿಗೆಯಲ್ಲಿ ಹಾಕಿದ್ದನ್ನು ಕಂಡು ಆತನು ಸತ್ತನೆಂದು ನಿಶ್ಚಯಿಸಿ ಅಂತಃಪುರದ ಸ್ತ್ರೀಯರು ಹಾ ಮಹಾರಾಜ ಸತ್ಯಸಂಧನಾಗಿ ಪ್ರಿಯವಾದಿಯಾದ ಶ್ರೀರಾಮನನ್ನು ವನಕ್ಕೆ ಕಳುಹಿಸಿ ಆತನ ಮುಖವನ್ನು ಕಾಣದೆ ನೀನೂ ಲೋಕಾಂತರವನ್ನೈದಿದೆ. ನಮಗೆ ಇನ್ನಾರು ಗತಿ ಮಹಾರಾಜ, ನೀನು ಸ್ವರ್ಗಸ್ಥನಾದೆ. ಶ್ರೀರಾಮನು ವನಕ್ಕೆ ಹೋದನು. ವಿಧವೆಯರಾದ ನಾವು ದುಷ್ಟೆಯಾದ ಕೈಕೇಯಾದೇವಿಯ ವಶದಲ್ಲಿ ಹೇಗಿರುವೆವು ನಿನ್ನ ವಂಶಕ್ಕೂ ನಮಗೂ ಕರ್ತನಾದ ಶ್ರೀರಾಮನು ರಾಜ್ಯವನ್ನೂ ಸಮಸ್ತ ಐಶ್ವರ್ಯವನ್ನೂ ಬಿಟ್ಟು ವನಕ್ಕೆ ಹೋದನು.

ಮುಂದುವರಿಯುವುದು...

# ಯುವಕರಲ್ಲಿ ಹೆಚ್ಚುತ್ತಿದೆ ಕ್ಲೌಡ್ ಕಾಫಿ ಕ್ರೇಜ್

ಕ್ಲೌಡ್ ಕಾಫಿ ಬಗ್ಗೆ ಕೇಳಿದ್ದೀರಾ? ಇದು ರುಚಿಯಲ್ಲಿ ಬೆಸ್ಟ್ ಮಾತ್ರವಲ್ಲ ಆರೋಗ್ಯಕ್ಕೂ ಒಳ್ಳೆಯದು. ಕ್ಲೌಡ್ ಕಾಫಿ ಸ್ಪೆಶಾಲಿಟಿ ಏನು, ಹಾಲಿನ ಬದಲಿಗೆ ಏನನ್ನು ಹಾಕಲಾಗುತ್ತದೆ ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

ಕಾಫಿ ಪ್ರಿಯರಿಗೆ ಡಾಲ್ಗೋನಾ ಕಾಫಿ ಕ್ರೇಜ್ ಹೇಗಿತ್ತು ಅನ್ನೋದು ನಿಮಗೆಲ್ಲಾ ಗೊತ್ತೇ ಇದೆ. ಮನೆಯಲ್ಲೂ ಈ ಡಾಲ್ಗೋನಾ ಕಾಫಿಯನ್ನು ತಯಾರಿಸಿ ಕುಡಿಯುತ್ತಿದ್ದರು. ಇದೀಗ ಯುವಜನತೆಯಲ್ಲಿ ಕ್ಲೌಡ್ ಕಾಫಿ ಕ್ರೇಜ್ ಹೆಚ್ಚುತ್ತಿದೆ. ಏನಿದು ಕ್ಲೌಡ್ ಕಾಫಿ, ಇದನ್ನು ಹೇಗೆ ತಯಾರಿಸಲಾಗುತ್ತದೆ ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

**ಕ್ಲೌಡ್ ಕಾಫಿ ಎಂದರೇನು:** ಕ್ಲೌಡ್ ಕಾಫಿ ನಿಮ್ಮ ಬೆಳಗಿನ ಪಾನೀಯಕ್ಕೆ ಉಷ್ಣವಲಯದ ಪರ್ಯಾಯವಾಗಿದೆ. ಸರಳ ನೀರನ್ನು ಬಳಸುವ ಬದಲು, ಈ ಕಾಫಿಯನ್ನು ಎಳನೀರಿನಿಂದ ತಯಾರಿಸಲಾಗುತ್ತದೆ. ಅದರ ಮೇಲೆ ಎಸ್ಪ್ರೆಸೊ ಶಾಟ್ ಹಾಕಲಾಗುತ್ತದೆ. ನಂತರ ನೀವು ಯಾವುದೇ ಕಡಿಮೆ ಕ್ಯಾಲೋರಿ ಅಥವಾ ಸಸ್ಯ ಆಧಾರಿತ ಹಾಲಿನ ಸ್ಪ್ಲಾಶ್ ಅನ್ನು ಸೇರಿಸಬಹುದು. ಇದು ಅತ್ಯಂತ ಸುಲಭವಾಗಿ ತಯಾರಿಸಲಾಗುವ ಪಾನೀಯವಾಗಿದೆ.



**ಕ್ಲೌಡ್ ಕಾಫಿಯ ಆರೋಗ್ಯ ಪ್ರಯೋಜನಗಳು:** ಕ್ಲೌಡ್ ಕಾಫಿ ಉತ್ತಮ ರುಚಿಯನ್ನು ಹೊಂದಿರುವುದಲ್ಲದೆ, ಅದರ ಆರೋಗ್ಯ ಪ್ರಯೋಜನಗಳಿಂದಾಗಿ ಅನೇಕ ಜನರು ಸಾಮಾನ್ಯ ಕಾಫಿಗಿಂತ ಇದನ್ನು ಬಯಸುತ್ತಾರೆ.

ಎಳ ನೀರಿನಿಂದ ಇದನ್ನು ತಯಾರಿಸೋದರಿಂದ ಪೋಷಕಾಂಶಗಳ ವರ್ಧನೆಯ ಜೊತೆಗೆ ಉಷ್ಣವಲಯದ ರುಚಿಯನ್ನು ನೀಡುತ್ತದೆ, ವಿಶೇಷವಾಗಿ ಬೇಸಿಗೆಯಲ್ಲಿ ಹೈಡ್ರೇಟೆಡ್ ಆಗಿರಲು ಸಹಾಯ ಮಾಡುತ್ತದೆ. ಎಳ ನೀರಿನೊಂದಿಗೆ ಕಾಫಿಯನ್ನು ಬೆರೆಸುವುದರಿಂದ ತೆಂಗಿನ ನೀರಿನಲ್ಲಿರುವ ಎಲೆಕ್ಟ್ರೋಲೈಟ್ ಅಂಶದಿಂದಾಗಿ ಅದು ಸ್ವಲ್ಪ ಹೆಚ್ಚು ಹೈಡ್ರೇಟಿಂಗ್ ಆಗಿಸುತ್ತದೆ.

**ಇದರಲ್ಲಿ ಕೆಫೀನ್ ಅಥವಾ ಸಕ್ಕರೆ ಇದೆಯೇ?:** ಸಕ್ಕರೆ ಮತ್ತು ಕೆಲವೊಮ್ಮೆ ಕೆಫೀನ್ ಅಧಿಕವಾಗಿರುವ ಅನೇಕ ಟ್ರೆಂಡಿ ಪಾನೀಯಗಳಿಗಿಂತ ಭಿನ್ನವಾಗಿ, ಕ್ಲೌಡ್ ಕಾಫಿ ತುಂಬಾ ಸಿಂಪಲ್ ಆಗಿದೆ. ಇದು ವಾಸ್ತವವಾಗಿ ಸಾಮಾನ್ಯ ಕಾಫಿಗಿಂತ ಕಡಿಮೆ ಸಂಸ್ಕರಿಸಿದ ಸಕ್ಕರೆಯನ್ನು ಹೊಂದಿರುತ್ತದೆ. ಇದರ ರುಚಿಯು ಹೆಚ್ಚಾಗಿ ಎಳನೀರಿನಿಂದ ಬರುತ್ತದೆ, ಇದು ನೈಸರ್ಗಿಕ ಸಕ್ಕರೆಗಳನ್ನು ಹೊಂದಿರುತ್ತದೆ. 1 ಕಪ್ ಸಂಸ್ಕರಿಸಿದ ಸಕ್ಕರೆ 70 100 ಕ್ಯಾಲೊರಿಗಳನ್ನು ಹೊಂದಿರುತ್ತದೆ. ಕಪ್ ಎಳ ನೀರಿನಲ್ಲಿ ಸುಮಾರು 45 ಕ್ಯಾಲೊರಿಗಳಿವೆ, 470 ಮಿಗ್ರಾಂ ಪೊಟ್ಯಾಸಿಯಮ್ ಮತ್ತು 19 ಮಿಗ್ರಾಂ ಮೆಗ್ನೀಸಿಯಮ್ ಇರುತ್ತದೆ. ಇದನ್ನು ಕುಡಿಯೋ ದ್ರಿಂದ ಎಷ್ಟು ಕ್ಯಾಲೋರಿ ಹೆಚ್ಚುತ್ತದೆ ಎನ್ನುವುದು ನೀವು ಎಷ್ಟು ಪ್ರಮಾಣದಲ್ಲಿ ಕಾಫಿ ಬಳಸುತ್ತೀರಿ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ.

**ಜೀರ್ಣಕ್ರಿಯೆಗೂ ಒಳ್ಳೆಯದು:** ಕ್ಲೌಡ್ ಕಾಫಿ ಕೇವಲ ನೋಡಲು ಆಕರ್ಷಕವಾಗಿರುವುದು ಮಾತ್ರವಲ್ಲ ಸಾಕಷ್ಟು ಪ್ರಯೋಜನಗಳನ್ನೂ ಹೊಂದಿದೆ. ಪೌಷ್ಟಿಕಾಂಶದ ಪ್ರಯೋಜನಗಳು ಪ್ರಾಥಮಿಕವಾಗಿ ಎಳ ನೀರಿನಿಂದ ಬರುತ್ತವೆ, ಇದು ಎಲೆಕ್ಟ್ರೋಲೈಟ್‌ಗಳು ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ.

ಎಳ ನೀರು ಜೀರ್ಣಕ್ರಿಯೆ ಮತ್ತು ಜಲಸಂಚಯನಕ್ಕೆ ಸಹಾಯ ಮಾಡುತ್ತದೆ. ಸಸ್ಯಜನ್ಯ ಹಾಲನ್ನು ಸೇರಿಸುವುದರಿಂದ ಇದು ಹಗುರವಾದ, ಲ್ಯಾಕ್ಟೋಸ್-ಮುಕ್ತ ಆಯ್ಕೆಯಾಗುತ್ತದೆ, ಇದು ಜೀರ್ಣಕ್ರಿಯೆಯನ್ನು ಸುಲಭವಾಗಿಸುತ್ತದೆ.

**ಕ್ಲೌಡ್ ಕಾಫಿ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಹೇಗೆ ಪರಿಣಾಮ ಬೀರುತ್ತದೆ:** ಹೆಚ್ಚಿನ ಕೆಫೀನ್‌ನಿಂದ ಕೂಡಿರುವ ಪಾನೀಯಗಳಂತಹ ಕ್ಲೌಡ್ ಕಾಫಿ ರಕ್ತದಲ್ಲಿನ ಸಕ್ಕರೆ ಮತ್ತು ಶಕ್ತಿಯ ಮಟ್ಟಗಳಲ್ಲಿ ತಾತ್ಕಾಲಿಕ ಏರಿಕೆಗೆ ಕಾರಣವಾಗಬಹುದು. ಕೆಫೀನ್ ನರಮಂಡಲವನ್ನು ಉತ್ತೇಜಿಸುತ್ತದೆ ಮತ್ತು ಎಳ ನೀರಿನಲ್ಲಿರುವ ನೈಸರ್ಗಿಕ ಸಕ್ಕರೆಗಳು ಗ್ಲೂಕೋಸ್ ಆಗಿ ವಿಭಜನೆಯಾಗುತ್ತವೆ, ಇದು ಶಕ್ತಿಯನ್ನು ಹೆಚ್ಚಿಸುತ್ತದೆ.

ಇದು ಸಾಮಾನ್ಯ ಕಾಫಿ-ಶಾಪ್ ಫ್ರಾಪೆ ಅಥವಾ ಐಸ್ಡ್ ಲ್ಯಾಟೆಗಿಂತ ಕಡಿಮೆ ಸಕ್ಕರೆಯನ್ನು ಹೊಂದಿರುತ್ತದೆ. ಯಾವುದೇ ಆದರೂ ಮಿತಿಯಲ್ಲಿ ಸೇವಿಸಿದರೆ ಉತ್ತಮ. ವಿಶೇಷವಾಗಿ ನೀವು ಇನ್ಸುಲಿನ್ ಸಂವೇದನೆಯನ್ನು ಹೊಂದಿದ್ದರೆ ಸಕ್ಕರೆ ಸೇವನೆ ಕಡಿಮೆ ಮಾಡಬೇಕು.

## ಬನ್ನಿ ಬನ್ನಿ ಮಕ್ಕಳೇ..



● ವಿ.ಎಂ.ಎಸ್.ಗೋಪಿ
• ಉದಯವಾಹಿನಿ, ವಿಶೇಷ

ಬನ್ನಿ ಮಕ್ಕಳೇ ಶಾಲೆಗೆ ಹೋಗೋಣ.
ಬೇಸಿಗೆ ಹೋಯಿತ್ತು ಮಳೆಗಾಲ ಬಂತು
ಹಚ್ಚ ಹಸಿರಿನ ಗಿಡಗಳು
ಶಾಲೆಯ ಸುತ್ತಮುತ್ತ ಹೂವಿನ ಗಿಡಗಳು
ಹೊಸ ಪುಸ್ತಕಗಳು ಹೊಸ ಬ್ಯಾಗ್‌ಗಳು
ಹೊಸ ಸಮ ವಸ್ತ್ರಗಳು
ಗೆಳತಿ ಗೆಳೆಯರ ಮಾತುಗಳು
ಹೊಸ ಹೊಸ ವಿಚಾರಗಳು
ಆಡುತಾ ಓದುತ ನಲಿಯುತ
ಹೊಸ ಪಾಠಗಳನ್ನು ಕಲಿಯೋಣ
ಓದುತ ಬರೆಯುತ ಒಂದಿಷ್ಟು ಸಾಧಿಸೋಣ
ಬನ್ನಿ ಮಕ್ಕಳೇ ಶಾಲೆಗೆ ಹೋಗೋಣ.

**ಕವನ**




## ಹರೇ ಕೃಷ್ಣ ಮಹಾಮಂತ್ರದ ಶಕ್ತಿ



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಹರೇ ಕೃಷ್ಣ ಮಹಾಮಂತ್ರದಲ್ಲಿ
ಹರೇ ಕೃಷ್ಣ, ಹರೇ ಕೃಷ್ಣ,
ಕೃಷ್ಣ ಕೃಷ್ಣ, ಹರೇ ಹರೇ,
ಹರೇ ರಾಮ, ಹರೇ ರಾಮ,
ರಾಮ ರಾಮ, ಹರೇ ಹರೇ
4 ಕೃಷ್ಣರು ಮತ್ತು 4 ರಾಮರು ಇದ್ದಾರೆ.
ಶ್ರೀರಾಮ ರಾಮ ರಾಮೇತಿ
ರಮೇ ರಾಮೇ ಮನೋರಮೆ
ಸಹಸ್ರನಾಮ ತತ್ತುಲ್ಯಂ
ರಾಮ ನಾಮ ವರನನೆ

ವಿಷ್ಣು ಸಹಸ್ರನಾಮ ಸ್ತೋತ್ರ ಪ್ರಕಾರ ರಾಮನ ಒಂದು ಹೆಸರು = ವಿಷ್ಣುವಿನ ಸಾವಿರ ಹೆಸರುಗಳು..

ಸಹಸ್ರ ನಾಮ ನಾಮ ಪುಣ್ಯನಂ
ತ್ರಿರ್ ಆವೃತ್ತಾ ್ಯ ತು ತತ್ ಫಲಮ್
ಏಕವೃತ್ತಾ ್ಯ ತು ಕೃಷ್ಣಸ್ಯ
ನಾಮೈಕಂ ತತ್ ಪ್ರಯಚ್ಛತಿ

ಬ್ರಹ್ಮಾಂಡ ಪುರಾಣ ಪ್ರಕಾರ ಕೃಷ್ಣನ ಒಂದು ಹೆಸರು = ವಿಷ್ಣುವಿನ 3000 ಹೆಸರುಗಳು ಅಥವಾ ರಾಮನ 3 ಹೆಸರುಗಳು. ಆದ್ದರಿಂದ ಹರೇ ಕೃಷ್ಣ ಮಹಾ ಮಂತ್ರದಲ್ಲಿ 4 ಕೃಷ್ಣರು (ಇದು=12 ರಾಮರು) ಮತ್ತು 4 ರಾಮರು. ಒಟ್ಟು 16 ರಾಮರು. 1 ರಾಮ = 1000 ವಿಷ್ಣುಗಳು ಮತ್ತು ಆದ್ದರಿಂದ ಒಂದು ಹರೇ ಕೃಷ್ಣ ಮಹಾಮಂತ್ರದಲ್ಲಿ 16000 ವಿಷ್ಣುಗಳಿದ್ದಾರೆ. ಆದ್ದರಿಂದ ಈ ಹದಿನಾರು ಅಕ್ಷರಗಳನ್ನು ಒಮ್ಮೆ ಪಠಿಸುವುದರಿಂದ 16000 ಭಗವಾನ್ ವಿಷ್ಣುವಿನ ನಾಮಗಳನ್ನು ಅಥವಾ 16 ಬಾರಿ ವಿಷ್ಣು ಸಹಸ್ರನಾಮವನ್ನು ಜಪಿಸುವುದರಿಂದ ಸಿಗುವ ಎಲ್ಲಾ ಫಲಿತಾಂಶಗಳನ್ನು ಪಡೆಯಬಹುದು.

ಒಂದು ಸುತ್ತಿನ ಪಠಣ = 108 16000=17,28,000
ಮತ್ತು 16 ಸುತ್ತುಗಳು = 1728000
16=2,76,48,000

**ಪಂಚ ತತ್ವ ಮಂತ್ರ**

**ಜೈ ಶ್ರೀ ಕೃಷ್ಣ ಚೈತನ್ಯ ಪ್ರಭು**
**ನಿತ್ಯಾನಂದ**
**ಶ್ರೀ ಅದ್ವೈತ ಗದಾಧರ ಶ್ರೀ**
**ವಾಸಾದಿ ಗೌರ ಭಕ್ತವೃಂದ**
**ಹರೇ ಕೃಷ್ಣ, ಹರೇಕೃಷ್ಣ, ಕೃಷ್ಣ ಕೃಷ್ಣ**
**ಹರೇ ಹರೇ**
**ಹರೇ ರಾಮ, ಹರೇ ರಾಮ, ರಾಮ**
**ರಾಮ ಹರೇ ಹರೇ**

ನಮ್ಮ ಜೀವನದ ಪ್ರತಿ ಸೆಕೆಂಡ್‌ನಲ್ಲಿ ನಾವು ಪ್ರತಿಯೊಬ್ಬರೂ ಎಲ್ಲಾ ಅಶುಭಗಳನ್ನು ಓಡಿಸಲು ಪ್ರಯತ್ನಿಸುತ್ತಿದ್ದೇವೆ ಮತ್ತು ವಿವಿಧ ವಿಧಾನಗಳ ಮೂಲಕ ಸಾಧ್ಯವಾದಷ್ಟು ಮಂಗಳವನ್ನು ತರಲು ಹೆಣಗಾಡುತ್ತೇವೆ. ಆದರೆ ಪರಮ ಪ್ರಭು ಶ್ರೀಕೃಷ್ಣನ ಪವಿತ್ರ ನಾಮವನ್ನು ಜಪಿಸುವುದರಿಂದ ಅಪರಿಮಿತ ಪ್ರಮಾಣದ ಐಶ್ವರ್ಯವನ್ನು ಯಾರೂ ಊಹಿಸಲೂ ಸಾಧ್ಯವಿಲ್ಲ. ಒಬ್ಬನು ಪರಮಾತ್ಮನ ನಾಮವನ್ನು ಜಪಿಸಲು ಪ್ರಾರಂಭಿಸಿದಾಗ ಅವನ ಹಿಂದಿನ ಲಕ್ಷಾಂತರ ಜನ್ಮಗಳ ಎಲ್ಲಾ ಸಂಚಿತ ಪಾಪಗಳು ತಕ್ಷಣವೇ ಸುಟ್ಟು ಬೂದಿಯಾಗುತ್ತವೆ, ಅದು ಒಬ್ಬರ ಜೀವನದಲ್ಲಿ ಎಲ್ಲಾ ಅಶುಭಗಳಿಗೆ ಏಕೈಕ ಮೂಲವಾಗಿದೆ. ಇದು ಎಲ್ಲಾ ವೈದಿಕ ಸಾಹಿತ್ಯಗಳಲ್ಲಿ ಪದೇ ಪದೇ ದೃಢೀಕರಿಸಲ್ಪಟ್ಟಿದೆ. ಈ ಒಂದು ಮಹಾಮಂತ್ರವು ಇತರ ಎಲ್ಲಾ ಶಕ್ತಿಯುತ ಮಂತ್ರಗಳ ಸಾಮರ್ಥ್ಯವನ್ನು ಹೊಂದಿದೆ ಮತ್ತು ಈ ಹರೇ ಕೃಷ್ಣ ಮಹಾಮಂತ್ರಕ್ಕಿಂತ ಬೇರೆ ಯಾವುದೇ ಮಂತ್ರವು ಸಮಾನವಾಗಿಲ್ಲ ಅಥವಾ ದೊಡ್ಡದಲ್ಲ. ಮಹಾಮಂತ್ರವನ್ನು ಪಠಿಸುವ ಶಕ್ತಿಯು ಊಹಿಸಲಾಗದು ಮತ್ತು ಈ ಕಲಿಯುಗದಲ್ಲಿ ಪರಮಾತ್ಮನಾದ ಶ್ರೀಕೃಷ್ಣನ ಪಾದಕಮಲಗಳನ್ನು ಸಾಧಿಸಲು ಇದು ಏಕೈಕ ಅಧಿಕೃತ, ಭವ್ಯವಾದ, ನೇರವಾದ, ಸುಲಭವಾದ ಮತ್ತು ಖಚಿತವಾದ ವಿಧಾನವಾಗಿದೆ.



ಕಲಿಯುಗ ಎಂದರೆ ಜಗಳ ಬೂಟಾಟಿಕೆಗಳ ಯುಗ ಆದ್ದರಿಂದ ಕಲಿಯುಗದ ಎಲ್ಲಾ ದೋಷಗಳನ್ನು ಸರಿಪಡಿಸಲು ಇಂದಿನಿಂದ ಪ್ರತಿದಿನ ಹರೇ ಕೃಷ್ಣ ಮಹಾಮಂತ್ರವನ್ನು ಕನಿಷ್ಠ 108 ಬಾರಿ ಪಠಿಸಲು ಮತ್ತು ನಿಮ್ಮ ಜೀವನವನ್ನು ಅನಿಯಮಿತ ಮಂಗಳಕರವಾಗಿಸಲು ದಯವಿಟ್ಟು ನಿಮ್ಮ ಪ್ರತಿ 24 ಗಂಟೆಗಳಲ್ಲಿ ಕೇವಲ 8 ನಿಮಿಷಗಳನ್ನು ಮೀಸಲಿಡಬೇಕೆಂದು ನಾನು ವಿನಂತಿಸುತ್ತೇನೆ.

# ಡೆಂಗ್ಯೂ ಜ್ವರ ಹೇಗೆ ನಮ್ಮ ಮೆದುಳಿಗೆ ಹಾನಿಯನ್ನುಂಟು ಮಾಡುತ್ತೆ ಗೊತ್ತಾ?

ಮಳೆಗಾಲದಲ್ಲಿ ಹೆಚ್ಚಾಗಿ ಕಾಡುವ ಕಾಯಿಲೆಯೆಂದರೆ ಸೊಳ್ಳೆಗಳಿಂದ ಬರುವಂತಹ ಡೆಂಗ್ಯೂ, ಮಲೇರಿಯಾ. ಈ ಡೆಂಗ್ಯೂ ಜ್ವರವು ಹೇಗೆ ನಮ್ಮ ಮೆದುಳನ್ನು ಹಾನಿಗೊಳಿಸುತ್ತದೆ ಎನ್ನುವುದರ ಬಗ್ಗೆ ತಿಳಿಯೋಣ.

ಮಳೆಗಾಲದಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗುತ್ತದೆ. ಅಲ್ಲದೆ ಮಳೆಯ ನೀರು ಅಲ್ಲಲ್ಲಿ ನಿಂತಿರುವುದರಿಂದ ಆ ನೀರಿನಲ್ಲಿ ಸೊಳ್ಳೆಗಳು ಸಂತಾನೋತ್ಪತ್ತಿ ಮಾಡಲಾರಂಭಿಸುತ್ತದೆ.

ಈ ಸೊಳ್ಳೆಗಳು ಜನರಿಗೆ ಸೋಂಕನ್ನು ಹರಡುತ್ತವೆ. ಇವು ಅನೇಕ ಬಾರಿ ಡೆಂಗ್ಯೂ, ಮಲೇರಿಯಾ, ಚಿಕುನ್ ಗುನ್ಯಾದಂತಹ ಕಾಯಿಲೆಗೆ ಕಾರಣವಾಗಬಲ್ಲದು. ಇವು ಸಾಮಾನ್ಯವಾಗಿ ತೀವ್ರ ಜ್ವರ, ತಲೆನೋವು, ಸ್ನಾಯು ನೋವು, ಪ್ಲೇಟ್‌ಲೆಟ್‌ಗಳಲ್ಲಿ ಇಳಿಕೆಯನ್ನು ಹೊಂದಿರುತ್ತದೆ. ಆದರೆ ಈ ಡೆಂಗ್ಯೂವಿನಂತಹ ಕಾಯಿಲೆ ಯಾವ ರೀತಿ ನಮ್ಮ ಮೆದುಳಿನ ಮೇಲೆ ಪರಿಣಾಮ ಬೀರುತ್ತದೆ ಎನ್ನುವುದು ನಿಮಗೆ ಗೊತ್ತಾ


**ಡೆಂಗ್ಯೂ ಎನ್ಸೆಫಲೋಪತಿ:** ಡೆಂಗ್ಯೂ ಸೊಳ್ಳೆಯಿಂದ ಉಂಟಾಗುವ ಜ್ವರವು ನಮ್ಮನ್ನು ಅಪಾಯಕ್ಕೆ ಸಿಲುಕಿಸುವ ಅನೇಕ ತೊಡಕುಗಳ ಜೊತೆಗೆ ಮೆದುಳಿನ ಮೇಲಿನ ಪರಿಣಾಮವು ಗಮನಕ್ಕೆ ಬಂದಿದೆ. ಚಿಕ್ಕ ಮಕ್ಕಳು ಮತ್ತು ಹದಿಹರೆಯದವರಲ್ಲಿ ಡೆಂಗ್ಯೂ ಎನ್ಸೆಫಲೋಪತಿ ಪ್ರಕರಣಗಳು ಹೆಚ್ಚುತ್ತಿವೆ. ಡೆಂಗ್ಯೂ ವೈರಸ್‌ನಿಂದ ಉಂಟಾಗುವ ಮೆದುಳಿನ ಉರಿಯೂತದಿಂದ ಉಂಟಾಗುವ ಅಪರೂಪದ ತೊಡಕು ಇದಾಗಿದ್ದು, ಅರೆನಿದ್ರಾವಸ್ಥೆ, ನಿದ್ರಾಹೀನತೆ ಮತ್ತು ರೋಗಗ್ರಸ್ತವಾಗುವಿಕೆಗಳಂತಹ ಲಕ್ಷಣಗಳ ರೂಪದಲ್ಲಿ ಕಾಣಿಸಿಕೊಳ್ಳುತ್ತದೆ.

**ಡೆಂಗ್ಯೂ ಮೆದುಳಿನ ಮೇಲೆ ಹೇಗೆ ಪರಿಣಾಮ ಬೀರುತ್ತದೆ:**



### ಡೆಂಗ್ಯೂವನ್ನು ಹೇಗೆ ತಡೆಗಟ್ಟಬಹುದು

- **ಡೆಂಗ್ಯೂವನ್ನು ತಪ್ಪಿಸುವುದು ಉತ್ತಮ ಮಾರ್ಗವಾಗಿದೆ.**
- **ಮನೆಯಲ್ಲಿ ಮತ್ತು ಸುತ್ತಮುತ್ತ ಸೊಳ್ಳೆಗಳು ಸಂತಾನೋತ್ಪತ್ತಿ ಮಾಡಲು ಬಿಡಬೇಡಿ.**
- **ಉದ್ದ ತೋಳಿನ ಬಟ್ಟೆಗಳನ್ನು ಧರಿಸಿ.**
- **ಸೊಳ್ಳೆ ಪರದೆಗಳು ಮತ್ತು ನಿವಾರಕಗಳನ್ನು ಬಳಸಿ.**
- **ನೀರು ಸಂಗ್ರಹವಾಗಲು ಬಿಡಬೇಡಿ.**
- **ಜ್ವರ ಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಪರೀಕ್ಷೆ ಮಾಡಿಸಿಕೊಳ್ಳಿ.**



ಡೆಂಗ್ಯೂ ವೈರಸ್ ಫ್ಲಾವಿವಿರಿಡೆ ಕುಟುಂಬದ ಆರ್‌ಎನ್‌ಎ ವೈರಸ್ ಆಗಿದೆ. ಈ ವೈರಸ್‌ಗಳು ದೇಹದ ಪ್ರತಿರಕ್ಷಣಾ ವ್ಯವಸ್ಥೆಯ ಮೇಲೆ ದಾಳಿ ಮಾಡುವುದಲ್ಲದೆ ರಕ್ತ ಕಣಗಳ ಮೇಲೆ ಪರಿಣಾಮ ಬೀರುತ್ತವೆ. ದೇಹದ ರೋಗನಿರೋಧಕ ವ್ಯವಸ್ಥೆ ದುರ್ಬಲಗೊಂಡಾಗ, ವೈರಸ್ ಮೆದುಳು ಸೇರಿದಂತೆ ಅನೇಕ ಅಂಗಗಳಿಗೆ ಹರಡಬಹುದು. ಡೆಂಗ್ಯೂ ವೈರಸ್ ಸಾಮಾನ್ಯವಾಗಿ ರಕ್ತ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತದೆ. ಆದರೆ ಕೆಲವು ಸಂದರ್ಭಗಳಲ್ಲಿ ಅದು ರಕ್ತ ಮೆದುಳಿನ ತಡೆಗೋಡೆಯನ್ನು ದಾಟಿ ಮೆದುಳಿಗೆ ಪ್ರವೇಶಿಸುತ್ತದೆ. ಈ ಸ್ಥಿತಿ ಅಪರೂಪ, ಆದರೆ ಅದು ಸಂಭವಿಸಿದಾಗ ಅದನ್ನು ನ್ಯೂರೋ ಡೆಂಗ್ಯೂ ಎಂದು ಕರೆಯಲಾಗುತ್ತದೆ. **ನೇರ ವೈರಲ್ ಆಕ್ರಮಣ:** ಕೆಲವು ಸಂದರ್ಭ ಗಳಲ್ಲಿ, ಡೆಂಗ್ಯೂ ವೈರಸ್ ನೇರವಾಗಿ ಮೆದುಳಿನ ಅಂಗಾಂಶಗಳಿಗೆ ಸೋಂಕು ತಗಲಿಸುತ್ತದೆ. ಇದು ಡೆಂಗ್ಯೂ ಎನ್ಸೆಫಾಲಿಟಿಸ್‌ಗೆ ಕಾರಣವಾಗುತ್ತದೆ.



ಇದನ್ನು ಮೆದುಳಿನಲ್ಲಿ ಉರಿಯೂತ ಎಂದೂ ಕರೆಯುತ್ತಾರೆ. ಇದು ಗೊಂದಲ, ರೋಗಗ್ರಸ್ತವಾಗುವಿಕೆಗಳು, ಪ್ರಜ್ಞಾಹೀನತೆ ಮತ್ತು ಕೋಮಾದಂತಹ ಪರಿಸ್ಥಿತಿಗಳಿಗೆ ಕಾರಣವಾಗಬಹುದು.

**ರೋಗನಿರೋಧಕ-ಮಧ್ಯಸ್ಥಿಕೆಯ ಹಾನಿ:** ಕೆಲವೊಮ್ಮೆ ಡೆಂಗ್ಯೂ ವೈರಸ್ ಮೆದುಳಿಗೆ ನೇರವಾಗಿ ಸೋಂಕು ತಗುಲಿಸುವುದಿಲ್ಲ. ಆದರೆ ದೇಹದ ರೋಗನಿರೋಧಕ ವ್ಯವಸ್ಥೆಯು ಅತಿಯಾಗಿ ಸಕ್ರಿಯವಾಗುತ್ತದೆ ಮತ್ತು ಮೆದುಳಿನ ಕೋಶಗಳ ಮೇಲೆ ದಾಳಿ ಮಾಡಲು ಪ್ರಾರಂಭಿಸುತ್ತದೆ. ಇದು ಎಡಿಮಾ ನರಕೋಶಗಳಿಗೆ ಹಾನಿ, ನರವೈಜ್ಞಾನಿಕ ಸಮಸ್ಯೆಗಳನ್ನು ಉಂಟುಮಾಡುತ್ತದೆ.

**ಮೆದುಳಿನಲ್ಲಿ ರಕ್ತಸ್ರಾವ:** ಡೆಂಗ್ಯೂನಲ್ಲಿ ಪ್ಲೇಟ್ ಲೆಟ್‌ಗಳ ಸಂಖ್ಯೆ ವೇಗವಾಗಿ ಕಡಿಮೆಯಾಗುತ್ತದೆ. ಇದರಿಂದಾಗಿ ದೇಹದಲ್ಲಿ ರಕ್ತ ಹೆಪ್ಪುಗಟ್ಟುವಿಕೆ ರೂಪುಗೊಳ್ಳುವುದಿಲ್ಲ ಇದರಿಂದ ಮೆದುಳಿನಲ್ಲಿ ರಕ್ತಸ್ರಾವವಾಗುವ ಸಾಧ್ಯತೆ ಹೆಚ್ಚಾಗುತ್ತದೆ. ಈ ಸ್ಥಿತಿಯು ಅತ್ಯಂತ ಗಂಭೀರವಾಗಿರುತ್ತದೆ.

**ಸೆರೆಬ್ರಲ್ ವ್ಯಾಸ್ಕುಲೈಟಿಸ್:** ಡೆಂಗ್ಯೂನ ಕೆಲವು ಸಂದರ್ಭಗಳಲ್ಲಿ, ಮೆದುಳಿನ ರಕ್ತನಾಳಗಳು ಊದಿಕೊಳ್ಳುತ್ತವೆ, ಇದು ರಕ್ತ ಪರಿಚಲನೆಯನ್ನು ಅಡ್ಡಿ ಪಡಿಸುತ್ತದೆ ಮತ್ತು ನರವೈಜ್ಞಾನಿಕ ಲಕ್ಷಣಗಳನ್ನು ಉಂಟುಮಾಡುತ್ತದೆ.

# ಬದನೆಕಾಯಿ ತಿನ್ನೋದ್ರಿಂದ ಕಿಡ್ನಿಸ್ಟೋನ್ ಆಗುತ್ತಾ?

ಕೆಲವರಿಗೆ ಬದನೆಕಾಯಿ ಅಂದ್ರೆ ತುಂಬಾನೇ ಇಷ್ಟ. ಹಾಗಂತ ಸಿಕ್ಕಾಪಟ್ಟೆ ಬದನೆಕಾಯಿ ತಿನ್ನೋ ತಪ್ಪನ್ನು ಮಾಡಬೇಡಿ. ಅದರಲ್ಲೂ ಕಿಡ್ನಿಸ್ಟೋನ್ ಸಮಸ್ಯೆ ಇರುವವರು ಬದನೆಕಾಯಿಯಿಂದ ಆದಷ್ಟು ದೂರ ಇರೋದು ಒಳ್ಳೆಯದು. ಕೆಲವರಿಗೆ ಬದನೆಕಾಯಿ ಎಂದರೆ ಅಚ್ಚುಮೆಚ್ಚಿನ ತರಕಾರಿ. ಇನ್ನು ಕೆಲವರಿಗೆ ಇದು ಇಷ್ಟವಿರೋದಿಲ್ಲ. ನಮ್ಮ ಮನೆಗಳಲ್ಲಿ ಸಾಮಾನ್ಯವಾಗಿ ಬೇಯಿಸುವ ತರಕಾರಿಗಳಲ್ಲಿ ಬದನೆಕಾಯಿ ಕೂಡಾ ಒಂದು.

ಆದರೆ ಬದನೆಕಾಯಿ ತಿನ್ನುವುದರಿಂದ ಮೂತ್ರಪಿಂಡದ ಕಲ್ಲುಗಳ ಸಮಸ್ಯೆ ಹೆಚ್ಚುತ್ತದೆ ಎನ್ನುವುದರ ಬಗ್ಗೆ ನೀವು ಕೇಳಿದ್ದೀರಾ ಈ ವಿಷಯವು ಅನೇಕ ಜನರನ್ನು ಹೆದರಿಸುತ್ತದೆ. ವಿಶೇಷವಾಗಿ ಮೂತ್ರಪಿಂಡದ ಕಲ್ಲುಗಳಂತಹ ಸಮಸ್ಯೆಗಳಿಂದ ಈಗಾಗಲೇ ಹೋರಾಡುತ್ತಿರುವವರು ಬದನೆಕಾಯಿಯನ್ನು ತಿನ್ನಬಾರದಂತೆ.

**ಬದನೆಕಾಯಿಯಲ್ಲಿ ಏನಿದೆ:** ಬದನೆಕಾಯಿಯಲ್ಲಿ ಫೈಬರ್, ಉತ್ಕರ್ಷಣ ನಿರೋಧಕಗಳು, ವಿಟಮಿನ್ ಬಿ 12 ಮತ್ತು ಮೆಗ್ನೀಸಿಯಮ್ ನಂತಹ ಪೋಷಕಾಂಶಗಳಿವೆ. ಇದು ಕಡಿಮೆ ಕ್ಯಾಲೋರಿ ಹೊಂದಿರುವ ತರಕಾರಿಯಾಗಿದ್ದು ಜೀರ್ಣಕ್ರಿಯೆ ಮತ್ತು ರಕ್ತದಲ್ಲಿನ ಸಕ್ಕರೆ ನಿಯಂತ್ರಣಕ್ಕೆ ಸಹಾಯ ಮಾಡುತ್ತದೆ.

**ಮೂತ್ರಪಿಂಡದ ಕಲ್ಲಿನ ಸಮಸ್ಯೆ ಇರುವವರಿಗೆ ಒಳ್ಳೆಯದಲ್ಲ:** ಬದನೆಕಾಯಿಯಲ್ಲಿ ಆಕ್ಸಲೇಟ್‌ಗಳು ಸಮೃದ್ಧವಾಗಿವೆ. ಆಕ್ಸಲೇಟ್‌ಗಳು ಮೂತ್ರಪಿಂಡದ ಕಲ್ಲುಗಳ ರಚನೆಗೆ ಕೊಡುಗೆ ನೀಡುತ್ತವೆ. ಆದ್ದರಿಂದ ಮೂತ್ರಪಿಂಡದ ಕಲ್ಲುಗಳ ಇತಿಹಾಸ ಹೊಂದಿರುವ ರೋಗಿಗಳು ಬದನೆಕಾಯಿಯನ್ನು ಆಗಾಗ್ಗೆ ಸೇವಿಸುವುದನ್ನು ತಪ್ಪಿಸುವುದು ಒಳ್ಳೆಯದು.

**ಇದು ಎಲ್ಲರಿಗೂ ಅಪಾಯಕಾರಿಯೇ:** ಬದನೆಕಾಯಿ ತಿನ್ನುವುದು ಎಲ್ಲರಿಗೂ ಹಾನಿಕಾರಕವಲ್ಲ. ಈಗಾಗಲೇ ಮೂತ್ರಪಿಂಡದ ಕಲ್ಲಿನ ಸಮಸ್ಯೆ ಇರುವವರು, ಹೆಚ್ಚಿನ ಆಕ್ಸಲೇಟ್ ಆಹಾರಗಳನ್ನು ತಪ್ಪಿಸುವುದು ಮುಖ್ಯ. ಸಾಮಾನ್ಯ ವ್ಯಕ್ತಿಗೆ ವಾರಕ್ಕೆ 2 ರಿಂದ 3 ಬಾರಿ ಬದನೆಕಾಯಿ ತಿನ್ನುವುದು ಸುರಕ್ಷಿತವೆಂದು ಪರಿಗಣಿಸಲಾಗುತ್ತದೆ. ಆದರೆ ನಿಮ್ಮ ಕುಟುಂಬದಲ್ಲಿ ಮೂತ್ರಪಿಂಡದ ಕಲ್ಲುಗಳ ಇತಿಹಾಸವಿದ್ದರೆ ಅಥವಾ ನಿಮ್ಮ ವೈದ್ಯರು ಅದನ್ನು ತಪ್ಪಿಸಲು ಸಲಹೆ ನೀಡಿದ್ದರೆ ಅದನ್ನು ಸೇವಿಸುವುದನ್ನು ಕಡಿಮೆ ಮಾಡುವುದು ಉತ್ತಮ. **ಸಮತೋಲನವನ್ನು ಹೇಗೆ ಕಾಪಾಡಿಕೊಳ್ಳುವುದು:** ನೀವು ಬದನೆಕಾಯಿ ತಿನ್ನಲು ಇಷ್ಟಪಡುತ್ತೀರಿ ಆದರೆ ಮೂತ್ರಪಿಂಡದ ಕಲ್ಲುಗಳ ಅಪಾಯದಿಂದ ಪಾರಾಗಲು ಬಯಸಿದರೆ, ಅದಕ್ಕೆ ನಿಂಬೆ ರಸವನ್ನು ಸೇರಿಸಿ, ಹೆಚ್ಚು ನೀರು ಕುಡಿಯಿರಿ ಮತ್ತು ನಿಮ್ಮ ಆಹಾರದಲ್ಲಿ ಕಡಿಮೆ ಉಪ್ಪನ್ನು ಸೇವಿಸಿ. ಸಾಮಾನ್ಯ ಪ್ರಮಾಣದಲ್ಲಿ ಬದನೆಕಾಯಿ ತಿನ್ನುವುದರಿಂದ ಯಾವುದೇ ಗಂಭೀರ



### ಆಕ್ಸಲೇಟ್‌ನ ಪಾತ್ರವೇನು?

**ಬದನೆಕಾಯಿಯಲ್ಲಿ ಆಕ್ಸಲೇಟ್ ಎಂಬ ಸಂಯುಕ್ತ ಕಂಡುಬರುತ್ತದೆ. ಆಕ್ಸಲೇಟ್ ದೇಹವನ್ನು ಪ್ರವೇಶಿಸಿ ಕ್ಯಾಲ್ಸಿಯಂನೊಂದಿಗೆ ಸೇರಿ ಹರಳುಗಳನ್ನು ರೂಪಿಸಬಹುದು, ಇದು ಮೂತ್ರಪಿಂಡದಲ್ಲಿ ಕಲ್ಲುಗಳು ರೂಪುಗೊಳ್ಳಲು ಕಾರಣವಾಗಬಹುದು. ಕಿಡ್ನಿಸ್ಟೋನ್ ಸಮಸ್ಯೆ ಇರುವ ವ್ಯಕ್ತಿಗಳು ಕಲ್ಲುಗಳ ರಚನೆಯನ್ನು ತಡೆಯಲು ಕಡಿಮೆ ಆಕ್ಸಲೇಟ್ ಆಹಾರವನ್ನು ಅನುಸರಿಸಲು ಸಲಹೆ ನೀಡಲಾಗುತ್ತದೆ.**

## ಅಕ್ರಮ ಮದ್ಯ ಮಾರಾಟ: ಬಂಧನ

• ಉದಯವಾಹಿನಿ ಕಲಬುರಗಿ,

ನಗರದ ರೋಜಾ (ಕೆ) ಖಾನಾಪುರ ಬಡಾವಣೆಯ ಸಮುದಾಯ ಭವನದ ಹತ್ತಿರ ರಸ್ತೆಯ ಪಕ್ಕದಲ್ಲಿ ವ್ಯಕ್ತಿಯೊಬ್ಬ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾನೆ ಎಂಬ ಮಾಹಿತಿ ಮೇಲೆ ರೋಜಾ ಪೊಲೀಸ್ ಠಾಣೆ ಎಎಸ್ಐ ಖಾಸಿಂ ಅಲಿ, ಸಿಬ್ಬಂದಿಗಳಾದ ಹಮಿಯೋದ್ದೀನ್, ಶಾರೂಖಾನ್ ಅವರು ದಾಳಿ ನಡೆಸಿದ್ದಾರೆ.

ರೋಜಾ (ಕೆ) ಖಾನಪುರ ನಿವಾಸಿ ಕುಪೇಂದ್ರ, ಪೀರಪ್ಪ ಶಿಂಘೆ (55) ಎಂಬಾತನನ್ನು ಬಂಧಿಸಿ 2600 ರೂ.ಮೌಲ್ಯದ ಮದ್ಯ ಜಪ್ತಿ ಮಾಡಿದ್ದಾರೆ. ರೋಜಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮುರ ಜಂಕ್ಷನ್‌ನಲ್ಲಿ ನಿರಂತರ ಅಪಘಾತ: ಕ್ರಮಕ್ಕೆ ಆಗ್ರಹ

• ಉದಯವಾಹಿನಿ ಪುತ್ತೂರು

ತಾಲ್ಲೂಕಿನ ಕಬಕ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುರ ಜಂಕ್ಷನ್ ಬಳಿ ಮಾಣಿ–ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಅಪಘಾತ ತಡೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕಬಕ ಗ್ರಾಮ ಪಂಚಾಯಿತಿ ಹಾಗೂ ಸಾರ್ವಜನಿಕರು ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಮನವಿ ಸಲ್ಲಿಸಿದರು. ಕಬಕ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಶೀಲಾ, ಸದಸ್ಯರಾದ ವಿನಯ ಕುಮಾರ್ ಕಲ್ಲೇಗ, ಶಾಬಾ ಕೆ., ಶಂಕರಿ ಜಿ.ಭಟ್, ಗ್ರಾಮಸ್ಥರಾದ ರಶೀದ್ ಮುರ, ಕೇಶವ, ಉಮೇಶ್ ಆಚಾರ್ಯ ಮೊದಲಾದವರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ನವೀನ್ ಕುಮಾರ್ ಭಂಡಾರಿ ಅವರಿಗೆ ಗುರುವಾರ ಮನವಿ ಸಲ್ಲಿಸಿದ್ದಾರೆ. ಮುರ ಜಂಕ್ಷನ್‌ನಿಂದ ಕೆದಿಲ ಸಂಪರ್ಕಿಲು ಇದ್ದ ಹಿಂದಿನ ರಸ್ತೆಯನ್ನು


ಉದಯವಾಹಿನಿ ಚಿತ್ರ

ಬದಲಿಸಿ ಹೊಸದಾಗಿ ರೈಲ್ವೆ ಮೇಲ್ಸೇತುವೆ ನಿರ್ಮಾಣಗೊಂಡಿದೆ. ಆ ರಸ್ತೆಯಲ್ಲಿ ವಾಹನ ಸಂಚಾರ ಪ್ರಾರಂಭಗೊಂಡ ಬಳಿಕ ನಿರಂತರವಾಗಿ ಮುರ ಜಂಕ್ಷನ್‌ನಲ್ಲಿ ಅಪಘಾತಗಳು ನಡೆಯುತ್ತಿವೆ.

ಅವೈಜ್ಞಾನಿಕವಾಗಿ ನಿರ್ಮಾಣವಾದ ರೈಲ್ವೆ ಮೇಲ್ಸೇತುವೆ ಹಾಗೂ ರಸ್ತೆಯ ಸಮೀಪದಲ್ಲೇ ರೈಲ್ವೇ ಇಲಾಖೆಗೆ ಸೇರಿದ ಜಾಗದಲ್ಲಿ ಮರಗಳಿರುವುದರಿಂದ ಅಪಘಾತಗಳು ಆಗುತ್ತಿವೆ ಎಂದು ಅವರು ಮನವಿಯಲ್ಲಿ ಉಲ್ಲೇಖಿಸಿದ್ದಾರೆ. ಮುರ ಜಂಕ್ಷನ್‌ನಲ್ಲಿ ನಿರಂತರವಾಗಿ ಅಪಘಾತ ನಡೆಯುತ್ತಿರುವ ಸಂಬಂಧ ಸಾರ್ವಜನಿಕರು ಸಲ್ಲಿಸಿದ್ದ ಮನವಿಗೆ ಸ್ಪಂದಿಸಿದ ಸಂಚಾರ ಠಾಣೆಯ ಪೊಲೀಸರು ಹಂಪ್‌ಗಳನ್ನು ನಿರ್ಮಾಣ ಮಾಡಿದ್ದರು. ಆದರೆ, ಅದನ್ನು ರಾಷ್ಟ್ರೀಯ ಹೆದ್ದಾರಿ ಇಲಾಖೆಯವರು ತೆರವುಗೊಳಿಸಿದ್ದಾರೆ. ರಸ್ತೆಯ ಎರಡೂಕಡೆ ಅನಧಿಕೃತವಾಗಿ ಹಣ್ಣು ಮಾರಾಟಮಾಡಲಾಗುತ್ತಿದೆ. ಅಲ್ಲಿಗೆ ಬರುವ ಗ್ರಾಹಕರ ವಾಹನ ನಿಲುಗಡೆ ಮಾಡುವ ಕಾರಣದಿಂದ ಮತ್ತಷ್ಟು ತೊಂದರೆ ಆಗುತ್ತಿದೆ ಎಂದು ಒತ್ತಾಯಿಸಿದ್ದಾರೆ.

## ಡೆಂಗಿ ತಡೆಗೆ ಎಲ್ಲರ ಸಹಕಾರ ಅಗತ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ ಅರಕಲಗೂಡು

ಡೆಂಗಿ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಜಾಗೃತಿ ಕಾರ್ಯ ನಡೆಸಿದ್ದು ಸಾರ್ವಜನಿಕರ ಸಹಕಾರ ಅಗತ್ಯ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಪುಷ್ಪಲತಾ ತಿಳಿಸಿದರು.

ರಾಷ್ಟ್ರೀಯ ಡೆಂಗಿ ನಿಯಂತ್ರಣ ದಿನದ ಅಂಗವಾಗಿ ಇಲ್ಲಿ ಪಿಡಿಒಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಇದು ಸೊಳ್ಳೆಯಿಂದ ಹರಡುವ ರೋಗ. ಸ್ವಚ್ಛತೆಗೆ ಆದ್ಯತೆ ನೀಡಿದರೆ ಸೊಳ್ಳೆಗಳ ನಿಯಂತ್ರಣ ಸಾಧ್ಯ. ರಸ್ತೆ ಚರಂಡಿಗಳಲ್ಲಿ ನೀರು, ಕೊಳಚೆ ತುಂಬಿ ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗದಂತೆ ತಡೆಯಬೇಕು. ಪಂಚಾಯಿತಿಗಳು ಡೆಂಗಿ ಕುರಿತು ಜನರಲ್ಲಿ ಅರಿವು ಮೂಡಿಸಬೇಕು. ರೋಗ ಲಕ್ಷಣ ಇದ್ದವರು ವೈದ್ಯರಿಂದ ಚಿಕಿತ್ಸೆ ಪಡೆಯುಯಬೇಕು. ಕೋವಿಡ್ ತಡೆ ಕುರಿತು ಕೂಡ ಜಾಗೃತಿ ಮೂಡಿಸಬೇಕು ಎಂದರು.

ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಡಿ.ಡಿ. ಪ್ರಕಾಶ್ ಮಾತನಾಡಿ, ಶಾಲೆ ಅಂಗನವಾಡಿ ಕೇಂದ್ರಗಳ ಬಳಿ ಸ್ವಚ್ಛತೆಗೆ ಹೆಚ್ಚಿನ ಗಮನ ನೀಡುವಂತೆ ತಿಳಿಸಿದರು. ಕೀಟ ಶಾಸ್ತ್ರಜ್ಞ ರಾಜೇಶ್ ಕುಲಕರ್ಣಿ ಡೆಂಗಿ ರೋಗ, ನಿಯಂತ್ರಣ ಕ್ರಮಗಳ ಕುರಿತು ಮಾಹಿತಿ ನೀಡಿದರು.

### ಶಿಕ್ಷಣವೆಂದರೆ ಜ್ಞಾನ ಕೌಶ್ಯಲ್ಯ ಮತ್ತು ಒಂದು ಗುಂಪಿನ ಪದ್ದತಿಯಲ್ಲಿ ಭೋದನೆ ಮಾಡುವದಾಗಿದ್ದು ಇದಕ್ಕೆ ತರಬೇತಿ ಶಿಕ್ಷಣವೆನ್ನಲಾಗುತ್ತಿದೆ

## ತಾಯಿ ದೇವರಾಗಬಹುದು, ದೇವರು ತಾಯಿಯಾಗಲಾರ: ಶಿಕ್ಷಕಿ ನಾಡಗೌಡ

• ಉದಯವಾಹಿನಿ ತಾಳಿಕೋಟೆ

ವಿದ್ಯಾರ್ಥಿ ಸ್ಥಾನಮಾನ ಹೊಂದಿದವರು ತಂದೆ ತಾಯಿಯವರನ್ನು ದೇವರೆಂದು ಕಾಣಿರಿ ಅದರಂತೆ ಕಲಿಸಿದ ಗುರುವನ್ನು ಹಾಗೂ ಗುರುವಿನ ಸ್ಥಾನಮಾನ ವನ್ನು ಅಲಂಕರಿಸಿದಂತಹ ಮಹಾ ಯೋಗಿ ಅವರ ಹಿತನುಡಿಗಳನ್ನು ಆಲಿಸಿ ಪಾಲಿಸಿದರೆ ಮುಂದೊಂದು ದಿನ ವಿದ್ಯಾರ್ಥಿಯಾದವರು ಉನ್ನತ ಸ್ಥಾನಮಾನ ಪಡೆದು ತಮ್ಮ ಜೀವನದಲ್ಲಿ ಬೇಕಾದುದ್ದನ್ನು ಸಾದಿಸ ಬಹುದಾಗಿದೆ ಎಂದು ಬಳಗಾನೂರ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಾದ ಶ್ರೀಮತಿ ಮಡಿವಾಳಮ್ಮ ನಾಡಗೌಡ ಅವರು ನುಡಿದರು.

ಇತ್ತೀಚಗೆ ಪಟ್ಟಣದಲ್ಲಿ ಸ್ಪೂರ್ತಿ ಕೋಚಿಂಗ್ ಕ್ಲಾಸಿಸ್ ಬೇಸಿಗೆ ತರಬೇತಿ ಶಿಬಿರದ ಮುಕ್ತಾಯ ಸಮಾರಂಭದಲ್ಲಿ ಏರ್ಪಡಿಸಲಾದ ಅಮ್ಮನಿಗೊಂದು ನಮನ ಎಂಬ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಸ್ಥಾನ ಅಲಂಕರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು ಶಿಕ್ಷಣವೆಂದರೆ ಜ್ಞಾನ ಕೌಶ್ಯಲ್ಯ ಮತ್ತು ಒಂದು ಗುಂಪಿನ ಪದ್ದತಿಯಲ್ಲಿ ಭೋದನೆ ಮಾಡುವದಾಗಿದ್ದು ಇದಕ್ಕೆ ತರಬೇತಿ ಶಿಕ್ಷಣವೆನ್ನಲಾಗುತ್ತಿದೆ ಎಂದರು. ದಿವ್ಯ ಸಾನಿದ್ಯ ವಹಿಸಿ ದೀಪ ಬೆಳಗಿಸುವದರೊಂದಿಗೆ ಕಾರ್ಯಕ್ರಮ ಉದ್ಘಾಟಿಸಿದ ಶ್ರೀ ಖಾಸ್ಗತೇಶ್ವರ ಮಠದ


ಉದಯವಾಹಿನಿ ಚಿತ್ರ

> ಇಂದಿನ ಕಾರ್ಯಕ್ರಮ ನೊಡಿದರೆ ವಿದ್ಯಾಬುದ್ದಿಯನ್ನು ನೀಡುವಂತಹದ್ದಾಗಿದೆ ಹಾಗೂ ಒಳ್ಳೆಯ ಸಂಸ್ಕಾರವನ್ನೂ ಸಹ ನೀಡಲಾಗುತ್ತಿದೆ ಎಂಬುದು ಅನಿಸದೇ ಇರಲಾರದು ವಿದ್ಯಾರ್ಥಿಗಳು ಶಿಕ್ಷಣ ಪಡೆದು ಹೆಚ್ಚಿನ ಅಂಕ ಪಡೆದು ಪ್ರತಿವರ್ಷ ಈ ಸಂಸ್ಥೆಯಲ್ಲಿ ಸನ್ಮಾನಿಸಿಕೊಳ್ಳುತ್ತಾ ಸಾಗಿರುವದು ಹರ್ಷದಾಯಕ ಸಂಗತಿಯಾಗಿದೆ ಈ ಸಂಸ್ಥೆಯ ಸಂಚಾಲಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಕುಮಾರಿ ಶ್ವೇತಾ ಯರಗಲ್ಲ ಅವರ ಕಾರ್ಯ ಮಹತ್ವದ್ದಾಗಿದೆ ಎಂಬುದು ಎದ್ದು ಕಾಣುತ್ತಲಿದೆ ಶಿಕ್ಷಣ ಕ್ಷೇತ್ರದಲ್ಲಿ ಏಷ್ಟು ಕಲಿತರೂ ಕಡಿಮೆ ಶ್ರದ್ದೆ, ಪರಿಶ್ರಮ ಎಂಬುದು ವಿದ್ಯಾರ್ಥಿಗಳಲ್ಲಿ ಬರಬೇಕು ಅಂದರೆ ವಿದ್ಯೆದ ಒಲುಮೆಯಾಗಲಿದೆ -ವೇ.ಮುರುಘೇಶ ವಿರಕ್ತಮಠ, ಶ್ರೀ ಖಾಸ್ಗತೇಶ್ವರ ಮಠದ ಉಸ್ತುವಾರಿ

ಬಾಲಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಆಶೀರ್ವಚನ ವಿಯುತ್ತಾ ವಿದ್ಯಾರ್ಥಿ ಸ್ಥಾನ ಮಾನ ಹೊಂದಿದವರು ಮಾತಾಪಿತರ ಹೆಸರು ತರುವಂತಹ ಕಾರ್ಯ ಮಾಡಬೇಕು ಅವರು ಯಾವ ರೀತಿ ವಿದ್ಯಾಭ್ಯಾಸಕ್ಕಾಗಿ ತಮ್ಮ ದುಡಿಮೆಯಿಂದ ಹಣ ನೀಡಿ ಮಕ್ಕಳಿಗಾಗಿ ಶ್ರಮಿಸುತ್ತಾರೆಂಬುದನ್ನು ವಿದ್ಯಾರ್ಥಿಯಾದವನು ಅರ್ಥೈಸಿಕೊಳ್ಳಬೇಕೆಂದು ಹೇಳಿದ ಶ್ರೀಗಳು ಪ್ರತಿವರ್ಷ ತಾಳಿಕೋಟೆಯಲ್ಲಿ ಜರುಗಲಿರುವ ಶ್ರೀ ಖಾಸ್ಗತೇಶ್ವರ

> ಶಿಕ್ಷಣವು ಸಾಮಾನ್ಯವಾಗಿ ಪ್ರಾಥಮಿಕ, ಮಾಧ್ಯಮಿಕ ಹಂತ ನಂತರ ಕಾಲೇಜು ವಿಶ್ವ ವಿದ್ಯಾಲಯಗಳಲ್ಲಿ ಶಿಷ್ಯ ವೃತ್ತಿ ಎಂದು ವಿಂಗಡಿಸಲಾಗುತ್ತಿರುವದರಲ್ಲಿ ಪಡೆಯುತ್ತಿರುವ ಶಿಕ್ಷಣ ಒಳ್ಳೆಯ ಮಾರ್ಗದತ್ತ ಕೊಂಡೊಯುತ್ತದೆ ಅಂತಹ ಒಳ್ಳೆಯ ಮಾರ್ಗದತ್ತ ವಿದ್ಯಾರ್ಥಿಗಳನ್ನು ಕೊಂಡೊಯುವ ಕಾರ್ಯ ತಾಳಿಕೋಟೆಯ ಸ್ಪೂರ್ತಿ ಶಿಕ್ಷಣ ಕ್ಲಾಸಿಸ್‌ನಲ್ಲಿ ನಡೆಯುತ್ತಿರುವದರಿಂದ ವಿದ್ಯಾರ್ಥಿಗಳಿಗೆ ಒಳ್ಳೆಯ ಮಾರ್ಗದರ್ಶನಕ್ಕೆ ಅನುಕೂಲವಾಗಿದೆ ಪ್ರತಿವರ್ಷ ಈ ಸಂಸ್ಥೆಯಡಿಯಲ್ಲಿ ಶಿಕ್ಷಣ ಪಡೆದು ಹೆಚ್ಚಿನ ಅಂಕಗಳಿಸುವದರೊಂದಿಗೆ ವಿದ್ಯಾರ್ಥಿಗಳು ಸನ್ಮಾನಿಸಿ ಗೌರವಿಸಿಕೊಳ್ಳುತ್ತಿರುವದು ಸಂತಸದ ಸಂಗತಿಯಾಗಿದೆ -ನಾಡಗೌಡ, ಶಿಕ್ಷಕಿ

**ಅಮ್ಮನಿಗೊಂದು ನಮನ ಎಂಬ ಕಾರ್ಯಕ್ರಮ**


ಜಾತ್ರೋತ್ಸವಕ್ಕೆ ಎಲ್ಲರೂ ಬನ್ನಿ ನಮಗೆ ಏನು ಕೊಡುವದು ಬೇಡಾ ನೀವು ಕಲಿಯುತ್ತಿರುವ ಶಿಕ್ಷಣದಲ್ಲಿ ಹೆಚ್ಚಿನ ಅಂಕ ಬಂದಿದೆ ಅಂದರೆ ಸಾಕು ಎಂದು ಹೇಳಿದ ಶ್ರೀಗಳು ವಿದ್ಯಾರ್ಥಿಗಳು ನಿಮ್ಮ ಕಾಲು ಮೇಲೆ ನೀವು ನಿಲ್ಲುವಂತಾಗಿರಿ ಸಾಧನೆ ಎಂಬುದು ಬಹು ಮುಖ್ಯ ಒಳ್ಳೆಯ ಸಾಧನೆ ಮಾಡಿ ನಿಮ್ಮ ಏಳಿಗೆಯನ್ನು ಮಾಡಿಕೊಳ್ಳಿರಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಸಂಚಾಲಕಿ ಕು.ಶ್ವೇತಾ ಯರಗಲ್ಲ ಅವರು ಪ್ರಾಸ್ಥಾವಿಕ ಮಾತನಾಡಿದರು. ಇನ್ನೋರ್ವ ಪುರಸಭಾ ಸದಸ್ಯರಾದ ಜೈಸಿಂಗ್ ಮೂಲಿಮನಿ ಅವರು ವಿದ್ಯಾರ್ಥಿಯಾದವನು ಯಾವ ರೀತಿ ಸಾಧನೆ ಮಾಡಿದರೆ ವಿದ್ಯೆ ಎಂಬುದು ಒಲಿಯುತ್ತದೆ ಎಂಬುದರ ಕುರಿತು ಇತ್ತೀಚಗೆ ತಮ್ಮ ಪುತ್ರ ಎಸ್.ಎಸ್.ಎಲ್.ಸಿ. ಪರಿಕ್ಷೆಯಲ್ಲಿ ರಾಜ್ಯಮಟ್ಟದಲ್ಲಿ 5ನೇ ರ‍್ಯಂಕ್ ಪಡೆದು ಕೊಂಡಿರುವ ಕುರಿತು ವಿವರಿಸಿದರು.

ಇದೇ ಸಮಯದಲ್ಲಿ ಎಸ್‌ಎಸ್‌ಎಲ್‌ಸಿ ಪರಿಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಗಗನಸಿಂಗ್ ಮೂಲಿಮನಿ, ಕವಿತಾ ಚೌದ್ರಿ, ಸುವರ್ಣಾ ಮುದ್ನೂರ, ವಿಜಯಲಕ್ಷ್ಮೀ ಕಡಕಲ್ಲ, ಸನ್ಮಾನಿಸಿ ಗೌರವಿಸಲಾಯಿತು.

ಸಂಸ್ಥೆಯ ಸಂಚಾಲಕರಾದ ಸಿದ್ದಾರೂಡ ಮದರಿ ಅವರು ಅಧ್ಯಕ್ಷತೆ ವಹಿಸಿದ್ದರು.

## ಪೌರ ಕಾರ್ಮಿಕರ ಪರವಾಗಿನಿಂತ ( ಕ. ರ. ವೇ ) ತಾಲ್ಲೂಕು ಅಧ್ಯಕ್ಷ ಶಿವು ಬಗಲಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಇಂಡಿ

> ಪೌರಕಾರ್ಮಿಕರು ತಮ್ಮ ಆರೋಗ್ಯವನ್ನು ಲೆಕ್ಕಿಸದೆ ದುಡಿಯುತ್ತಿರುವವರಾಗಿದ್ದಾರೆ ರಾಜ್ಯದಲ್ಲಿ ಪೌರ ಕಾರ್ಮಿಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಯಾವುದೇ ಪಟ್ಟಣವು ಸುಚಿತ್ವವಾಗಿಡಲು ಅಸಾಧ್ಯ ಅದೇರೀತಿ. ನಗರ ಮತ್ತು ಪಟ್ಟಣಗಳನ್ನು ಸರಿಯಾಗಿ ಸ್ವಚ್ಛ ಇಟ್ಟುಕೊಳ್ಳಬೇಕೆಂದರೆ ಪೌರಕಾರ್ಮಿಕರು ಅತ್ಯವಶ್ಯಕವಾಗಿ ಬೇಕೇ ಬೇಕು ಮತ್ತು ಅವರ ಮತ್ತು ಅವರ ಕುಟುಂಬದ ಆರೋಗ್ಯವು ಸಹ ಚೆನ್ನಾಗಿರಬೇಕು. ಅವರು ಮಾಡುತ್ತಿರುವಂತಹ ಕೆಲಸವು ಅತ್ಯಂತ ಕಷ್ಟದ ಕೆಲಸವು ಸಹ ಆಗಿರುವುದರಿಂದ ಅವರಿಗೂ ಕೂಡ ಸರಕಾರಿ ನೌಕರರ ಮಾನ್ಯತೆ ನೀಡಬೇಕೆ ಎಂದು ಮಾತನಾಡಿದರು. -ಶಿವು ಬಗಲಿ, ( ಕ. ರ. ವೇ ) ಇಂಡಿ ತಾಲ್ಲೂಕ ಅಧ್ಯಕ್ಷರು


ರಾಜ್ಯದಲ್ಲಿರುವ ಎಲ್ಲಾ ಮಹಾನಗರ ಪಾಲಿಕೆ/ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸದ ಕಾರಣ ಕರ್ನಾಟಕ ರಾಜ್ಯ ಪೌರ ನೌಕರರ ಸಂಘ ನಡೆಸಿರುವ ಅನಿರ್ಧಿಷ್ಟ ಕಾಲ ಮುಷ್ಕರವನ್ನು ಬೆಂಬಲಿಸಿ ಹಾಗೂ ರಾಜ್ಯ ಸರಕಾರ ಕೂಡಲೇ ಪೌರನೌಕರರ ಬೇಡಿಕೆಯನ್ನು ಈಡೇರಿಸಬೇಕೆಂದು ಆಗ್ರಹಿಸಿ. ಮಾನ್ಯ ಉಪವಿಭಾಗಾಧಿಕಾರಿಗಳು(ಅಸಿಸ್ಟಂಟ್ ಕಮೀಷನರ್) ಅವರಿಗೆ ನೀಡುತ್ತಿರುವ ಮನವಿ

ರಾಜ್ಯದಲ್ಲಿರುವ ಎಲ್ಲಾ ಮಹಾನಗರ ಪಾಲಿಕೆ/ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸದ ಕಾರಣ ಕರ್ನಾಟಕ ರಾಜ್ಯ ಪೌರ್ ನೌಕರರ ಸಂಘ ಅನಿರ್ಧಿಷ್ಟ ಕಾಲ ಮುಷ್ಕರವನ್ನು ರಾಜ್ಯಾದ್ಯಂತ ಈಗಾಗಲೇ ನಡೆಸುತ್ತಿದ್ದಾರೆ. ಅಂತೆಯೇ ಇಂಡಿ ಪುರಸಭೆಯ ನೌಕರರು ಕೂಡ ಪುರಸಭೆ ಎದುರುಗಡೆ ಮುಷ್ಕರವನ್ನು ಮಾಡುತ್ತಿದ್ದು, ಅವರ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವುದಕ್ಕಾಗಿ ಕರ್ನಾಟಕ ರಕ್ಷಣಾ ವೇದಿಕೆ ಇಂಡಿ ಘಟಕ ಸಹ ಮುಷ್ಕರಕ್ಕೆ ಬೆಂಬಲ ಸೂಚಿಸುತ್ತಿದೆ.

ಅನಿರ್ಧಿಷ್ಟ ಅವಧಿಯ ಮುಷ್ಕರ ಪ್ರಾರಂಭವಾಗಿ 2 ದಿನಗಳಾಗಿದ್ದು, ಪೌರನೌಕರರೆಲ್ಲರೂ ತಮ್ಮ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆಗೆ ಹೋರಾಟದಲ್ಲಿ ಭಾಗಿಯಾದರೆ ನಗರದ ಸ್ವಚ್ಛತೆ, ನೈರ್ಮಲ್ಯಕ್ಕೆ ಭಾರಿ ತೊಂದರೆಯಾಗುತ್ತದೆ. ಇದೇ ರೀತಿ ಮುಂದುವರೆದರೆ ಪಟ್ಟಣದ ಜನರು ತಮ್ಮ ಮನೆಯ ಓಣಿಯ ನಗರದ ಸ್ವಚ್ಛತೆಯನ್ನು ತಾವೇ ಮಾಡಿಕೊಳ್ಳುವ ಅನಿವಾರ್ಯತೆ ಬಂದೊದಗುವ ಸಾಧ್ಯತೆ ಇದೆ.

ಅಷ್ಟಲ್ಲದೇ ಪುರಸಭೆಯಲ್ಲಿನ ಎಲ್ಲಾ ಕೆಲಸ ಕಾರ್ಯಗಳು ಬಾಕಿ ಯುಳಿದು ಸಾರ್ವಜನಿಕರಿಗೆ ಬರೀ ತೊಂದರೆಯಾಗುತ್ತದೆ. ಆದಕಾರಣ ರಾಜ್ಯ ಸರಕಾರ ಕೂಡಲೇ ಪೌರನೌಕರರ ನ್ಯಾಯಸಮ್ಮತ ಬೇಡಿಕೆಯನು ಈಡೇರಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಇಂಡಿ ಘಟಕದಿಂದ ನೀಡುತ್ತಿರುವ ಮನವಿ. ಈ ಸಂದರ್ಭದಲ್ಲಿ. ಸುನೀಲ್ ಕಾಲೇಬಾಗ. ಆನಂದ ಪವಾರ. ಅಂಬರಿಷ ದಶವಂತ. ಶಿವು ಮಲಗೋಡ. ಫಯಾಜ್ ಬಾಗವನ. ಕೇತನ ಕಾಲೇಬಾಗ. ಸಿದ್ದಾರ್ಥ್ ಹಳದಮನಿ. ವಿನೋದ್ ಕಾಳೆ. ಸುನೀಲ್ ಕೋಳಿ ಇನ್ನು ಅನೇಕರು ಉಪಸ್ಥಿತರಿದ್ದರು.

## ಮರ ಬಿದ್ದು ಸಂಚಾರ ಅಸ್ತವ್ಯಸ್ತ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮೂಡಿಗೆರೆ

ತಾಲ್ಲೂಕಿನಾದ್ಯಂತ ಸುರಿಯುತ್ತಿರುವ ಮಳೆಯು ಗುರುವಾರ ಮುಂದುವರಿಯಿತು. ಮಳೆಯ ಬಿರುಸು ಕಡಿಮೆಯಾಗಿದ್ದರೂ, ಇಡೀ ದಿನ ಜಿಟಿ ಜಿಟಿಯಾಗಿ ಸುರಿಯಿತು. ಮಳೆಯಿಂದ ಚಾರ್ಮಾಡಿ ಘಾಟಿಯಲ್ಲಿ ಮರಬಿದ್ದು, ಧರೆ ಕುಸಿದು ಸಂಚಾರಕ್ಕೆ ಅಡ್ಡಿಯಾಗಿತ್ತು. ಜೆಸಿಬಿ ಯಂತ್ರದ ಮೂಲಕ ಮರ, ಮಣ್ಣನ್ನು ತೆರವುಗೊಳಿಸಿ ಸಂಚಾರಕ್ಕೆ ಅವಕಾಶ ಕಲ್ಪಿಸಲಾಯಿತು. ವಾಹನಗಳು ಒಂದೇ ಬದಿಯಲ್ಲಿ ಸಾಗುತ್ತಿದ್ದರಿಂದ, ರಸ್ತೆಯ ಎರಡೂ ಕಡೆಗಳಲ್ಲಿ ವಾಹನಗಳು ಸಾಲು ಗಟ್ಟಿ ನಿಂತಿದ್ದವು. ಮೂಡಿಗೆರೆ – ಗೆಂಡೆಹಳ್ಳಿ ರಸ್ತೆಯಲ್ಲಿ ಮರ ಬಿದ್ದಿದ್ದರಿಂದ ಮೂಡಿಗೆರೆ ಬೇಲೂರು ರಸ್ತೆ ಸಂಚಾರಕ್ಕೆ ಅಡ್ಡಿಯಾಗಿತ್ತು.

## ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ: ಜಿಲ್ಲಾಧಿಕಾರಿ

• ಉದಯವಾಹಿನಿ ಬೀದರ

ಯಾವುದೇ ಜಾತಿ ಧರ್ಮದಲ್ಲಿ ಬರುವ ಹಬ್ಬಗಳನ್ನು ಅವರವರ ಆಚಾರ ವಿಚಾರಕ್ಕೆ ಧಕ್ಕೆ ಬರದಂತೆ ಶಾಂತಿಯುತವಾಗಿ ಆಚರಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಕ್ರೀದ ಹಬ್ಬದ ಆಚರಣೆ ನಿಮಿತ್ಯ ಅನಧಿಕೃತ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ತಡೆಗಟ್ಟಲು ಕುರಿತು ಮುಂಜಾಗ್ರತೆ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜೂನ್.7 ರಂದು ಆಚರಿಸಲ್ಪಡುವ ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಅನಧಿಕೃತವಾಗಿ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ಅಲ್ಲದೇ ಒಂಟೆಗಳ ವಧೆ ಮತ್ತು ಸಾಗಾಣಿಕೆಯನ್ನು ಸಹ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಹಾಗೂ ಔರಾದ ತಾಲ್ಲೂಕಿನ ವನಮಾರಪಳ್ಳಿ ಮತ್ತು ಕಮಲನಗರ ತಾಲ್ಲೂಕಿನ ಕಮಲನಗರನಲ್ಲಿ ಹಾಗೂ ಹುಲಸೂರ ತಾಲ್ಲೂಕಿನ ಹುಲಸೂರ ಚೆಕ್ ಪೋಸ್ಟ್ ಹಾಗೂ ಬೀದರ ತಾಲ್ಲೂಕಿನ ಶಹಾಪೂರ ಗೋಟನಲ್ಲಿ ಸ್ಥಾಪಿಸಿ, ಅಧಿಕಾರಿಗಳನ್ನು ನಿಯೋಜಿಸಿ ಜೂನ.1 ರಿಂದ 7 ರವರೆಗೆ ಜಾನುವಾರುಗಳ / ಒಂಟೆಗಳ ಸಾಗಾಣಿಕೆಯನ್ನು ತಡೆಯಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಪೊಲೀಸ್ ಇಲಾಖೆ ಮತ್ತು ಪಶುಪಾಲನಾ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.


ಉದಯವಾಹಿನಿ ಚಿತ್ರ

> ಬಕ್ರೀದ್ ಹಬ್ಬದ ದಿನದಂದು ಉಂಟಾಗುವ ತ್ಯಾಜ್ಯಗಳನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಲು ನಗರದ ಸ್ವಚ್ಛತೆಯನ್ನು ಕಾಪಾಡಲು ಕ್ರಮ ಕೈಗೊಳ್ಳಲು ನಗರಸಭೆ ಆಯುಕ್ತರಿಗೆ ಸೂಚಿಸಿದರು. ಪಿಂಜರಾಪೋಲ್ ಯೋಜನೆ ಅಡಿ ಗೋಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು -ಜಿಲ್ಲಾಧಿಕಾರಿ

ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯ್ದೆ–2020 ರನ್ವಯ ಹಸು, ಕರು, ಎತ್ತು ಇವುಗಳನ್ನು ಒಟ್ಟಾರೆ ವಧೆ ಮಾಡುವಂತಿಲ್ಲ. 13 ವರ್ಷಗಳ ಎಮ್ಮೆ, ಕೋಣಗಳನ್ನು ಪಶುವೈದ್ಯಾಧಿಕಾರಿಗಳ ದೃಢೀಕರಣದೊಂದಿಗೆ ಮಾತ್ರ ವಧೆ ಮಾಡಬಹುದಾಗಿದೆ. ತಪ್ಪಿದಲ್ಲಿ ಮೊದಲ ಸಲಕ್ಕೆ ರೂ.50,000 ದಿಂದ 5,00,000/– ದಂಡ ಇಲ್ಲವೇ 3 ವರ್ಷದಿಂದ 7 ವರ್ಷಗಳ ಜೈಲು ಶಿಕ್ಷೆ ಹಾಗೂ 2ನೇ ಸಲಕ್ಕೆ 1,00,000 ರಿಂದ 10,00,000/– ದಂಡ ಇಲ್ಲವೇ 7 ವರ್ಷಗಳ ಜೈಲು ಶಿಕ್ಷೆಗೆ ಗುರಿಯಾಬೇಕಾಗುತ್ತದೆ ಎಂದು ತಿಳಿಸಿದರು.

## ನೆರೆ ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಕ್ರಮ: ಲಾಡ್

• ಉದಯವಾಹಿನಿ ಹುಬ್ಬಳ್ಳಿ

ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದೆ. ನೆರೆ ಪ್ರವಾಹ ಉಂಟಾಗುವ ಹಳ್ಳಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ. ನೆರೆ ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಅತೀ ಹೆಚ್ಚು ಮಳೆಯಿಂದ ಬೆಣ್ಣೆ ಹಳ್ಳ ಹಾಗೂ ತುಪ್ಪರಿ ಹಳ್ಳಗಳು ಪ್ರವಾಹವನ್ನು ಉಂಟು ಮಾಡುತ್ತವೆ. ರೂ.200 ಕೋಟಿ ವೆಚ್ಚದಲ್ಲಿ ಬೆಣ್ಣೆ ಹಳ್ಳ ಮತ್ತು ತುಪ್ಪರಿ ಹಳ್ಳಗಳ ಹೂಳೆತ್ತುವ ಕಾರ್ಯವನ್ನು ಟೆಂಡರ್ ಪ್ರಕ್ರಿಯೆ ಮುಗಿದ ಬಳಿಕ ಕೈಗೊಳ್ಳಲಾಗುವುದು ಎಂದು ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹೇಳಿದರು.

ಹುಬ್ಬಳ್ಳಿ ತಾಲ್ಲೂಕಿನ ಶಿರಗುಪ್ಪಿ, ಇಂಗಳಹಳ್ಳಿ ಗ್ರಾಮಗಳಲ್ಲಿ ನೆರೆ ಪ್ರವಾಹ ಉಂಟಾಗುವ ಸಾಧ್ಯತೆ ಇರುವ ಪ್ರದೇಶಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬೆಣ್ಣೆ ಹಳ್ಳ ಹಾಗೂ ತುಪ್ಪರಿ ಹಳ್ಳ ಹೂಳೆತ್ತುವ ಕಾರ್ಯಕ್ಕೆ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳಲ್ಲಿ ಅನುದಾನ ನೀಡುವಂತೆ ಕೋರಲಾಗಿತ್ತು. ಅದರಂತೆ ಬಜೆಟ್‌ನಲ್ಲಿ ರೂ.200 ಕೋಟಿ ಹಣವನ್ನು ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಟೆಂಡರ್ ಪ್ರಕ್ರಿಯೆ ಮುಗಿದ ಬಳಿಕ ಹೂಳೆತ್ತುವ ಕಾರ್ಯವನ್ನು ಆರಂಭಿಸಲಾಗುವುದು. ಮುಂದಿನ 5 ರಿಂದ 10 ವರ್ಷಗಳ ಕಾಲ ಯಾವುದೇ ರೀತಿಯ ಸಮಸ್ಯೆ ಉದ್ಭವಿಸುವುದಿಲ್ಲ. ಬೆಣ್ಣೆ ಹಳ್ಳ ಮತ್ತು ತುಪ್ಪರಿ ಹಳ್ಳಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕ್ರಮವಹಿಸಲಾಗುವುದು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

> ಈಗಾಗಲೇ ನೆರೆ ಪ್ರವಾಹ ಸಂಭವಿಸುವ ಹಳ್ಳಿಗಳನ್ನು ಗುರುತಿಸಲಾಗಿದೆ. ಪ್ರವಾಹದಿಂದಾಗಿ ಯಾವುದೇ ರೀತಿಯ ಜೀವಹಾನಿ ಆಗದಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಲ್ಲದೇ ಟಾಸ್ಕ ಫೋರ್ಸ್ ತಂಡವನ್ನು ರಚನೆ ಮಾಡಲಾಗುವುದು. ಟಾಸ್ಕ ಫೋರ್ಸ್ ತಂಡಕ್ಕೆ ಲೈಫ್ ಜಾಕೆಟ್ ಸೇರಿದಂತೆ ಅಗತ್ಯ ಸಲಕರಣೆಗಳನ್ನು ಒದಗಿಸಲಾಗುತ್ತದೆ -ಸಂತೋಷ ಲಾಡ್

ಶಾಸಕರಾದ ಎನ್.ಎಚ್.ಕೋನರಡ್ಡಿ ಮಾತನಾಡಿ, ಹವಾಮಾನ ಇಲಾಖೆಯ ಮುನ್ಸೂಚನೆ ಮೇರೆಗೆ ಮುಂಗಾರು ಮಳೆ ಬೇಗನೆ ಪ್ರಾರಂಭವಾಗಿದೆ. ರೈತರಲ್ಲಿ ಸಂತೋಷದ ವಾತಾವರಣ ಸೃಷ್ಟಿಯಾಗಿದೆ. ಹವಾಮಾನ ಇಲಾಖೆಯ ಮುನ್ಸೂಚನೆ ಮೇರೆಗೆ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳ ನಿರ್ದೇಶನದಂತೆ ಆಯಾ ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಸ್ಥಳೀಯ ಶಾಸಕರು ನೆರೆ ಪ್ರವಾಹ ಉಂಟಾಗುವ ಹಾನಿಯನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಣ್ಣೆ ಹಳ್ಳ ಹಾಗೂ ತುಪ್ಪರಿ ಹಳ್ಳದ ಪ್ರದೇಶಗಳಿಗೆ ಭೇಟಿ ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

## ಸಾರ್ವಜನಿಕರು, ಸರ್ಕಾರಿ ಕಾಮಗಾರಿಗಳಿಗೆ ಸಾಕಷ್ಟು ಮರಳು ಲಭ್ಯ

• ಉದಯವಾಹಿನಿ ಕಲಬುರಗಿ

ಭಾರತ ಸರ್ಕಾರದ ಗಣಿ ಮಂತ್ರಾಲಯದ ಸುಸ್ಥಿರ ಮರಳು ಗಣಿಗಾರಿಕೆ ಮಾರ್ಗಸೂಚಿಗಳು–2016 ರನ್ವಯ ಮಳೆಗಾಲದಲ್ಲಿ ಮರಳು ಗಣಿಗಾರಿಕೆ ಸ್ಥಗಿತಗೊಳಿಸುವಂತೆ ತಿಳಿಸಿರುವುದರಿಂದ ಜಿಲ್ಲೆಯ ಮರಳು ಬ್ಲಾಕ್ ಗಳಲ್ಲಿ ಮುಂದಿನ ಆದೇಶದವರೆಗೆ ಮರಳು ಗಣಿಗಾರಿಕೆಯನ್ನು ಸ್ಥಗಿತಗೊಳಿಸಲಾಗಿದ್ದಾದರು ಸಾರ್ವಜನಿಕರಿಗೆ ಮತ್ತು ಸರ್ಕಾರಿ ಕಾಮಗಾರಿಗಳಿಗೆ ಜಪ್ತಿ ಮಾಡಿಕೊಳ್ಳಲಾದ ಸಾಕಷ್ಟು ಮರಳು ಮಾರಾಟಕ್ಕೆ ಲಭ್ಯವಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಜಿಲ್ಲೆಯ ಅಫಜಲಪುರ, ಜೇವರಗಿ ಹಾಗೂ ಚಿತ್ತಾಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಗಣಿಗಾರಿಕೆ ಮಾಡಿ ದಾಸ್ತಾನು ಮಾಡಿರುವ ಮರಳನ್ನು ಜಪ್ತಿ ಪಡಿಸಿದ್ದು, ಸಾಕಷ್ಟು ಮರಳು ಸರ್ಕಾರಿ ಕಾಮಗಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಕಟ್ಟಡ ಕಾಮಗಾರಿಗಳಿಗೆ ಬಳಕೆಗೆ ಲಭ್ಯವಿರುತ್ತದೆ ಎಂದಿದ್ದಾರೆ.

ಸಾರ್ವಜನಿಕರು ಜಪ್ತಿಪಡಿಸಿದ ಮರಳನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಪ್ರತಿ ಮೆಟ್ರಿಕ್ ಟನ್ ಗೆ 850 ರೂ.ಗಳಂತೆ ಪಾವತಿಸಿ ನಿಯಮಾನುಸಾರ ಖನಿಜ ರವಾನೆ ಪರವಾನಿಗೆ ಪಡೆದು, ತಮ್ಮ ಸ್ವಂತ ಖರ್ಚಿನಲ್ಲಿ ಮರಳನ್ನು ತೆಗೆದುಕೊಂಡು ಹೋಗಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.



ಮರಳು ಪಡೆಯಲು ಅಫಜಲಪೂರ, ಆಳಂದ ತಾಲ್ಲೂಕಿನ ನಾಗರೀಕರು ಲೋಕೋಪಯೋಗಿ ಇಲಾಖೆಯ ಅಫಜಲಪೂರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತ ಲಕ್ಷ್ಮೀಕಾಂತ ಬಿರಾದಾರ–9148570109, ಚಿತ್ತಾಪೂರ, ಸೇಡಂ, ಚಿಂಚೋಳಿ, ಕಾಳಗಿ, ಶಹಾಬಾದ್ ಹಾಗೂ ಕಲಬುರಗಿ ತಾಲ್ಲೂಕಿನ ನಾಗರೀಕರು ಲೋಕೋಪಯೋಗಿ ಇಲಾಖೆಯ ಚಿತ್ತಾಪೂರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತ ಸಲೀಂ–9448219377, ಜೇವರ್ಗಿ, ಯಡ್ರಾಮಿ, ಕಮಲಾಪೂರ ತಾಲ್ಲೂಕಿನ ನಾಗರೀಕರು ಲೋಕೋಪಯೋಗಿ ಇಲಾಖೆಯ ಜೇವರ್ಗಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತ ತೈಜಾಮುಲ್ ಇಸ್ಲಾಂ–944979574 ಅವರನ್ನು ಸಂಪರ್ಕಿಸಬಹುದಾಗಿದೆ. ಇದಲ್ಲದೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಉಪನಿರ್ದೇಶಕ ಸೋಮಶೇಖರ್ ಎಂ.–9945229477 ಮತ್ತು ಭೂವಿಜ್ಞಾನಿ ಪ್ರವೀಣ–9008529896 ಇವರನ್ನು ಸಹ ಸಂಪರ್ಕಿಸಬಹುದಾಗಿದೆ.

### • ಒಂದೆಡೆ ಅಧಿಕಾರಿಗಳ ತಮಟೆ ಸದ್ದು ಇನ್ನೊಂದಡೆ ಕಚೇರಿ ಸಾರ್ವಜನಿಕರ ಸೇವಾ ಕಾರ್ಯ ಸ್ಥಗಿತ

## ಪುರಸಭೆ ಪೌರ ನೌಕರರ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಅನಿರ್ದಿಷ್ಟಾವಧಿ ಧರಣಿ

• ಉದಯವಾಹಿನಿ ಕಾರಟಗಿ

ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸೇವಾ ಸಂಘದ ನೇತೃತ್ವದಲ್ಲಿ ರಾಜ್ಯಾದ್ಯಂತ ಅನಿರ್ದಿಷ್ಟ ಅವಧಿ ಮುಷ್ಕರ ಹಮ್ಮಿಕೊಳ್ಳಲಾಗಿದ್ದು ಕಾರಟಗಿ ಪುರಸಭೆ ಪೌರ ಸೇವಾ ಪೌರಕಾರ್ಮಿಕರು ಮತ್ತು ಪುರ ಸಭೆ ನೌಕರರು ಅನಿರ್ದಿಷ್ಟಾವಧಿ ಮುಷ್ಕರವನ್ನು ಹಮ್ಮಿಕೊಂಡು ಸರ್ಕಾರ ಈ ಕೂಡಲೇ ಬೇಡಿಕೆಗಳು ಈಡೇರಿಸುವಂತೆ ಒತ್ತಾಯಿಸಿದ್ದಾರೆ.

**ಧರಣಿ 2ನೇ ದಿನಕ್ಕೆ**

ಕುಡಿಯುವ ನೀರು ಸರಬರಾಜು ಸೇವೆಯನ್ನು ಹೊರತುಪಡಿಸಿ ಎಲ್ಲಾ ಕಾರ್ಯಗಳನ್ನು ಸ್ಥಗಿತಗೊಳಿಸಿದ್ದಾರೆ ಪುರಸಭೆ ಮುಂಭಾಗದಲ್ಲಿ ಅಧಿಕಾರಿಗಳು ಮತ್ತು ಪುರಸಭೆಯ ಪೌರಕಾರ್ಮಿಕರು ಎಲ್ಲಾ ಕೆಲಸ ಕಾರ್ಯಗಳನ್ನು ಬಿಟ್ಟು ಕಚೇರಿಯ ಕೆಲಸಗಳನ್ನು ಮತ್ತು ಪೌರ ಸೇವಾ ಸ್ವಚ್ಛತಾ ಕಾರ್ಯಗಳನ್ನು ಸ್ಥಗಿತಗೊಳಿಸಿ ಹೋರಾಟವನ್ನು ನಡೆಸುತ್ತಿದ್ದರೆ, ಪುರಸಭೆಗೆ ಬಂದ ಸಾರ್ವಜನಿಕರು ಬರಿಗೈಯಲ್ಲಿ ಹಿಂತಿರುಗುತ್ತಿದ್ದಾರೆ ಅಧಿಕಾರಿಗಳು ಪೌರ ಕಾರ್ಮಿಕರು ಮುಷ್ಕರದಲ್ಲಿ ತೊಡಗಿರುವುದರಿಂದ ವಾರ್ಡ್‌ಗಳಲ್ಲಿ ಕಸವಿಲೇವಾರಿ ಆಗದೆ ಎಲ್ಲೆಂದರಲ್ಲಿ ಕಸ ಸಂಗ್ರಹವಾಗುತ್ತಿದೆ, ಇದು ಯಾವುದಕ್ಕೂ ಕಿವಿಗೊಡದೆ ಸರ್ಕಾರ ಬೇಡಿಕೆ ಈಡೇರಿಸುವವರೆಗೂ ಮುಷ್ಕರ ನಿಲ್ಲಿಸುವುದಿಲ್ಲ ಎಂದು ಎಚ್ಚರಿಕೆಯನ್ನು ನೀಡಿದ್ದಾರೆ.

**ಬೇಡಿಕೆಗಳು;** ನೌಕರರ ಸಂಘದ ಬೇಡಿಕೆಗಳು ರಾಜ್ಯದ ಎಲ್ಲಾ ನಗರ ಸ್ಥಳೀಯ ನೌಕರರನ್ನು ರಾಜ್ಯ ಸರ್ಕಾರಿ ನೌಕರರು ಎಂದು ಪರಿಗಣಿಸಿ ಜ್ಯೋತಿ ಸಂಜೀವಿನಿ, ಕೆ.ಜಿ.ಐ.ಡಿ. ಸೇರಿದಂತೆ ಸರ್ಕಾರಿ ನೌಕರರು ಪಡೆಯುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕು.

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಒರಗುತ್ತಿಗೆ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು ಕಾರ್ಮಿಕರು, ವಾಹನ ಚಾಲಕರು, ಲೋಡರ್ಸ್, ಕ್ಲೀನರ್ಸ್, ಗಾರ್ಡಿನರ್, ಸ್ಯಾನಿಟರಿ ಸೂಪರ್‌ವೈಸರ್, ಕಂಪ್ಯೂಟರ್ ಆಪರೇಟರ್, ಯುಜಿಡಿ ಸಹಾಯಕರು ಸೇರಿದಂತೆ ವಿವಿಧ ವೃಂದದ ಹೊರ ಗುತ್ತಿಗೆ ಕಾರ್ಮಿಕರನ್ನು ನಗರ ಸ್ಥಳೀಯ ಸಂಸ್ಥೆಗಳಿಂದ ನೇರ ಪಾವತಿಗೆ ಒಳಪಡಿಸುವುದು. ದಿನಗೂಲಿ ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ಈ ನೌಕರರನ್ನು ಖಾಯಂ ಮಾಡುವುದು. ವಿಶೇಷ ನೇಮಕಾತಿಯಡಿ ಖಾಯಂಗೊಂಡ ನೌಕರರಿಗೆ ಎಸ್.ಎಫ್.ಸಿ ವೇತನ ಅನುದಾನದಿಂದ ವೇತನ ನೀಡುವುದು. ಈ ಎಲ್ಲಾ ಬೇಡಿಕೆಗಳನ್ನು ಈಡೇರುಸುವಂತೆ


ಉದಯವಾಹಿನಿ ಚಿತ್ರ

> ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸಂಘದ ಸಹ ಕಾರ್ಯದರ್ಶಿಗಳು, ಮಾತನಾಡಿ, ಘನ ಸರ್ಕಾರವು ಪೌರ ಸೇವಾ ನೌಕರರಿಗೆ ಮಲತಾಯಿ ಧೋರಣೆಯನ್ನ ಮಾಡದೆ ಎಲ್ಲಾ ಸರ್ಕಾರೀ ನೌಕರರಿಗೆ ಸಿಗುವಂತಹ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು -ಶ್ರೀ ಚನ್ನಬಸವ

ಒತಾಯಿಸುತ್ತಿದ್ದೇವೆ ಎಂದರು. ಪುರಸಭೆ ಕಚೇರಿಯ ನೌಕರರರಾದ ಸೀಮಾರಾಣಿ,ಮಲ್ಲಮ್ಮ ಆದೇಪ,ನಾಗರಾಜ್, ಮಲ್ಲಮ್ಮ, ನಾಗಪ್ಪ, ಮಂಜುನಾಥ, ಅನಂತರಾವ್, ಶಾಮೀದ್ ಅಲಿ, ಸಮೀರ್, ರಾಮಣ್ಣ,ರಾಘವೇಂದ್ರ, ಪವನಕುಮಾರ, ಸಣ್ಣ ರಂಗಪ್ಪ, ಚೌಡಪ್ಪ, ಓಲೆಮ್ಮ, ಮಲ್ಲಪ್ಪ, ಹನಮೇಶ,ನಾಗೇಶ್, ಮಲ್ಲಿಕಾರ್ಜುನ ಆನಂದ, ಸೇರಿದಂತೆ ಪೌರ ಕಾರ್ಮಿಕರು, ನೀರು ಸರಬುರಾಜು ಸಹಾಯಕರು, ಸಿಬ್ಬಂದಿ ವರ್ಗ ಇದ್ದರು.

### ಸಾರ್ವಜನಿಕರು ಸಹಕರಿಸಬೇಕು

ನಗರ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದ್ದು ಸರ್ಕಾರವು ಇಂತಹ ನೌಕರರುಗಳಿಗೆ ಕಡೆಗಣಿಸುತ್ತಿರುವುದು ಬೇಸರದ ಸಂಗತಿಯಾಗಿದೆ. ಹಾಗಾಗಿ ನಾವು ಬೇಡಿಕೆ ಇಟ್ಟಿರುವ 19 ಅಂಶಗಳ ಬೇಡಿಕೆ ಪಟ್ಟಿಗಳನ್ನ ತಯಾರಿಸಲಾಗಿದ್ದು, ಆ 19 ಬೇಡಿಕೆಗಳನ್ನು ಸರ್ಕಾರವು ಈಡೇರಿಸಲು ಕ್ರಮ ಕೈಗೊಳ್ಳಬೇಕೆಂದು ಕೇಳಿಕೊಂಡರು. ನಮ್ಮ ಬೇಡಿಕೆಗಳನ್ನು ಈಡೇರಿಸಲು ಈ ಮುಷ್ಕರವನ್ನ ಹಮ್ಮಿಕೊಂಡಿದ್ದು ರಾಜ್ಯಮಟ್ಟದ, ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕ ಮಟ್ಟದ ಎಲ್ಲಾ ಪದಾಧಿಕಾರಿಗಳು ಅಧಿಕಾರಿ ನೌಕರರು ವೃಂದದವರು ಕೂಡ ಈ ಮುಷ್ಕರಕ್ಕೆ ಸಹಕಾರವನ್ನು ನೀಡಿದ್ದು, ಮುಂದಿನ ದಿನಮಾನದಲ್ಲಿ ಆಗುವ ಸಾರ್ವಜನಿಕ ತೊಂದರೆಗಳಿಗೆ ಸಾರ್ವಜನಿಕರು ಸಹಕರಿಸಬೇಕಾಗಿ ವಿನಂತಿ ಮಾಡಿದರು. ಹಾಗೂ ಆದಷ್ಟು ಬೇಗನೆ ನಮ್ಮ ಈ ಬೇಡಿಕೆಗಳನ್ನು ಸರ್ಕಾರವು ಈಡೇರಿಸುವುದು ಎಂದು ಭರವಸೆ ಇರುವುದಾಗಿ ತಿಳಿಯಪಡಿಸಿದರು.

## ಪಡಿತರ ಅಕ್ಕಿ ಅಕ್ರಮ ಖರೀದಿ ಕಡಿವಾಣಕ್ಕೆ ಸೂಚನೆ

• ಉದಯವಾಹಿನಿ ಮುಂಡರಗಿ

ಸರ್ಕಾರದ ಅನ್ನಭಾಗ್ಯ ಯೋಜನೆಯ ಅಡಿಯಲ್ಲಿ ಬಡವರಿಗೆ ವಿತರಿಸುತ್ತಿರುವ ಪಡಿತರ ಅಕ್ಕಿಯನ್ನು ಕಾಳ ದಂದೆಕೋರರು ಖರೀದಿಸುತ್ತಿದ್ದಾರೆ ಎಂಬ ದೂರುಗಳು ಬಂದಿವೆ. ಅವರು ಅಕ್ರಮವಾಗಿ ಅಕ್ಕಿಯನ್ನು ಸಂಗ್ರಹಿಸಿ ಹೆಚ್ಚು ಬೆಲೆಗೆ ಮಾರಾಟ ಮಾಡುತ್ತಿದ್ದಾರೆ ಎಂದು ಹೇಳಲಾಗುತ್ತದೆ. ಅಕ್ರಮವಾಗಿ ಅಕ್ಕಿ ಖರೀದಿಸುವವರನ್ನು ಗುರುತಿಸಿ ಅವರ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕು’ ಎಂದು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಡಿ.ಡಿ. ಮೊರನಾಳ ಅವರು ತಾಲ್ಲೂಕು ಆಹಾರ ನಿರೀಕ್ಷಕರಿಗೆ ಸೂಚಿಸಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿಯ ಸಾಮರ್ಥ್ಯ ಸೌಧದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನಾದ್ಯಂತ ಈಗಾಗಲೇ ಪಂಚ ಗ್ಯಾರಂಟಿ ಯೋಜನೆಯು ಶೇ 97ರಷ್ಟು ಪ್ರಗತಿಯಾಗಿದ್ದು, ಶೇ 100ರಷ್ಟು ಗುರಿ ತಲುಪಿಸುವ ಕೆಲಸ ನಡೆಯಬೇಕಿದೆ. ಜನತಾ ಸದನ ಯೋಜನೆಯಿಂದ ಹಾಗೂ ಹಲವು ತಾಂತ್ರಿಕ ಸಮಸ್ಯೆಗಳಿಂದಾಗಿ ಯೋಜನೆಯಿಂದ ಹೊರಗುಳಿದವರನ್ನು ಗುರುತಿಸಿ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುತ್ತದೆ’ ಎಂದು ತಿಳಿಸಿದರು. ಪಂಚ ಗ್ಯಾರಂಟಿ ಯೋಜನೆಗಳ ಕಾರಣದಿಂದ ಬಡತನ ರೇಖೆಗಿಂತ ಕಡಿಮೆಯಿದ್ದ ಲಕ್ಷಾಂತರ ಕುಟುಂಬಗಳು ಮೇಲೇಳುವಂತಾಗಿದೆ. ಪಂಚ ಗ್ಯಾರಂಟಿಗಳು ರಾಜ್ಯದ ಜನಮನ ಗೆದ್ದಿದ್ದು, ಅವುಗಳ ನೆರವಿನಿಂದ ಹಲವು ಕುಟುಂಬಗಳು ಉದ್ಧಾರವಾಗಿವೆ. ರಾಜ್ಯ ಸರ್ಕಾರ ಎರಡು ವರ್ಷಗಳಲ್ಲಿ ಗ್ಯಾರಂಟಿ ಯೋಜನೆ ಜಾರಿ ಸೇರಿ ಹಲವು ಜನಪರ ಕೆಲಸಗಳ ಮೂಲಕ ಅದ್ಭುತ ಕೆಲಸ ಮಾಡುತ್ತಿದೆ’ ಎಂದು ಹರ್ಷ ವ್ಯಕ್ತಪಡಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು.

**ವೃಷಭ** ನೀವು ಇಂದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು.

**ಮಿಥುನ** ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

**ಕರ್ಕಾಟಕ** ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ.

**ಸಿಂಹ** ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದು ಹಾಕಲು ಹಿತವಾದ ಸಂಗೀತವನ್ನು ಆಲಿಸಿ.

**ಕನ್ಯಾ** ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನೀವು ಸ್ನೇಹಿತರೊಂದಿಗೆ ಒಳ್ಳೆಯ ಸಮಯ ಹೊಂದಿದ್ದರೂ ವಾಹನ ಚಾಲನೆ ಮಾಡುವಾಗ ಹೆಚ್ಚುವರಿ ಆರೈಕೆಯನ್ನು ಹೊಂದಿಕೊಳ್ಳಿ.

**ತುಲಾ** ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಾಮಾಜಿಕ ಸಮಾರಂಭಗಳು ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ.

**ವೃಶ್ಚಿಕ** ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ. ಕೆಟ್ಟ ಸಮಯಗಳು ನಮಗೆ ಇನ್ನೂ ಹೆಚ್ಚನ್ನು ನೀಡುತ್ತವೆ.

**ಧನಸ್ಸು** ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ.

**ಮಕರ** ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿನ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು.

**ಕುಂಭ** ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು.

**ಮೀನ** ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.

## ಒಡ್ಡು ತೆರವುಗೊಳಿಸಿ ರೈತರ ಸಮಸ್ಯೆ ಬಗೆಹರಿಸಲು ರೈತ ಸಂಘ ಮನವಿ

• ಉದಯವಾಹಿನಿ ವಡಗೇರಾ

ಯಾದಗಿರಿ ಜಿಲ್ಲೆಯ ತಾಲ್ಲೂಕಿನ ವಡಗೇರಾ ಗ್ರಾಮದ ಸರ್ವೆ ನಂಬರ್ 287 ರಲ್ಲಿನ ರೈತರಾದ ನಿಂಗಣ್ಣ ತಂದೆ. ಭಿಮರಾಯ ಹಾಗೂ ಲಕ್ಷ್ಮಿ ಗಂಡ. ನಾಗರಾಜ್ ಎಂಬುವರಿಗೆ ಸೇರಿದ ಹೊಲದ ಬದುವಿಗೆ ಪಕ್ಕದ ಜಮೀನಿನ ರೈತರಾದ ಮಾಂತಗೌಡ ಮತ್ತು ಅವರ ಮಗ ವೀರೇಶ್ ಗೌಡ ಎಂಬುವವರು ಹೊಲದ ಬದುವಿಗೆ ದೊಡ್ಡದಾಗಿ ಒಡ್ಡು ನಿರ್ಮಿಸಿದ್ದು ಅದನ್ನು ತೆರವುಗೊಳಿಸುವಂತೆ ರಾಜ್ಯ ರೈತ ಸಂಘ ಹೆಸರು ಸೇನೆ ತಾಲ್ಲೂಕು ಘಟಕ ಅಧ್ಯಕ್ಷ ವಿದ್ಯಾಧರ್ ಜಾಕಾ ನೇತೃತ್ವದಲ್ಲಿ ತಹಶೀಲ್ದಾರರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ಅನಾದಿ ಕಾಲದಿಂದಲೂ ನೀರು ಅಲ್ಲಿ ಹರಿದು ಹೋಗುತ್ತದೆ ಆದರೆ ಕಳೆದ ವರ್ಷದಿಂದ



ಉದಯವಾಹಿನಿ ಚಿತ್ರ

ಒಡ್ಡು ನಿರ್ಮಿಸಿದ್ದು ಪಕ್ಕದ ಜಮೀನಿನ ರೈತರ ಹೊಲದಲ್ಲಿ ಮಳೆಯ ನೀರು ನಿಲ್ಲುತ್ತಿದ್ದು ಇದರಿಂದ ಆ ರೈತರ ಬೆಳೆ ತುಂಬಾ ಪ್ರಮಾಣದಲ್ಲಿ ಹಾನಿಯಾಗುತ್ತಿದೆ ಮತ್ತು ಹೊಲಗಳಿಗೆ ಹೋಗಲು ದಾರಿ ಕೂಡಾ ಬಿಡದಿರುವುದು ಸರಿಯಲ್ಲ ಈ ಮೊದಲಿನ ತಹಶೀಲ್ದಾರ ಶ್ರೀನಿವಾಸ್ ಚಾಪೇಲ ರವರು ಹೊಲಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಮಳೆ ನೀರು ಹರಿಯುವುದು ನೈಸರ್ಗಿಕ ಕ್ರಿಯೆ ಅದನ್ನು ಯಾರು ತಡೆಯಬಾರದು ಒಡ್ಡು ತೆರವುಗೊಳಿಸುವಂತೆ ಹೇಳಿದರು ಕೂಡಾ ತೆರವು ಗೊಳಿಸದೆ ಅಸಡ್ಡೆತನ ತೋರಿಸುತಿದ್ದಾರೆ ವಡಗೇರಾ ಪಿಎಸ್ಐ ರವರು ಠಾಣೆಗೆ ಇಬ್ಬರನ್ನು ಕರೆಸಿ ವಿಚಾರಣೆ ನಡೆಸಿ ಒಡ್ಡು ನಿರ್ಮಿಸಿದ್ದು ಸರಿಯಲ್ಲ ಅದನ್ನು ತೆಗೆಯುವಂತೆ ಹೇಳಿದರು ಕೂಡಾ ತೆಗೆಯದೆ ರೈತರಿಗೆ ವಿನಾಕಾರಣ ಕಿರುಕುಳ ಹಲ್ಲೆ ದಬ್ಬಾಳಿಕೆ ಮಾಡುತ್ತಿದ್ದಾರೆ ಆದ್ದರಿಂದ ದಯಾಳುಗಳಾದ ತಾವು ಈ ಕುರಿತು ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು. ಈ ಸಂದರ್ಭದಲ್ಲಿ ರೈತ ಸಂಘದ ತಾಲ್ಲೂಕು ಗೌರವಾಧ್ಯಕ್ಷ ಶರಣು ಜಡಿ, ಮರಲಿಂಗ ಗೊನಾಲ, ಅಶೋಕ್ ಚಿನ್ನಿ, ವೆಂಕಟೇಶ್ ಇಟಗಿ, ಹಾಗೂ ಇನ್ನಿತರರು ಉಪಸ್ಥಿತರಿದ್ದರು

**ವಿಳಂಬ ಮಾಡಿದ್ದಲ್ಲಿ ಉಗ್ರ ಹೋರಾಟ**

### ಬಿಜೆಪಿಗರು ಜನಕಲ್ಯಾಣಕ್ಕಾಗಿ ಹೋರಾಟ ಮಾಡದೆ, ಕೋಮುಗಳ ಮಧ್ಯೆ ವಿಷಬೀಜ ಬಿತ್ತುವ ಕೆಲಸ ಮಾಡುತಿದ್ದಾರೆ: ಪುಣ್ಯಶೇಟ್ಟಿ

## ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಗೆ ಟಾರ್ಗೆಟ್ ಮಾಡಿದ್ದು ಖಂಡನೀಯ

• ಉದಯವಾಹಿನಿ, ಚಿಂಚೋಳಿ

ರಾಜ್ಯ ಬಿಜೆಪಿ ನಾಯಕರು ಕಳೆದ ಎರಡು ವರ್ಷಗಳಿಂದ ಪದೆಪದೆ ಕಲಬುರ್ಗಿಗೆ ಆಗಮಿಸಿ ಹೋರಾಟ ಮಾಡುತ್ತಿರುವುದು ಜನಕಲ್ಯಾಣಕ್ಕಾಗಿ ಅಲ್ಲ ಬರೀ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ನಿಂದನೆ ಮಾಡಲು ಹೋರಾಟ ಮಾಡುತ್ತಿರುವುದು ಖಂಡನೀಯ ಹಾಗೂ ಎಂಎಲ್ಸಿ ರವಿಕುಮಾರರವರು ಜಿಲ್ಲಾಧಿಕಾರಿ ವಿರುದ್ಧ ಹಗುರವಾಗಿ ಮಾತನಾಡಿದ್ದು ತಕ್ಷಣ ರಾಜೀನಾಮೆ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯಶೇಟ್ಟಿ ಐನೋಳ್ಳಿ ಆಗ್ರಹಿಸಿದರು.

ತಾಲ್ಲೂಕಿನ ಐನೋಳ್ಳಿ ಗ್ರಾಮದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಬಿಜೆಪಿಗರು ಯಾವುದೇ ವಿಷಗಳು ಇಲ್ಲದೆ ಕಲಬುರ್ಗಿಗೆ ಆಗಮಿಸಿ ಕೋಮು ಕೋಮುಗಳ ಮಧ್ಯೆ ವಿಷಬೀಜ ಬಿತ್ತುವ ಕೆಲಸ ಮಾಡುತ್ತಿದ್ದು ಮತ್ತು ಯಾವುದೇ ಅಭಿವೃದ್ಧಿ ಜನಕಲ್ಯಾಣಕ್ಕಾಗಿ ಹೋರಾಟ ಮಾಡದೆ ಬರೀ ಪ್ರಿಯಾಂಕ್ ಖರ್ಗೆಯವರ ಗೌರವಕ್ಕೆ ಧಕ್ಕೆ ತರುವ ಕೆಲಸ ಬಿಜೆಪಿಗರು ಮಾಡುತ್ತಿದ್ದಾರೆ.

ಬಿಜೆಪಿಗರು ಜಾತಿನಿಂಧನೆ ಮಾಡುತ್ತಿರುವುದು ಮತ್ತು ಅಸಂವಿಧಾನಿಕ ಪದಗಳು ಬಳಸಿ ರಾಜಕೀಯ ದ್ವೇಷ ಮಾಡುತ್ತಿದ್ದಾರೆ, ಜಿಲ್ಲಾಧಿಕಾರಿಗಳು ಉತ್ತಮ



ಉದಯವಾಹಿನಿ ಚಿತ್ರ

ಕೆಲಸ ನಿರ್ವಹಣೆ ಮಾಡುತ್ತಿದ್ದಾರೆಯೆಂದು ಅವರದೆ ಬಿಜೆಪಿ ಕೇಂದ್ರ ಸರ್ಕಾರವು ರಾಷ್ಟ್ರಪತಿಗಳಿಂದ ಪ್ರಶಸ್ತಿ ಪ್ರದಾನ ಮಾಡಿದ್ದಾರೆ.

ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರು ಜಿಲ್ಲೆ ಅಭಿವೃದ್ಧಿ ಮಾಡದೆ ಬರೆ ಬಿಜೆಪಿ ನಾಯಕರಿಗೆ ಪ್ರಧಾನಿಗಳಿಗೆ ಟೀಕೆ ಮಾಡುತ್ತಿದ್ದಾರೆಂದು ಬಿಜೆಪಿಗರು ಆರೋಪಿಸುತ್ತಿದ್ದು ಬಿಜೆಪಿಯವರಿಗೆ ಸಚಿವ ಪ್ರಿಯಾಂಕ್ ಖರ್ಗೆಯವರು ಬಹಿರಂಗ ಚರ್ಚೆಗೆ ಅಹ್ವಾನ ನೀಡಿದರೂ ಯಾಕೆ ಬರುತ್ತಿಲ್ಲಾ, ಪ್ರಿಯಾಂಕ್ ಖರ್ಗೆಯವರು ದಲಿತ ನಾಯಕನಾಗಿ ಉತ್ತಮ ರಾಜಕಾರಣಿಯಾಗಿ ಬೆಳೆಯುತ್ತಿದ್ದು ಬರುವ ದಿನಗಳಲ್ಲಿ ಮುಖ್ಯಮಂತ್ರಿಯಾಗುವ ಎಲ್ಲಾ ಲಕ್ಷಣ ಕಾಣುತ್ತಿದ್ದು ಇದನ್ನು ಬಿಜೆಪಿಗರು ಹೊಟ್ಟೆಕಿಚ್ಚು ಪಟ್ಟು ಸಹಿಸಿಕೊಳ್ಳುಲು ಆಗುತ್ತಿಲ್ಲವೆಂದರು.

**ಬಿಜೆಪಿ ವಿರುದ್ಧ ಆಕ್ರೋಶ**

ಇಂಡಿಯನ್ ಆರ್ಮಿ ಮುಖ್ಯಸ್ಥೆ ಸೋಫೀಯಾ ಖುರೇಷಿ ಪಾಕಿಸ್ತಾನಕ್ಕೆ ನುಗ್ಗಿ ಹೊಡೆದು ಬಂದಿದ್ದಾಳೆ ಆದರೆ ಅಂಥವರಿಗೆ ಬಿಜೆಪಿ ಸಚಿವರೊಬ್ಬರು ನಿಂದಿಸಿ ಮಾತನಾಡುತ್ತಿರುವುದು ಖಂಡನೀಯ,

ಇಷ್ಟೆಲ್ಲಾ ಬಿಜೆಪಿಯ ರಾಜ್ಯ ಮತ್ತು ಕೇಂದ್ರ ನಾಯಕರು ಕೋಮು ಕೋಮುಗಳ ಮಧ್ಯೆ ವಿಷಬೀಜ ಬಿತ್ತುವ ಹೇಳಿಕೆ ನೀಡುತ್ತಿದರೂ ಬಿಜೆಪಿಯ ಹೈಕಮಾಂಡ್ ಕ್ರಮಕೈಗೊಳ್ಳದೆ ಸುಮ್ಮನ್ನೆ ಕುಳಿತು ನೋಡುತ್ತಿರುವುದು ನೋಡಿದರೆ ಹೇಳಿಕೆ ನೀಡಲು ಹೈಕಮಾಂಡ್ ಆದೇಶವಿರಬಹುದು ಎಂಬ ಸಂಶಯ ಮೂಡುತ್ತಿದೆ.

12ವರ್ಷಗಳಿಂದ ಪ್ರಧಾನ ಮಂತ್ರಿಗಳು ಒಂದೇ ಒಂದು ಪತ್ರಿಕಾಗೋಷ್ಠಿ ನಡೆಸದೆ ಬರೀ ಮನ್ ಕೀ ಬಾತ್ ಹೇಳುತ್ತಾರೆ, ಆದರೆ ಅದನ್ನು ಪ್ರಿಯಾಂಕ್ ಖರ್ಗೆಯವರು ಆರ್ಥಿಕ ವ್ಯವಸ್ಥೆ ಬಗ್ಗೆ, ಜೆಡಿಪಿ ಬಗ್ಗೆ ಪ್ರಶ್ನಿಸಿದರೆ ಬಿಜೆಪಿಗರು ಅವರ ವಿರುದ್ಧ ಹೇಳಿಕೆ ನೀಡುವುದು ಅಸಂವಿಧಾನಿಕ ಪದಗಳು ಬಳಸಿ ನಿಂದನೆ ಮಾಡುತ್ತಿದ್ದಾರೆ, ದೇಶದ ಪ್ರತಿಯೊಬ್ಬ ಪ್ರಜೆಗೆ ಪ್ರಶ್ನೆ ಕೇಳುವ ಹಕ್ಕಿದೆಯೆಂಬುವುದು ಬಿಜೆಪಿಗರು ಮರೆತುಬಿಟ್ಟಿದ್ದಾರೆ, ಬಿಜೆಪಿ ಹೈಕಮಾಂಡ್ ತಕ್ಷಣವೇ ಎಂಎಲ್ಸಿ ರವಿಕುಮಾರ ಮತ್ತು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲುವಾದಿ ನಾರಾಯಣಸ್ವಾಮಿಯವರಿಗೆ ಪಕ್ಷದಿಂದ ಉಚ್ಚಾಟನೆ ಮಾಡಬೇಕು ಎಂದು ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಇಬ್ರಾಹಿಂಸಾಬ ದೇಗಲಮಡಿ, ಅಲಾವೋದ್ದೀನ್ ಅನ್ಸಾರಿ, ರಾಜಕುಮಾರ ಮಂದಾ, ಚಂದ್ರು ತಳವಾರ, ಶರಣು ಪಪ್ಪಾ, ಶಿವಕುಮಾರ ಮೂಲ್ಗಿ, ಆಸೀಫ್ ಹೂಡಾ, ಖಾಜಾಪಟೇಲ, ನಂದಕುಮಾರ ಆವುಂಟಿ, ಇದ್ದರು.

> **ಚಿಂಚೋಳಿ ಶಾಸಕ ಡಾ.ಅವಿನಾಶ ಜಾಧವ ಕೂಡ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಬಗ್ಗೆ ಮಾತನಾಡಿ ಕೆಡಿಪಿ ಸಭೆ ಮಾಡಿಲ್ಲ, ಬೆಂಗಳೂರಿಗೆ ಅಧಿಕಾರಿಗಳು ಕರೆಸಿ ಸಭೆ ಮಾಡುತ್ತಾರೆ ತಕ್ಕಪಾಠ ಕಲಿಸಬೇಕು ಎಂದು ಹೇಳಿದು, ಆದರೆ ಡಾ.ಅವಿನಾಶ ಜಾಧವ ಶಾಸಕರೆ ತಾವು ಮೊದಲು ಚಿಂಚೋಳಿಯಲ್ಲಿ ಕೆಡಿಪಿ ಸಭೆ ಮಾಡಿ ತಾವು ಸಭೆ ಮಾಡದೆ ಹತ್ತು ತಿಂಗಳು ಆಯಿತು, ನಿಮ್ಮ ಅಭಿವೃದ್ಧಿ ಏನು, ಕೆಕೆಆರ್ ಡಿಬಿ ವತಿಯಿಂದ ಬಂದ 180ಕೋಟಿ ರೂ.ಅನುದಾನದ ಕಾಮಗಾರಿ ಎಲ್ಲಿ, ಶಾಸಕರ ಅನುದಾನದಲ್ಲಿ ಮಾಡುವ ಕಾಮಗಾರಿಗಳು ಯಾವುವು, ಕಾಮಗಾರಿಗಳು ಎಲ್ಲಿ ನಡೆಯುತ್ತಿವೆ ಎರಡು ವರ್ಷದಲ್ಲಿ ಒಂದೇ ಒಂದು ಅಡಿಗಲ್ಲು ಕಾರ್ಯಕ್ರಮ ತಾವು ಮಾಡಿಲ್ಲ, ಅನುದಾನ ಎಲ್ಲಿ ಎಂಬುವುದು ಮೊದಲು ಜನರಿಗೆ ಮಾಹಿತಿ ಕೊಡಿ. ತಾಲ್ಲೂಕಿನಲ್ಲಿ ಲ್ಯಾಂಡ್ ಆರ್ಮಿ ಇಲಾಖೆ ವತಿಯಿಂದ ನಡೆಯುತ್ತಿರುವ ಎಲ್ಲಾ ಕಾಮಗಾರಿಗಳು ಕಳಪೆಮಟ್ಟದಿಂದ ನಡೆಯುತ್ತಿವೆ ಮೊದಲು ಒಮ್ಮೆ ಪರಿಶೀಲಿಸಿ ನಿಮ್ಮ ಕ್ಷೇತ್ರದಲ್ಲಿಯೇ ನಿಮ್ಮ ಕೆಲಸ ಗೋತ್ತಿಲ್ಲ ಆದರೆ ಬೇರೆಯವರ ಮೇಲೆ ಆರೋಪ ಮಾಡುವುದು ಬಿಡಿ**
>
> – ದೀಪಕನಾಗ್ ಪುಣ್ಯಶೇಟ್ಟಿ, ಮಾಜಿ ಅಧ್ಯಕ್ಷರು ಜಿ.ಪಂ. ಕಲಬುರ್ಗಿ

## ಪ್ರಥಮ ಪದವಿ ಕೋರ್ಸ್ ಪ್ರವೇಶಾತಿಗಳು ಪ್ರಾರಂಭ

• ಉದಯವಾಹಿನಿ, ಕೆಂಭಾವಿ

ಕರ್ನಾಟಕ ಸರ್ಕಾರ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆ ಪ್ರಾದೇಶಿಕ ಕಛೇರಿ ಕಲಬುರ್ಗಿಯವರ ಮಾರ್ಗದರ್ಶನದಲ್ಲಿ,

ರಾಯಚೂರು ವಿಶ್ವವಿದ್ಯಾಲಯದ ಸಂಲಗ್ನತೆ ಹೊಂದಿರುವ ಪಟ್ಟಣದ ಶ್ರೀಮತಿ ಗಂಗೂಬಾಯಿ ಶಾಂತಗೌಡ ಪೋಲಿಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025–26ನೇ ಸಾಲಿನ ಬಿಎ, ಬಿಕಾಂ ಬಿಎಸ್ಸಿ ಪ್ರಥಮ ವರ್ಷದ ಪದವಿ ಕೋರ್ಸ್‌ಗಳ ಪ್ರವೇಶಾತಿಗಳು ಪ್ರಾರಂಭವಾಗಿದ್ದು. ದ್ವಿತೀಯ ಪಿಯುಸಿಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಪದವಿ ವಿವಿಧ ಕೋರ್ಸ್ ಗಳಿಗೆ ಪ್ರವೇಶ ಪಡೆಯುವಂತೆ ಪ್ರಾಂಶುಪಾಲ ಡಾ ನಾಗಪ್ಪ ಚವಲ್ಕರ್ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಪಟ್ಟಣದ ಹೃದಯ ಭಾಗದಲ್ಲಿರುವ ಸರ್ಕಾರಿ ಪದವಿ ಕಾಲೇಜು ಸುಸಜ್ಜಿತವಾದ ಸ್ವಂತ ಕಟ್ಟಡ ಹೊಂದಿದ್ದು, ಅನುಭವಿ ಅಧ್ಯಾಪಕ ವೃಂದ, ಸ್ಮಾಟ್ ಕ್ಲಾಸ್ ರೂಮ್, ಪ್ರತ್ಯೇಕ ಗ್ರಂಥಾಲಯ, ಪ್ರಾಯೋಗಿಕ ಕೋಣೆಗಳು, ಎನ್ ಎಸ್ ಎಸ್ ಘಟಕ, ಮಹಿಳಾ ಶೌಚಾಲಯ, ಆಟದ ಮೈದಾನ, ಹಾಗೂ ಪಠ್ಯದ ಜೊತೆ ಸಹಪಠ್ಯತರ ಚಟುವಟಿಕೆಗೆ ಉತ್ತೇಜನ ನೀಡಲಾಗುತ್ತಿದೆ.

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವ್ಯವಸ್ಥೆ, ಮಹಿಳಾ ವಿದ್ಯಾರ್ಥಿಗಳಿಗೆ ಸರ್ಕಾರಿ ವಸತಿ ನಿಲಯ ಸೇರಿದಂತೆ ಇನ್ನಿತರ ವಿಶೇಷ ಸೌಲಭ್ಯಗಳು ಇದ್ದು. ವಿದ್ಯಾರ್ಥಿಗಳಿಗೆ ಸಮವಸ್ತ್ರ ನಿಗದಿ ಮಾಡಲಾಗಿದ್ದು. ವಿದ್ಯಾರ್ಥಿಗಳು ಉಜ್ವಲ ಭವಿಷ್ಯಕ್ಕಾಗಿ ಪ್ರಥಮ ಪದವಿ ಪ್ರವೇಶ ಪಡೆಯುವ ಮೂಲಕ ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

## ಸ್ಕ್ಯಾನಿಂಗ್ ಸೆಂಟರ್‌ಗಳ ನಿರಂತರ ತಪಾಸಣೆಗೆ ಸೂಚನೆ

• ಉದಯವಾಹಿನಿ ಮಂಗಳೂರು

ಜಿಲ್ಲೆಯಲ್ಲಿರುವ ಸ್ಕ್ಯಾನಿಂಗ್ ಕೇಂದ್ರಗಳಿಗೆ ಆಗಿಂದಾಗ್ಗೆ ಭೇಟಿ ಪರಿಶೀಲನೆ ನಡೆಸಲು ಜಿಲ್ಲಾ ತಪಾಸಣಾ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಸೂಚಿಸಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ತೀರ್ಮಾನಿಸಲಾಯಿತು. ದಕ್ಷಿಣ ಕನ್ನಡ ಜಿಲ್ಲೆಯ ಸ್ಕ್ಯಾನಿಂಗ್ ಸಂಸ್ಥೆಗಳಲ್ಲಿ ಎಂಪ್ಯಾನೆಲ್‌ಮೆಂಟ್ ಇಲ್ಲದೆ ರೇಡಿಯೋಲಜಿಸ್ಟ್, ಗೈನಕಾಲಜಿಸ್ಟ್, ಕಾರ್ಡಿ ಯೊಲಜಿಸ್ಟ್ ಅಥವಾ ಯಾವುದೇ ತಜ್ಞ ವೈದ್ಯರು ಸ್ಕ್ಯಾನಿಂಗ್ ಮಾಡಿದರೆ ಅವರ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ. ಜಿಲ್ಲೆಯಲ್ಲಿರುವ ಎಲ್ಲಾ ಸ್ಕ್ಯಾನಿಂಗ್ ಸೆಂಟರ್ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ತಿಮ್ಮಯ್ಯ ಸೂಚಿಸಿದರು.

ಏಪ್ರಿಲ್ 2025 ರಲ್ಲಿ ಖಾಸಗಿ 53 ಹಾಗೂ ಸರ್ಕಾರಿ 5 ಸ್ಕ್ಯಾನಿಂಗ್ ಸೆಂಟರ್ಗಳ ತಪಾಸಣೆ ನಡೆಸಿದ್ದು ತಾಲ್ಲೂಕು ಆರೋಗ್ಯಾಧಿಕಾರಿಗಳು ಖಾಸಗಿ 6 ಹಾಗೂ ಸರ್ಕಾರಿ 2 ಸ್ಕ್ಯಾನಿಂಗ್ ಸೆಂಟರ್ಗಳ ತಪಾಸಣೆ ನಡೆಸಿದ್ದಾರೆ ಎಂದು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ದೀಪಾ ಪ್ರಭು ಸಭೆಯಲ್ಲಿ ತಿಳಿಸಿದರು.

## ಹಳ್ಳ ಹಿಡಿದ ಸಮುದಾಯ ಗೋದಾಮು ಕಾಮಗಾರಿ

### ನರೇಗಾ ಯೋಜನೆಯಡಿ ಭ್ರಷ್ಟಾಚಾರ ವೆಸಗಿದ ಅಧಿಕಾರಿಗಳ ವಿರುದ್ಧ ಉಮೇಶ್ ಮುದ್ನಾಳ್ ಆಕ್ರೋಶ

• ಉದಯವಾಹಿನಿ ಯಾದಗಿರಿ

ತಾಲ್ಲೂಕಿನ ಮುದ್ನಾಳ್ ಗ್ರಾಮದಲ್ಲಿ ಸಿದ್ದಾರೂಢರ ಮಠದ ಪಕ್ಕದಲ್ಲೇ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 2021/22 ನೇ ಸಾಲಿನಲ್ಲಿ ಆರಂಭವಾದ ಸಮುದಾಯ ಗೋದಾಮು ಕಾಮಗಾರಿ ಈವರೆಗೂ ಪೂರ್ಣಗೊಂಡಿಲ್ಲ. ಅಂದಾಜು 19.5 ಲಕ್ಷ ಅನುದಾನದಲ್ಲಿ ರೈತರಿಗೆ ಅನುಕೂಲ ಆಗಲಿ ಅನ್ನೋ ನಿಟ್ಟಿನಲ್ಲಿ ನಿರ್ಮಿಸುತ್ತಿರುವ ಸಮುದಾಯ ಗೋಧಾಮು ಕಾಮಗಾರಿ ಇದಾಗಿದೆ.

ಸರ್ಕಾರ ರೈತರಿಗೆ ಅನುಕೂಲ ಆಗಲಿ ಅಂತ ಲಕ್ಷಾಂತರ ರೂಪಾಯಿ ಅನುದಾನ ಬಿಡುಗಡೆ



ಉದಯವಾಹಿನಿ ಚಿತ್ರ

ಮಾಡಿದ್ರೂ ಕಾಮಗಾರಿ ಮಾಡಿಲ್ಲ. ಅಧಿಕಾರಿಗಳು ಬಿಲ್ ಎತ್ತಿಕೊಂಡು ತಿಂದು ಕಳ್ಳಾಟ ಆಡುತ್ತಿದ್ದರು. ಕೂಡಲೇ ಜಿಲ್ಲಾ ಪಂಚಾಯತ್ ಸಿಇಓ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ್ ಆಗ್ರಹಿಸಿದ್ದಾರೆ.

> **ಸರ್ಕಾರದ ಹಣ ಲೂಟಿ ಮಾಡುವ ಮೂಲಕ ಸರ್ಕಾರಕ್ಕೆ ವಂಚಿಸಲು ಯತ್ನಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಆಗಲೇಬೇಕು. ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಜಿಲ್ಲಾಡಳಿತ ಹಿಂದೇಟು ಹಾಕಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ್ ಎಚ್ಚರಿಕೆ ನೀಡಿದ್ದಾರೆ.**

## ಗಾಂಜಾ ಸಾಗಿಸುತ್ತಿದ್ದ 8 ಜನರ ಬಂಧನ

• ಉದಯವಾಹಿನಿ ಕೊಪ್ಪಳ

ಗಂಗಾವತಿ ನಗರದಲ್ಲಿ ಮಾರಾಟ ಮಾಡಲು ಅಕ್ರಮವಾಗಿ ಸಾಗುಸುತ್ತಿದ್ದ 1.8 ಕೆ.ಜಿ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದ್ದು, 8 ಮಂದಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್. ಎಲ್ ಅರಸಿದ್ದಿ ಹೇಳಿದ್ದಾರೆ.

ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಂಗಾವತಿಯ ಸರ್ಕಾರಿ ಐಟಿಐ ಕಾಲೇಜಿನ ಬಳಿ ಇರುವ ರಸ್ತೆಯಲ್ಲಿ ಎರಡು ಕಾರುಗಳಲ್ಲಿ ಸುಮಾರು 18.06 ಲಕ್ಷ ರೂ. ಮೌಲ್ಯದ ಹೈಡ್ರೋ ಗಾಂಜಾವನ್ನು ಮಾರಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ದಾಳಿ ಮಾಡಲಾಗಿತ್ತು. ಆರೋಪಿಗಳು ಗಾಂಜವನ್ನು ಥೈಲ್ಯಾಂಡ್ ನಿಂದ ಅಕ್ರಮವಾಗಿ ಭಾರತಕ್ಕೆ ತರಿಸಿಕೊಂಡಿದ್ದಾರೆ. ಆರೋಪಿಗಳ ಪೈಕಿ ಮೂವರು ಕೇರಳ ರಾಜ್ಯದವರಾಗಿದ್ದು, ಒಟ್ಟು ಎಂಟು ಜನರ ವಿರುದ್ಧ ಗಂಗಾವತಿ ನಗರ ಪೊಲೀಸ್ ಠಾಣೆಯಲ್ಲಿ



ಉದಯವಾಹಿನಿ ಚಿತ್ರ

ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ. ಎರಡು ಕಾರುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಬಂಧಿತ ಆರೋಪಿಗಳನ್ನು ಸೌಜೇಶ ಕೆ.ಕೆ.(28), ಸಲಿಂ ಪಿ.ಪಿ.(27), ಬಿ.ದುರ್ಗಾ ಪ್ರಸಾದ್(27), ಬಾದ್ ಷಾ(32), ಮದನ್(26), ಸೂರ್ಯ ಪ್ರತಾಪ್ ರೆಡ್ಡಿ(19), ಮುಹಮ್ಮದ್ ಹಮೀದ್(22), ಮಣಿಕಂಠ(23) ಎಂದು ಗುರುತಿಸಲಾಗಿದೆ.

## 10.07 ಕೋಟಿ ರೂ.ವಂಚನೆ

• ಉದಯವಾಹಿನಿ ಕಲಬುರಗಿ

ಅಯ್ಯರವಾಡಿಯ ಗೋವಿಂದರಾಜ ವಾಗ್ಮೋರೆ ಮತ್ತು ಅವರ ಪತ್ನಿ ಭಾಗ್ಯಶ್ರೀ ಅವರು 38 ಜನ ವ್ಯಾಪಾರಿಸ್ಥರಿಂದ 8417.64 ಕ್ವಿಂಟಾಲ್ ತೊಗರಿ, 3481.15 ಕ್ವಿಂಟಾಲ್ ತೊಗರಿ ಬೇಳೆ, 100 ಕ್ವಿಂಟಾಲ್ ಕಡಲೆ ಬೇಳೆ, 500 ಕ್ವಿಂಟಾಲ್ ಬೂಸಾ (ಚುನ್ನಿ) ಮತ್ತು ನಗದು ಹಣ 52,88,840/–ರೂ.ಅರ್.ಟಿ.ಜಿ.ಎಸ್. ಮುಖಾಂತರ ತನ್ನ ಖಾತೆಗೆ ಹಾಕಿಸಿಕೊಂಡು ಮತ್ತು ಗುಪ್ತಾ ಎಂಬುವವರ ಜಾಬ್ ವರ್ಕ ಖರ್ಚು ಸೇರಿ 10,07,83,000/–ರೂ.ಪಡೆದುಕೊಂಡು ಹಣ ಅಥವಾ ಮಾಲು ಮರಳಿ ಕೊಡದೇ ತಲೆಮರೆಸಿಕೊಂಡು ಹಣವನ್ನು ಸ್ವಂತಕ್ಕೆ ಬಳಸಿಕೊಂಡು, ಮೋಸ ವಂಚನೆ ಮಾಡಿದ್ದಾರೆ ಎಂದು ಶಿವಸಾಯಿ ಟ್ರೇಡಿಂಗ್ ಕಂಪನಿ ಜನರಲ್ ಮರ್ಚಂಟ್ ಕಮೀಷನ್ ಏಜೆಂಟ್ ಅಂಗಡಿ ಮಾಲೀಕ ಹಣಮಂತರಾಯ ಮಾಲಿ ಪಾಟೀಲ ಎಂಬುವವರು ಚೌಕ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

## ಬೇಡಿಕೆ ಈಡೇರಿಕೆಗೆ ಆಗ್ರಹ

• ಉದಯವಾಹಿನಿ ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯ ಎದುರಿನಲ್ಲಿ ಮಂಗಳವಾರದಿಂದ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ವತಿಯಿಂದ ಪುರಸಭೆ ಎಲ್ಲಾ ನೌಕರರು ಆರಂಭಿಸಿರುವ ಅನಿರ್ಧಿಷ್ಟಾವದಿ ಮುಷ್ಕರ ಹೋರಾಟಕ್ಕೆ ಅನೇಕ ಮುಖಂಡರು, ಮಾಜಿ ಶಾಸಕರು ಹಾಗೂ ಸಂಘದ ಜಿಲ್ಲಾ ಪ್ರತಿನಿಧಿಗಳು ಆಗಮಿಸಿ ಬೆಂಬಲ ಸೂಚಿಸಿದ್ದಾರೆ.

ಸ್ಥಳಕ್ಕೆ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ರಮೇಶ ಹಲಗಿ, ಗೌರವಾಧ್ಯಕ್ಷ ಕೆಂಚಪ್ಪ ಪೂಜಾರಿ, ಗದಗ ತಾಲ್ಲೂಕ ಅಧ್ಯಕ್ಷ ಹೇಮೇಶ ಶೆಟ್ಟಿ, ವಿರುಪಾಕ್ಷಪ್ಪ ರಾಮಗೇರಿ, ನಾಗರಾಜ ಬಳ್ಳಾರಿ ಬೇಟಿ ನೀಡಿ ಬೆಂಬಲ ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ರಮೇಶ ಹಲಗಿ ಮಾತನಾಡಿ ಸಂಘದ ವಿವಿಧ ಬೇಡಿಕೆಗಳನ್ನು ಈಡೇರಿಸವಂತೆ ಸರಕಾರಕ್ಕೆ 45 ದಿನಗಳನ್ನು ಗಡುವು ನೀಡಲಾಗಿತ್ತು, ಅಲ್ಲಿಯವರೆಗೆ ಕಪ್ಪು ಪಟ್ಟಿ ಧರಿಸಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಕೆಲಸ ಮಾಡುತ್ತ ಹೋರಾಟ ಮಾಡಿದ್ದೇವೆ, ಆದರೆ ಸರಕಾರ ಯಾವುದೇ ಹೋರಾಟಕ್ಕೂ ಸ್ಪಂದನೆ ನೀಡುತ್ತಿಲ್ಲ ಎಂದು ಆರೋಪಿಸಿದರು. ಇದೀಗ ಸಭೆ ಮಾಡಿ ಪ್ರತಿ



ಉದಯವಾಹಿನಿ ಚಿತ್ರ

ಭಟನೆ ಹಿಂತೆಗೆದುಕೊಳ್ಳುವಂತೆ ಹೇಳುತ್ತಿದ್ದಾರೆ, ಆದರೆ ಬೇಡಿಕೆ ಈಡೇರಿಕೆ ಬಗ್ಗೆ ಯಾವುದೇ ಸ್ಪಷ್ಟ ನಿರ್ಧಾರ ನೀಡುತ್ತಿಲ್ಲ, ಪೌರ ಕಾರ್ಮಿಕರು, ಡ್ರೈವರ್, ಕ್ಲೀನರ್ಸ, ಲೋಡರ್ಸ ವಾಟರಸಪ್ಲೈ ಸೇರಿದಂತೆ ಹೊರ ಗುತ್ತಿಗೆ ಆದಾರ ಮೇಲೆ ಕೆಲಸ ಮಾಡುವ ಎಲ್ಲರನ್ನು ಸರಕಾರ ಕಾಯಂಗೊಳಿಸಬೇಕು ಹಾಗೂ ಇನ್ನಿತರ ಬೇಡಿಕೆಗಳು ಬಹುದಿನಗಳಿಂದ ಇದ್ದು ಇದರ ಬಗ್ಗೆ ಸರಕಾರ ಸ್ಪಷ್ಟ ಭರವಸೆ ನೀಡದ ಹೊರತು ಪ್ರತಿಭಟನೆ ಕೈಬಿಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ ಅವರು ಯಾವುದೇ ಒತ್ತಡಕ್ಕೆ ಬೆದರಿಕೆಗೆ ಮಣಿಯುವದಿಲ್ಲ ಎಂದರು. ಮಾಜಿ ಶಾಸಕ ರಾಮಣ್ಣ ಲಮಾಣಿ ಹೋರಾಟದ ಸ್ಥಳಕ್ಕೆ ಆಗಮಿಸಿ ಹೋರಾಟಗಾರರಿಗೆ ಬೆಂಬಲ ಸೂಚಿಸಿ ಮಾತನಾಡಿ ಮುಷ್ಕರನಿರತರ ಸಮಸ್ಯೆಗಳನ್ನು ಆಲಿಸಿ ಅವುಗಳನ್ನು ಬೇಗನೇ ಬಗೆಹರಿಸಬೇಕು ಎಂದು ಅವರು ಸರ್ಕಾರಕ್ಕೆ ಮನವಿ ಮಾಡಿದರು.

## ವಿವಿಧ ಕಾಮಗಾರಿ ಪರಿಶೀಲಿಸಿದ ಶಾಸಕ

• ಉದಯವಾಹಿನಿ ಬಳ್ಳಾರಿ

ನಿರ್ಮಾಣ ಹಂತದಲ್ಲಿರುವ ಬಳ್ಳಾರಿ ನಗರದ ಗಡಿಗಿ ಚೆನ್ನಪ್ಪ ವೃತ್ತದಿಂದ ಇಂದಿರಾ ವೃತ್ತದವರೆಗಿನ ರಸ್ತೆ, ವೃತ್ತ, ಗಡಿಗಿ ಚೆನ್ನಪ್ಪ ವೃತ್ತದಿಂದ ಈಡಿಗ ಹಾಸ್ಟೇಲ್ ವರೆಗಿನ ರಸ್ತೆ ಹಾಗೂ ವೀಕ್ಷಕ ಗ್ಯಾಲರಿ ಕಾಮಗಾರಿಗಳನ್ನು ಶಾಸಕ ಭರತ್ ರೆಡ್ಡಿಯವರು ನಿನ್ನೆ ಪರಿಶೀಲಿಸಿದರು. ತದನಂತರ ಎಪಿಎಂಸಿಯಿಂದ ಗವಿಯಪ್ಪ ವೃತ್ತದವರೆಗಿನ ರಸ್ತೆ ಅಗಲೀಕರಣ ಸುಂದರೀಕರಣ ಕಾಮಗಾರಿಯನ್ನು ಕೂಡ ವೀಕ್ಷಿಸಿದರು. ಈ ವೇಳೆ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಾದ ಇಇ ಹೇಮರಾಜ್, ಎಇಇ ಸುದರ್ಶನ್ ರೆಡ್ಡಿ, ಮಹಾನಗರ ಪಾಲಿಕೆಯ ಇಇ ಗೋವರ್ಧನ್ ಹಾಗೂ ಮಹಾನಗರ ಪಾಲಿಕೆಯ ಸದಸ್ಯರು ಇದ್ದರು.

### • ಶೈಕ್ಷಣಿಕ ವರ್ಷದ ಆರಂಭದಲ್ಲಿ ವಿದ್ಯಾರ್ಥಿಗಳನ್ನು ವಿನೂತನವಾಗಿ ಸ್ವಾಗತಿಸುವ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ

## ಶಾಲೆಗಳಲ್ಲಿನ್ನು ಮಕ್ಕಳ ಕಲರವ : ಸಂಭ್ರಮದ ಸ್ವಾಗತಕ್ಕೆ ಸಕಲ ಸಿದ್ಧತೆ

• ಉದಯವಾಹಿನಿ ಚಿತ್ರದುರ್ಗ

ಪ್ರತಿ ವರ್ಷದಂತೆ ಶೈಕ್ಷಣಿಕ ವರ್ಷದ ಆರಂಭದಲ್ಲಿ ವಿದ್ಯಾರ್ಥಿಗಳನ್ನು ವಿನೂತನವಾಗಿ ಸ್ವಾಗತಿಸುವ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಜಿಲ್ಲೆಯ ಶಾಲೆಗಳು, ಶಿಕ್ಷಕರು ಸಿದ್ಧಗೊಂಡಿದ್ದಾರೆ.

ಶಾಲಾ ಶಿಕ್ಷಣ ಇಲಾಖೆಯ ಸೂಚನೆಯಂತೆ ಗುರುವಾರದಿಂದ ಶಾಲೆಗಳು ಬಾಗಿಲು ತೆರೆಯುವುದರಿಂದ ಬುಧವಾರ ಶಾಲೆಗಳಲ್ಲಿ ಸ್ವಚ್ಛತಾ ಕಾರ್ಯಗಳು ಭರದಿಂದ ಸಾಗಿದವು. ಸಿಬ್ಬಂದಿ ಜತೆ ಕೈ ಜೋಡಿಸಿದ ಶಿಕ್ಷಕರು ಶಾಲಾ ಆವರಣ, ತರಗತಿ ಕೋಣೆ, ಅಡುಗೆ ಕೋಣೆ, ಶೌಚಾಲಯ ಹಾಗೂ ನೀರಿನ ಸಿಂಟೆಕ್ಸ್, ಅಡುಗೆ ಪರಿಕರ ಸ್ವಚ್ಛತೆ ಹಾಗೂ ಶಾಲೆಗಳ ಮೇಲ್ಚಾವಣಿ ಮೇಲಿರುವ ಕಸ ತೆಗೆದು ಸ್ವಚ್ಛತೆ ಕಾರ್ಯ ನಡೆಸಿದರು.

ಜಿಲ್ಲೆಯ ವಿವಿಧೆಡೆಯ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಶಾಲಾ ಪ್ರಾರಂಭಕ್ಕೆ ಸಕಲ ಸಿದ್ಧತೆಗಳು ನಡೆದುವು. ಗ್ರಾಮೀಣ ಭಾಗದಲ್ಲಿ ಮಕ್ಕಳ ಜತೆ ಗ್ರಾಮಗಳ ಓಣಿ ಓಣಿಗಳಲ್ಲಿ ಸಂಚರಿಸಿದ ಶಿಕ್ಷಕರು ಶಾಲಾ ಪ್ರಾರಂಭ ಹಾಗೂ ವಿಶೇಷ ದಾಖಲಾತಿ ಆಂದೋಲನ ನಡೆಸಿದರು.

ಶಾಲಾ ಕಟ್ಟಡಗಳಿಗೆ ತಳಿರು ತೋರಣ, ರಂಗೋಲಿ ಬಿಡಿಸಿ ಮಕ್ಕಳಿಗೆ ಸಂಭ್ರಮದ ಸ್ವಾಗತದ ಮೂಲಕ ಶಾಲಾ







ಉದಯವಾಹಿನಿ ಚಿತ್ರ

**ಮೆದೇಹಳ್ಳಿ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ ಉದ್ಘಾಟನಾ ಕಾರ್ಯಕ್ರಮ**

**ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025–26ನೇ ಸಾಲಿನ ಚಿತ್ರದುರ್ಗ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ ಉದ್ಘಾಟನಾ ಕಾರ್ಯಕ್ರಮ ಇದೇ ಮೇ 29 ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ತಾಲ್ಲೂಕು ಮೆದೇಹಳ್ಳಿ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.**

ಪ್ರಾರಂಭೋತ್ಸವದ ಮೊದಲ ದಿನದಿಂದಲೇ ಬಿಸಿ ಊಟ ಹಾಗೂ ಮೊಟ್ಟೆ, ಬಾಳೆಹಣ್ಣು, ರಾಗಿ ಮಾಲ್ಟ್ ವಿತರಿಸಲು ಕ್ರಮವಹಿಸಲಾಗಿದ್ದು, 2025–26ನೇ ಸಾಲಿನಿಂದ ರಾಗಿ ಮಾಲ್ಟ್ ಅನ್ನು ವಾರದ ಐದು ದಿನಗಳ ಕಾಲ ಮಕ್ಕಳಿಗೆ ನೀಡಲು ಶಾಲಾ ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿದೆ. ಅಲ್ಲದೆ ಈಗಾಗಲೆ ಅಗತ್ಯ ಪಠ್ಯಪುಸ್ತಕಗಳನ್ನು ಶಾಲೆಗಳಿಗೆ ಸರಬರಾಜು ಮಾಡಲು ಸರ್ಕಾರ ಸಾಕಷ್ಟು ಮುಂಚಿತವಾಗಿಯೇ ಕ್ರಮ ಕೈಗೊಂಡಿದೆ. ಕಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳು ಸೇರಿ ಜಿಲ್ಲೆಯಲ್ಲಿ 1,751 ಸರ್ಕಾರಿ ಶಾಲೆಗಳು, 275 ಅನುದಾನಿತ ಶಾಲೆಗಳು ಹಾಗೂ 390 ಅನುದಾನ ರಹಿತ ಶಾಲೆಗಳು ಇವೆ. 2024–25ನೇ ಸಾಲಿನಲ್ಲಿ ಚಳ್ಳಕೆರೆ ತಾಲ್ಲೂಕಿನಲ್ಲಿ 27,920 ವಿದ್ಯಾರ್ಥಿಗಳು, ಚಿತ್ರದುರ್ಗ ತಾಲ್ಲೂಕು 24,267 ವಿದ್ಯಾರ್ಥಿಗಳು, ಹಿರಿಯೂರು ತಾಲ್ಲೂಕಿನಲ್ಲಿ 18,877 ವಿದ್ಯಾರ್ಥಿಗಳು, ಹೊಳಲ್ಕೆರೆ ತಾಲ್ಲೂಕಿನಲ್ಲಿ 11,750 ವಿದ್ಯಾರ್ಥಿಗಳು, ಹೊಸದುರ್ಗ ತಾಲ್ಲೂಕಿನಲ್ಲಿ 13,354 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 17,663 ವಿದ್ಯಾರ್ಥಿಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1,13,831 ವಿದ್ಯಾರ್ಥಿಗಳು ನೋಂದಣಿಯಾಗಿದ್ದರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಶಾಲಾ ಪ್ರಾರಂಭೋತ್ಸವ ಉದ್ಘಾಟಿಸುವರು. ಮೆದೇಹಳ್ಳಿ ಗ್ರಾಪಂ ಅಧ್ಯಕ್ಷೆ ಕೆ.ಎನ್.ಕಾವ್ಯ ವಿಜಯಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಂ.ಆರ್.ಮಂಜುನಾಥ್, ಭಾಗವಹಿಸುವರು.

**ಕಸ ತೆಗೆದು ಸ್ವಚ್ಛತೆ ಕಾರ್ಯ**

> **ಪ್ರಸಕ್ತ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವಕ್ಕೆ ಸಕಲ ಸಿದ್ಧತೆ ಕೈಗೊಳ್ಳಲಾಗಿದ್ದು, ಗುರುವಾರದಿಂದ ಶಾಲೆಗಳು ವಿದ್ಯುಕ್ತವಾಗಿ ಪ್ರಾರಂಭವಾಗುತ್ತಿವೆ. ಈಗಾಗಲೇ ಶೇ.100ರಷ್ಟು ಪಠ್ಯಪುಸ್ತಕಗಳನ್ನು ಶಾಲೆಗಳಿಗೆ ತಲುಪಿಸಲಾಗಿದೆ. ಮೇ 27 ರಿಂದ ವಿಶೇಷ ದಾಖಲಾತಿ ಆಂದೋಲನ ಪ್ರಾರಂಭವಾಗಿದ್ದು, ಮೇ31 ರವರೆಗೆ ವಿಶೇಷವಾಗಿ ಎಲ್ಲಾ ಗ್ರಾಮಗಳಲ್ಲಿಯೂ ದಾಖಲಾತಿ ಆಂದೋಲನ ನಡೆಸಲಾಗುವುದು. ಜೂನ್ 02 ರಿಂದ 30 ರವರೆಗೆ ಸಾಮಾನ್ಯ ದಾಖಲಾತಿ ಆಂದೋಲನ ಅನುಷ್ಟಾನ ಮಾಡಲಾಗುವುದು. ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಮಿಂಚಿನ ಸಂಚಾರದ ಆಂದೋಲನ ಹಮ್ಮಿಕೊಳ್ಳಲಿದ್ದಾರೆ. ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸಲು ಶಾಲಾ ಪ್ರಾರಂಭದ ದಿನದಿಂದಲೇ ವಿಶೇಷ ಕ್ರಿಯಾ ಯೋಜನೆ ರೂಪಿಸಿಕೊಂಡು ವಿಶೇಷ ತರಗತಿಗಳನ್ನು ನಡೆಸಲಾಗುವುದು**
>
> –ಎಂ.ಆರ್.ಮಂಜುನಾಥ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ



## ರಸ್ತೆ ಕಾಮಗಾರಿ: ಹಲ್ಕೆ – ಮುಪ್ಪಾನೆ ಲಾಂಚ್ ಸೇವೆ ಸ್ಥಗಿತ

• ಉದಯವಾಹಿನಿ ಶಿವಮೊಗ್ಗ

ಸಾಗರ ತಾಲ್ಲೂಕಿನ ಕರೂರು ಹೋಬಳಿ ವ್ಯಾಪ್ತಿಯ ಹಲ್ಕೆ – ಮುಪ್ಪಾನೆ ಲಾಂಚ್ ಸೇವೆ ಜೂನ್ 4ರ ವರೆಗೆ ಸ್ಥಗಿತ ಗೊಳಿಸಲಾಗಿದೆ ಎಂದು ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ ಮಾಹಿತಿ ನೀಡಿದೆ. ತುಮರಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಹಲೆ ಮುಪ್ಪಾನೆ ಮಾರ್ಗಕ್ಕೆ ಕಾಂಕ್ರೀಟ್ ರಸ್ತೆ ಮಂಜೂರಾಗಿದ್ದು ಮೇ 29 ರಿಂದ ಜೂನ್ 4ರ ವರೆಗೆ ಮುಪ್ಪಾನೆ ಕಡವು ಬಳಿ ಕಾಂಕ್ರೀಟ್ ರಸ್ತೆ ಕಾಮಗಾರಿ ನೆಡೆಯಲಿದೆ. ಕಾಮಗಾರಿ ವೇಳೆ ಲಾಂಚ್ ಸೇವೆ ಸ್ಥಗಿತಗೊಳಿಸಲು ತುಮರಿ ಗ್ರಾಮ ಪಂಚಾಯ್ತಿ ಮನವಿ ಹಿನ್ನೆಲೆ ಈ ಕ್ರಮ ಕೈಗೊಳ್ಳಲಾಗಿದೆ. ಈ ಬಗ್ಗೆ ಪ್ರತಿಕ್ರಿಯಿಸಿದ ಕಡವು ನಿರೀಕ್ಷಕ ಧನೇಂದ್ರ ಕುಮಾರ್ ರಸ್ತೆ ಕಾಮಗಾರಿ ಹಿನ್ನೆಲೆಯಲ್ಲಿ ಲಾಂಚ್ ಸೇವೆ ಸ್ಥಗಿತಗೊಳಿಸಿ, ಸಾರ್ವಜನಿಕರ ಓಡಾಟಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ. ದ್ವೀಪ ಭಾಗದ ಕುದರೂರು, ಚನ್ನಗೊಂಡ, ಎಸ್ ಎಸ್ ಭೋಗ್, ತುಮರಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಗ್ರಾಮಸ್ಥರು ಮತ್ತು ಕಾರ್ಗಲ್ ಜೋಗದಿಂದ ಬರುವ ಪ್ರವಾಸಿಗರು ಜೂನ್ 4ರ ವರೆಗೆ ಸಮೀಪದ ಹೊಳೆಬಾಗಿಲು ಕಡವು ಮಾರ್ಗದ ಸಿಗಂದೂರು ಲಾಂಚ್' ಸೇವೆ ಬಳಸಲು ಮನವಿ ಮಾಡಿದ್ದಾರೆ.



ಉದಯವಾಹಿನಿ ಚಿತ್ರ

# ತಿರಂಗಾ 24 ಕೋಟಿ ಭಾರತೀಯ ಮುಸ್ಲಿಮರ ಹೆಮ್ಮೆ
## ಸೌದಿಯಲ್ಲಿ ಪಾಕಿಸ್ತಾನವನ್ನು ಬೂದಿ ಮಾಡಿದ ಅಸಾದುದ್ದೀನ್ ಓವೈಸಿ

**ರಿಯಾದ್:** ಭಾರತದೊಂದಿಗಿನ ತನ್ನ ಸಂಘರ್ಷವನ್ನು ಹಿಂದೂ-ಮುಸ್ಲಿಂ ವಿವಾದ ಎಂದು ಬಿಂಬಿಸುವ ಪಾಕಿಸ್ತಾನದ ಸುಳ್ಳು ಪ್ರಚಾರವನ್ನು ತೀವ್ರವಾಗಿ ಟೀಕಿಸಿರುವ ಎಐಎಂಐಎಂ ಸಂಸದ ಅಸಾದುದ್ದೀನ್ ಓವೈಸಿ, ಭಾರತದಲ್ಲಿ ವಾಸಿಸುವ 240 ಮಿಲಿಯನ್ ಭಾರತೀಯ ಮುಸ್ಲಿಮರಿಗೆ ತ್ರಿವರ್ಣ ಧ್ವಜ ಹೆಮ್ಮೆಯ ಪ್ರತೀಕ ಎಂದು ಹೇಳಿದ್ದಾರೆ.

ಭಾರತದ ಸರ್ವಪಕ್ಷ ಸಂಸದೀಯ ನಿಯೋಗದ ಸದಸ್ಯರಾಗಿರುವ ಅಸಾದುದ್ದೀನ್ ಓವೈಸಿ, ಸೌದಿ ಅರೇಬಿಯಾದಲ್ಲಿ ಪಾಕಿಸ್ತಾನದ ವಿರುದ್ಧ ತೀವ್ರ ವಾಗ್ದಳಿ ನಡೆಸಿದರು. ಭಾರತದೊಂದಿಗಿನ ತನ್ನ ಸಂಘರ್ಷವನ್ನು ಹಿಂದೂ-ಮುಸ್ಲಿಂ ವಿವಾದ ಎಂದು ಪಾಕಿಸ್ತಾನವು ಅರಬ್ ಜಗತ್ತಿನಲ್ಲಿ ಸುಳ್ಳಿನ ಪ್ರಚಾರ ಮಾಡುತ್ತಿದೆ. ಆದರೆ ಇದು ಹಿಂದೂ-ಮುಸ್ಲಿಂ ಸಂಘರ್ಷವಲ್ಲ ಬದಲಿಗೆ, ಭಯೋತ್ಪಾದನೆಗೆ ಕುಮ್ಮಕ್ಕು ನೀಡುವ ಪಾಕಿಸ್ತಾನ ಮತ್ತು ಜಾಗತಿಕ ಶಾಂತಿಯನ್ನು ಬಯಸುವ ಭಾರತದ ನಡುವಿನ ಸತ್ಯ-ಅಸತ್ಯದ ಸಂಘರ್ಷ ಎಂದು ಎಐಎಂಐಎಂ ಸಂಸದ ಹೇಳಿದರು.



ಭಾರತದಲ್ಲಿ 240 ಮಿಲಿಯನ್‌ಗಿಂತಲೂ ಹೆಚ್ಚು ಹೆಮ್ಮೆಯ ಮುಸ್ಲಿಮರು ವಾಸಿಸುತ್ತಿದ್ದಾರೆ. ಭಾರತದಲ್ಲಿ ಅನೇಕ ಪ್ರಸಿದ್ಧ ಇಸ್ಲಾಮಿಕ್ ವಿದ್ವಾಂಸರಿದ್ದಾರೆ. ಭಾರತದಲ್ಲಿ ಪಾಕಿಸ್ತಾನಕ್ಕಿಂತಲೂ ಮುಸ್ಲಿಮರು ವಾಸಿಸುತ್ತಿದ್ದಾರೆ. ಆದರೆ ಪಾಕಿಸ್ತಾನ ಮಾತ್ರ ತನ್ನನ್ನು ಮುಸ್ಲಿಂ ದೇಶ ಎಂದು ಕರೆದು ಕೊಳ್ಳುತ್ತದೆ. ಭಾರತ ಯಾವುದೇಧರ್ಮಕ್ಕೆ ಸೇರದ ದೇಶವಾಗಿದ್ದು, ಎಲ್ಲಾ ಧರ್ಮವನ್ನೂ ಸಮಾನವಾಗಿ ಕಾಣುವ ಸಿದ್ಧಾಂತದ ಮೇಲೆ ನಂಬಿಕೆ ಇರಿಸಿದೆ ಎಂದು ಅಸಾದುದ್ದೀನ್ ಓವೈಸಿ ಸ್ಪಷ್ಟಪಡಿಸಿದರು.

> ಭಾರತೀಯ ಮುಸ್ಲಿಂ ವಿದ್ವಾಂಸರು ಅರೇಬಿಕ್ ಭಾಷೆಯನ್ನು ಉತ್ತಮವಾಗಿ ಮಾತನಾಡಬಲ್ಲರು. ಭಾರತದಲ್ಲಿ ಮುಸ್ಲಿಮರ ಮೇಲೆ ತಾರತಮ್ಯ ಮಾಡಲಾಗುತ್ತಿದೆ ಎಂಬ ಪಾಕಿಸ್ತಾನದ ಸುಳ್ಳು ಪ್ರಚಾರವನ್ನು ಅರಬ್ ರಾಷ್ಟ್ರಗಳು ನಂಬಬಾರದು. ಏನೇ ಸಮಸ್ಯೆ ಇದ್ದರೂ ಅದನ್ನು ಆಂತರಿಕವಾಗಿ ಬಗೆಹರಿಸಿ ಕೊಳ್ಳುವಷ್ಟು ನಾವು ಸಶಕ್ತರಾಗಿದ್ದೇವೆ
>
> - ಅಸಾದುದ್ದೀನ್ ಓವೈಸಿ
> ಎಐಎಂಐಎಂ ಸಂಸದ


ಪಾಕಿಸ್ತಾನ ಭಯೋತ್ಪಾದಕ ಗುಂಪುಗಳಿಗೆ ಬೆಂಬಲ ನೀಡುವುದನ್ನು ನಿಲ್ಲಿಸಿದರೆ ದಕ್ಷಿಣ ಏಷ್ಯಾದಲ್ಲಿ ಶಾಂತಿ ಸ್ಥಿರತೆ ಸ್ಥಾಪನೆ ಸಾಧ್ಯ, ಎಂದ ಅಸಾದುದ್ದೀನ್ ಓವೈಸಿ, ಪಾಕಿಸ್ತಾನದ ಮಿಲಿಟರಿ ಶಕ್ತಿಯ ಪರಾಕ್ರಮದ ಸುಳ್ಳು ಪ್ರಚಾರವನ್ನು ಭಾರತ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಮೂಲಕ ಬಯಲು ಮಾಡಿದೆ ಎಂದು ಗುಡುಗಿದರು.

ಪಾಕಿಸ್ತಾನದಲ್ಲಿ ಭಯೋತ್ಪಾದಕ ಗುಂಪುಗಳು ತರಬೇತಿ ಪಡೆಯುತ್ತಿದ್ದು, ಪಾಕಿಸ್ತಾನವು ಹಿಂದೂ ಮುಸ್ಲಿಂ ಗಲಭೆಗಳನ್ನು ಸೃಷ್ಟಿಸುವ ಮೂಲಕ ಭಾರತವನ್ನು ಅಸ್ಥಿರಗೊಳಿಸುವ ಹುನ್ನಾರ ನಡೆಸಿದೆ ಎಂದು ಇದೇ ವೇಳೆ ಅಸಾಸುದ್ದೀನ್ ಓವೈಸಿ ಗಂಭೀರ ಆರೋಪ ಮಾಡಿದರು.

### ಹಣಕಾಸು ವ್ಯವಸ್ಥೆಯನ್ನು ನಿಯಂತ್ರಿಸಲು ಸಾಧ್ಯ

ಭಯೋತ್ಪಾದಕರಿಗೆ ಹಣಕಾಸು ನೆರವು ನೀಡುವುದನ್ನು ತಡೆಯಲು, ಪಾಕಿಸ್ತಾನವನ್ನು ಮತ್ತೆ ಹಣಕಾಸು ಕ್ರಿಯಾ ಕಾರ್ಯಪಡೆಯ ಬೂದು ಪಟ್ಟಿಗೆ ಸೇರಿಸಬೇಕು. ಹೀಗೆ ಮಾಡುವುದರಿಂದ ನಾವು ಈ ಎಲ್ಲಾ ಭಯೋತ್ಪಾದಕ ಸಂಘಟನೆಗಳ ಹಣಕಾಸು ವ್ಯವಸ್ಥೆಯನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ ಎಂದು ಅಸಾದುದ್ದೀನ್ ಓವೈಸಿ ಇದೇ ವೇಳೆ ಅಭಿಪ್ರಾಯಪಟ್ಟರು. ಪಾಕಿಸ್ತಾನದ ಭೂಸೇನಾ ಮುಖ್ಯಸ್ಥ ಜನರಲ್ ಅಸೀಮ್ ಮುನೀರ್ ಅವರನ್ನು ಫೀಲ್ಡ್ ಮಾರ್ಷಲ್ ಆಗಿ ಬಡ್ತಿ ನೀಡಿದಾಗ, ಅಮೆರಿಕದಿಂದ ಗೊತ್ತುಪಡಿಸಿದ ಭಯೋತ್ಪಾದಕ ಮೊಹಮ್ಮದ್ ಎಹ್ಸಾನ್ ಜನರಲ್ ಮುನೀರ್ ಪಕ್ಕದಲ್ಲಿ ಕುಳಿತಿದ್ದ. ಪಾಕಿಸ್ತಾನದ ಫೀಲ್ಡ್ ಮಾರ್ಷಲ್ ಜೊತೆ ಮೊಹಮ್ಮದ್ ಎಹ್ಸಾನ್ ಕೈಕುಲುಕುತ್ತಿರುವ ಫೋಟೋ ಸಾಕ್ಷಿಗಳಿವೆ. ಇದು ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನದ ಒಳಗೊಳ್ಳುವಿಕೆಗೆ ಸ್ಪಷ್ಟ ಪುರಾವೆ ಎಂದು ಎಐಎಂಐಎಂ ಸಂಸದ ತೀವ್ರ ವಾಗ್ದಳಿ ನಡೆಸಿದರು.

# ದಕ್ಷಿಣ ಕೊರಿಯಾದ ನೌಕಾಪಡೆಯ ಗಸ್ತು ವಿಮಾನ ಅಪಘಾತ, ನಾಲ್ಕು ಜನ ಸಿಬ್ಬಂದಿ ಸಾವು



**ಸಿಯೋಲ್:** ತರಬೇತಿ ಹಾರಾಟದ ಸಮಯದಲ್ಲಿ ನಾಲ್ವರು ಸಿಬ್ಬಂದಿಗಳನ್ನು ಹೊಂದಿದ್ದ ದಕ್ಷಿಣ ಕೊರಿಯಾದ ನೌಕಾಪಡೆಯ ವಿಮಾನವು ಅಪಘಾತಕ್ಕೀಡಾಗಿದ್ದು, ವಿಮಾನದಲ್ಲಿದ್ದ ನಾಲ್ವರು ಸಾವನ್ನಪ್ಪಿದ್ದಾರೆ. ಪಿ-3 ಗಸ್ತು ವಿಮಾನವು ಆಗ್ನೇಯ ನಗರ ವಾದ ಪೊಹಾಂಗ್‌ನಲ್ಲಿರುವ ತನ್ನ ನೆಲೆಯಿಂದ ಮಧ್ಯಾಹ್ನ 1:43ಕ್ಕೆ ಹೊರಟಿತು ಆದರೆ ಸ್ವಲ್ಪ ಸಮಯದಲ್ಲೇ ನೆಲಕ್ಕೆ ಬಿದ್ದಿದೆಎಂದು ನೌಕಾಪಡೆ ಹೇಳಿಕೆಯಲ್ಲಿ ತಿಳಿಸಿದೆ. ಶೋಧನಾ ಪ್ರಯತ್ನಗಳ ನಡೆಸುತ್ತಿರುವ ನೌಕಾಪಡೆಯ ಅಧಿಕಾರಿ ಜೋ ಯಂಗ್-ಸಾಂಗ್, ದೂರದರ್ಶನದಲ್ಲಿ ಮಾತನಾಡಿ ನಮ್ಮ ಇಬ್ಬರು ಸಿಬ್ಬಂದಿಯ ಶವ ಸಿಕ್ಕಿದೆ ಹತ್ತಿರದ ಆಸ್ಪತ್ರೆಗೆ ವರ್ಗಾಯಿಸಲು ಸಿದ್ಧತೆ ನಡೆಸುತ್ತಿದ್ದಾರೆ ಎಂದು ಹೇಳಿದರು.

**ಆಸ್ಪತ್ರೆಗೆ ವರ್ಗಾಯಿಸಲು ಸಿದ್ಧತೆ**

ಇತರ ಇಬ್ಬರಿಗಾಗಿ ಹುಡುಕಾಟ ಮುಂದುವರೆದಿದೆ ಎಂದು ಅವರು ಹೇಳಿದರು. ಅಪಘಾತದ ವೇಳೆ ನೆಲದಲ್ಲಿ ನಾಗರಿಕ ಸಾವುನೋವುಗಳ ಬಗ್ಗೆ ತಕ್ಷಣದ ವರದಿಗಳಿಲ್ಲ. ಅಪಘಾತದ ಕಾರಣವನ್ನು ತನಿಖೆ ಮಾಡಲು ಕಾರ್ಯಪಡೆಯನ್ನು ಸ್ಥಾಪಿಸಲಾಗಿದೆ, ಪಿ-3 ವಿಮಾನಗಳ ಎಲ್ಲಾ ಹಾರಾಟಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ನೌಕಾಪಡೆ ಹೇಳಿಕೆಯಲ್ಲಿ ತಿಳಿಸಿದೆ.

ಪೊಹಾಂಗ್‌ನಲ್ಲಿ ಅಪಾರ್ಟ್ ಮೆಂಟ್ ಸಂಕೀರ್ಣದ ಬಳಿಯ ಬೆಟ್ಟದ ಮೇಲೆ ವಿಮಾನ ಬಿದ್ದು ಬೆಂಕಿ ಕಾಣಿಸಿಕೊಂಡಿದೆ. ಸ್ಥಳೀಯ ನಿವಾಸಿಗಳಿಂದ ವರದಿಗಳು ಬಂದ ನಂತರ ರಕ್ಷಣಾ ಕಾರ್ಯಕರ್ತರು ಮತ್ತು ಅಗ್ನಿಶಾಮಕ ವಾಹನಗಳನ್ನು ಸ್ಥಳಕ್ಕೆ ಹೋಗಿ ಬೆಂಕಿ ನಂಧಿಸುವ ಕಾರ್ಯದಲ್ಲಿ ತೊಡಗಿದೆ ಎಂದು ಕಳೆದ ಡಿಸೆಂಬರ್‌ನಲ್ಲಿ, ದಕ್ಷಿಣ ಕೊರಿಯಾದ ಮುವಾನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಜೆಜು ಏರ್ ಪ್ರಯಾಣಿಕ ವಿಮಾನ ಅಪಘಾತಕ್ಕೀಡಾಯಿತು, ಅದರಲ್ಲಿದ್ದ 179 ಜನರು ಸಾವನ್ನಪ್ಪಿದರು. ಇದು ದಕ್ಷಿಣ ಕೊರಿಯಾದ ವಾಯುಯಾನ ಇತಿಹಾಸದಲ್ಲಿ ಅತ್ಯಂತ ಮಾರಕ ವಿಪತ್ತುಗಳಲ್ಲಿ ಒಂದಾಗಿದೆ

# ವಿದ್ಯಾರ್ಥಿ ವೀಸಾ ನಿಷೇಧಕ್ಕೆ ಚೀನಾ ಕಿಡಿ
## ಮತ್ತೆ ಡೊನಾಲ್ಡ್ ಟ್ರಂಪ್ ದುರುಗುಟ್ಟಿದ ಕ್ಸಿ ಜೆನ್‌ಪಿಂಗ್

**ಬೀಜಿಂಗ್:** ಅಮೆರಿಕ ಮತ್ತು ಚೀನಾ ಎಂಬ ಎರಡು ದೈತ್ಯ ಜಾಗತಿಕ ಶಕ್ತಿಗಳು ಒಂದಿಲ್ಲೊಂದು ಕಾರಣಕ್ಕೆ ಪರಸ್ಪರ ಕತ್ತಿ ಮಸೆಯುತ್ತಲೇ ಇವೆ. ಸುಂಕ ನೀತಿಯಿಂದಾಗಿ ವ್ಯಾಪಾರವೆಂಬ ರಣಾಂಗಣದಲ್ಲಿ ಪರಸ್ಪರ ಎದುರಾಗಿದ್ದ ಉಭಯ ರಾಷ್ಟ್ರಗಳು, ಈಗ ವಿದ್ಯಾರ್ಥಿ ವೀಸಾ ವಿಷಯವಾಗಿ ಪರಸ್ಪರ ತೊಡೆತಟ್ಟಿವೆ. ಚೀನೀ ವಿದ್ಯಾರ್ಥಿಗಳ ವೀಸಾ ನಿರಾಕರಣೆ, ಗಡಿಪಾರಿ ನಂತಹ ಅಮೆರಿಕದ ಕ್ರಮಗಳನ್ನು ಚೀನಾ ಅಸಮಂಜಸ ಎಂದು ಕರೆದಿದೆ. ಈ ವಿವಾದವು ಉಭಯ ದೇಶಗಳ ನಡುವಿನ ಶೈಕ್ಷಣಿಕ ವಿನಿಮಯ ಮತ್ತು ಸಂಬಂಧಗಳ ಮೇಲೆ ಪರಿಣಾಮ ಬೀರಿದೆ. ರಾಷ್ಟ್ರೀಯ ಭದ್ರತೆಯ ಕಾರಣ ನೀಡಿ ಅಮೆರಿಕ ತನ್ನ ಕ್ರಮಗಳನ್ನು ಸಮರ್ಥಿಸಿಕೊಂಡಿದ್ದು, ಚೀನಾದ ವಿರೋಧವನ್ನು ಎದುರಿಸುವುದಾಗಿ ಹೇಳಿದೆ. ಉದ್ಯೋಗದ ಮಾಹಿತಿ ಕೊಡದ ವಿದೇಶಿ ವಿದ್ಯಾರ್ಥಿಗಳ ವೀಸಾ ರದ್ದು ಮಾಡುವುದಾಗಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತ ಎಚ್ಚರಿಕೆ ನೀಡಿರುವುದನ್ನು ಇಲ್ಲಿ ಸ್ಮರಿಸಬಹುದು.

**ಚೀನಾದ ವಾದ:** ಅಮೆರಿಕವು ಚೀನೀ ವಿದ್ಯಾರ್ಥಿಗಳ ಮೇಲೆ ವಿಧಿಸುತ್ತಿರುವ ವೀಸಾ ನಿರ್ಬಂಧಗಳು, ಗಡಿಪಾರು ಕ್ರಮಗಳನ್ನು ಅಸಮಂಜಸ ಎಂದು ಚೀನಾ ತೀವ್ರವಾಗಿ ಖಂಡಿಸಿದೆ. ಈ ಕುರಿತು ಅಮೆರಿಕಕ್ಕೆ ತನ್ನ ತೀವ್ರ ಪ್ರತಿಭಟನೆಯನ್ನು ದಾಖಲಿಸಿದೆ. ಈ ಕುರಿತು ಮಾತನಾಡಿರುವ ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರರು, ಅಮೆರಿಕದ ಅಧಿಕಾರಿಗಳು ಚೀನೀ ವಿದ್ಯಾರ್ಥಿಗಳನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿಕೊಂಡು ದೀರ್ಘಕಾಲ ವಿಚಾರಣೆ ನಡೆಸುವುದು, ಅವರ ಎಲೆಕ್ಟ್ರಾನಿಕ್ ಸಾಧನಗಳನ್ನು ಪರಿಶೀಲಿಸುವುದು, ವೀಸಾಗಳನ್ನು ರದ್ದುಗೊಳಿಸುವುದು ಮತ್ತು ಕೆಲವರನ್ನು ಗಡಿಪಾರು ಮಾಡುವಂತಹ ಕ್ರಮಗಳನ್ನು ಕೈಗೊಳ್ಳುತ್ತಿರುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ಕಿಡಿಕಾರಿದ್ದಾರೆ.



### ಶೈಕ್ಷಣಿಕ ವಿನಿಮಯಕ್ಕೆ ಅಡ್ಡಿ

ಚೀನೀ ವಿದ್ಯಾರ್ಥಿಗಳ ವೀಸಾ ನಿರ್ಬಂಧವನ್ನು ರಾಜಕೀಯ ಪ್ರೇರಿತ, ತಾರತಮ್ಯ ನಡೆ ಎಂದು ಟೀಕಿಸಿರುವ ಚೀನಾ, ಈ ಕ್ರಮಗಳು ಶೈಕ್ಷಣಿಕ ವಿನಿಮಯಕ್ಕೆ ಅಡ್ಡಿಯುಂಟುಮಾಡುತ್ತವೆಯಲ್ಲದೆ, ಅಮೆರಿಕ-ಚೀನಾ ಸಂಬಂಧಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತವೆ ಎಂದು ಆತಂಕ ವ್ಯಕ್ತಪಡಿಸಿದೆ. ಇಂತಹ ಕ್ರಮಗಳು ಚೀನೀ ವಿದ್ಯಾರ್ಥಿಗಳ ಕಾನೂನುಬದ್ಧ ಹಕ್ಕುಗಳು ಮತ್ತು ಹಿತಾಸಕ್ತಿಗಳನ್ನು ಗಂಭೀರವಾಗಿ ಉಲ್ಲಂಘಿಸುತ್ತವೆ ಮತ್ತು ಉಭಯ ದೇಶಗಳ ನಡುವಿನ ಸಾಮಾನ್ಯ ಸಾಂಸ್ಕೃತಿಕ ವಿನಿಮಯ, ಶೈಕ್ಷಣಿಕ ಸಹಕಾರವನ್ನು ಹಾಳುಮಾಡುತ್ತವೆ ಎಂದು ಚೀನಾ ತೀವ್ರ ಅಸಮಧಾನ ವ್ಯಕ್ತಪಡಿಸಿದೆ.

ನಿಯಮಿತವಾಗಿ ತರಗತಿಗಳಿಗೆ ಹಾಜರಾಗದ ವಿದೇಶಿ ವಿದ್ಯಾರ್ಥಿಗಳ ಎಫ್-1 ವೀಸಾ ರದ್ದು ಮಾಡುವುದಾಗಿಯೂ ಅಮೆರಿಕ ಬೆದರಿಕೆಯೊಡ್ಡಿರುವುದನ್ನು ಇಲ್ಲಿ ಸ್ಮರಸಬಹುದು.

**ಅಮೆರಿಕದ ಪ್ರತಿಕ್ರಿಯೆ:** ಆದರೆ ಚೀನಾದ ವಿರೋಧವನ್ನು ಸಮರ್ಥವಾಗಿ ಎದುರಿಸುವುದಾಗಿ ಹೇಳಿರುವ ಅಮೆರಿಕ, ತನ್ನ ರಾಷ್ಟ್ರೀಯ ಭದ್ರತೆಯ ಹಕ್ಕನ್ನು ಕಾಯ್ದಿರಿಸಿರುವುದಾಗಿ ಪ್ರತಿಕ್ರಿಯೆ ನೀಡಿದೆ. ಈ ಕುರಿತು ಮಾತನಾಡಿರುವ ಅಮೆರಿಕದ ಸ್ಟೇಟ್ ಡಿಪಾರ್ಟ್‌ಮೆಂಟ್ ವಕ್ತಾರ ಮ್ಯಾಥ್ಯೂ ಮಿಲ್ಲರ್, ರಾಷ್ಟ್ರೀಯ ಭದ್ರತೆಯ ಕಾಳಜಿಯಿಂದಾಗಿ ಕೆಲವು ನಿರ್ದಿಷ್ಟ ಪ್ರಕರಣಗಳಲ್ಲಿ ಇಂತಹ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಚೀನಾವು ಅಮೆರಿಕದ ಈ ತಪ್ಪಾದ ನೀತಿಯನ್ನು ಹಿಂತೆಗೆದುಕೊಳ್ಳಬೇಕೆಂದು, ಚೀನೀ ವಿದ್ಯಾರ್ಥಿಗಳ ಮೇಲಿನ ಅನ್ಯಾಯದ ನಿರ್ಬಂಧಗಳನ್ನು ತೆಗೆದುಹಾಕಬೇಕೆಂದು ಒತ್ತಾಯಿಸಿದೆ.

ಅಮೆರಿಕದಲ್ಲಿರುವ ಚೀನೀ ನಾಗರಿಕರ ಹಕ್ಕುಗಳು, ಹಿತಾಸಕ್ತಿಗಳನ್ನು ರಕ್ಷಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದಾಗಿಯೂ ಚೀನಾ ಎಚ್ಚರಿಸಿದೆ. ಸೋಷಿಯಲ್ ಮಿಡಿಯಾ ಪ್ಲಾಟ್ ಫಾರಂಗಳಲ್ಲಿ ಅಮೆರಿಕನ್ನರು ತಮ್ಮ ಅಭಿಪ್ರಾಯ ದಾಖಲಿಸುವುದನ್ನು ತಡೆಯುವ ಅನ್ಯ ದೇಶಗಳ ಜನರ ವೀಸಾ ರದ್ದು ಮಾಡುವುದಾಗಿ ಅಮೆರಿಕ ಎಚ್ಚರಿಕೆ ನೀಡಿರುವುದನ್ನು ಇಲ್ಲಿ ಸ್ಮರಿಸಬಹುದು. ಈ ಘಟನೆಯು ವ್ಯಾಪಾರ, ತಂತ್ರಜ್ಞಾನ, ಮತ್ತು ಭೌಗೋಳಿಕ ರಾಜಕೀಯ ಸೇರಿದಂತೆ ಹಲವು ವಿಷಯಗಳಲ್ಲಿ ಈಗಾಗಲೇ ಉದ್ವಿಗ್ನವಾಗಿರುವ ಅಮೆರಿಕ-ಚೀನಾ ಸಂಬಂಧಗಳಲ್ಲಿ, ಮತ್ತೊಂದು ಬಿಕ್ಕಟ್ಟಿನ ಅಧ್ಯಾಯವನ್ನು ಸೇರಿಸಿದೆ ಎಂದು ಹೇಳಬಹುದು.

> ಚೀನಾದ ಮಿಲಿಟರಿಯೊಂದಿಗೆ ಸಂಪರ್ಕ ಹೊಂದಿರುವ ಅಥವಾ ಬೌದ್ಧಿಕ ಆಸ್ತಿ ಕಳ್ಳತನ ಮತ್ತು ಬೇಹುಗಾರಿಕೆಯಲ್ಲಿ ತೊಡಗಿರುವ ಶಂಕೆಯಿರುವ ವ್ಯಕ್ತಿಗಳ ಮೇಲೆ ಈ ಕ್ರಮಗಳು ಕೇಂದ್ರೀಕೃತವಾಗಿವೆ. ಆದರೆ, ಈ ನಿರ್ಬಂಧಗಳಿಂದ ಬಾಧಿತರಾದ ವಿದ್ಯಾರ್ಥಿಗಳ ಸಂಖ್ಯೆಯು, ಅಮೆರಿಕದಲ್ಲಿರುವ ಒಟ್ಟು ಚೀನೀ ವಿದ್ಯಾರ್ಥಿಗಳ ಸಂಖ್ಯೆಗೆ ಹೋಲಿಸಿದರೆ ತುಂಬಾ ಚಿಕ್ಕದು
>
> -ಮ್ಯಾಥ್ಯೂ ಮಿಲ್ಲರ್

# ಟ್ರಂಪ್ ಸಲಹೆಗಾರ ಹುದ್ದೆ ತೊರೆದ ಎಲೋನ್ ಮಸ್ಕ್

**ವಾಷಿಂಗ್ಟನ್:** ಫೆಡರಲ್ ಅಧಿಕಾರಶಾಹಿಯನ್ನು ಕಡಿಮೆ ಮಾಡಲು ಮತ್ತು ಕೂಲಂಕಷವಾಗಿ ಪರಿಶೀಲಿಸಲು ಪ್ರಯತ್ನಗಳನ್ನು ಮುನ್ನಡೆಸಿದ ನಂತರ ಎಲೋನ್ ಮಸ್ಕ್ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಉನ್ನತ ಸಲಹೆಗಾರರಾಗಿ ತಮ್ಮ ಸರ್ಕಾರಿ ಪಾತ್ರವನ್ನು ತೊರೆಯುತ್ತಿದ್ದಾರೆ. ಅವರ ನಿರ್ಗಮನವು ಸಾವಿರಾರು ವಜಾಗಳು, ಸರ್ಕಾರಿ ಸಂಸ್ಥೆಗಳ ನಿರ್ಗಮನ ಮತ್ತು ಮೊಕದ್ದಮೆಗಳ ರಾಶಿಯನ್ನು ಒಳಗೊಂಡ ಪ್ರಕ್ಷುಬ್ಧ ಅಧ್ಯಾಯದ ಅಂತ್ಯವನ್ನು ಸೂಚಿಸುತ್ತದೆ.

ಕ್ರಾಂತಿಯ ಹೊರತಾಗಿಯೂ, ಬಿಲಿಯನೇರ್ ಉದ್ಯಮಿ ವಾಷಿಂಗ್ಟನ್‌ನ ಪರಿಚಯವಿಲ್ಲದ ವಾತಾವರಣದಲ್ಲಿ ಹೆಣ ಗಾಡಿದರು, ಅವರು ನಿರೀಕ್ಷಿಸಿದ್ದಕ್ಕಿಂತ ಕಡಿಮೆ ಸಾಧಿಸಿದರು ಎನ್ನಲಾಗಿದೆ. ಅವರು ವೆಚ್ಚವನ್ನು ಕಡಿತ ಗೊಳಿಸುವ ಗುರಿಯನ್ನು ನಾಟಕೀಯವಾಗಿ ಕಡಿಮೆ ಮಾಡಿದರು 2 ಟ್ರಿಲಿಯನ್‌ನಿಂದ 1 ಟ್ರಿಲಿಯನ್‌ನಿಂದ 150 ಬಿಲಿಯನ್‌ಗೆ ಮತ್ತು ಅವರ ಗುರಿಗಳಿಗೆ ಪ್ರತಿರೋಧದ ಬಗ್ಗೆ ಹೆಚ್ಚುತ್ತಿರುವ ಹತಾಶೆಯನ್ನು ವ್ಯಕ್ತಪಡಿಸಿದರು. ಕೆಲವೊಮ್ಮೆ ಅವರು ಟ್ರಂಪ್ ಆಡಳಿತದ ಇತರ ಉನ್ನತ ಸದಸ್ಯರೊಂದಿಗೆ ಘರ್ಷಣೆ ನಡೆಸಿದರು, ಅವರು ತಮ್ಮ ಇಲಾಖೆಗಳನ್ನು ಮರುರೂಪಿಸಲು ಹೊಸಬರು ಮಾಡಿದ ಪ್ರಯತ್ನಗಳಿಂದ ಕೋಪಗೊಂಡರು, ಅವರ ಪ್ರಯತ್ನ ಗಳಿಗಾಗಿ ಅವರು ತೀವ್ರ ರಾಜಕೀಯ ಹೊಡೆತವನ್ನು ಎದುರಿಸಿದರು. ಟ್ರಂಪ್‌ಗಾಗಿ ಕೆಲಸ ಮಾಡುವ ಮಸ್ಕ್ ಪಾತ್ರವು ಯಾವಾಗಲೂ ತಾತ್ಕಾಲಿಕವಾರಲು ಉದ್ದೇಶಿಸಲಾಗಿತ್ತು, ಅವರು ಇತ್ತೀಚೆಗೆ ತಮ್ಮ ವ್ಯವಹಾರಗಳನ್ನು ನಡೆಸುವುದರತ್ತ ತಮ್ಮ ಗಮನವನ್ನು ಬದಲಾಯಿಸುವುದಾಗಿ ಸೂಚಿಸಿದರು,



ಉದಾಹರಣೆಗೆ ಎಲೆಕ್ಟ್ರಿಕ್ ಆಟೋಮೋಟಿವ್ ಟೆಸ್ಲಾ ಮತ್ತು ರಾಕೆಟ್ ಕಂಪನಿ ಸ್ಪೇಸ್‌ಎಕ್ಸ್.

ಆದರೆ ಆಡಳಿತ ಅಧಿ ಕಾರಿಗಳು ಮಸ್ಕ್ ಅವರು ಸರ್ಕಾರಿ ದಕ್ಷತೆಯ ಇಲಾಖೆಯ ನೇತೃತ್ವ ವಹಿಸುವ ಸ್ಥಾನದಿಂದ ಯಾವಾಗ ಹಿಂದೆ ಸರಿಯುತ್ತಾರೆ ಎಂಬುದರ ಕುರಿತು ಅಸ್ಪಷ್ಟರಾಗಿದ್ದರು, ಅವರು ತಮ್ಮ ಸಾಮಾಜಿಕ ಮಾಧ್ಯಮ ವೆಬ್‌ಸೈಟ್‌ನ ಪೋಸ್ಟ್‌ನಲ್ಲಿ ಹಠಾತ್ತನೆ ಹೊರಡುತ್ತಿದ್ದಾರೆ ಎಂದು ಬಹಿರಂಗಪಡಿಸಿದರು.

ವಿಶೇಷ ಸರ್ಕಾರಿ ಉದ್ಯೋಗಿಯಾಗಿ ನನ್ನ ನಿಗದಿತ ಸಮಯ ಕೊನೆಗೊಳ್ಳುತ್ತಿದ್ದಂತೆ, ವ್ಯರ್ಥ ಖರ್ಚು ಕಡಿಮೆ ಮಾಡುವ ಅವಕಾಶಕ್ಕಾಗಿ ಅಧ್ಯಕ್ಷ ಅವರಿಗೆ ನಾನು ಧನ್ಯವಾದ ಹೇಳಲು ಬಯಸುತ್ತೇನೆ ಎಂದು ಮಸ್ಕ್ ಬರೆದಿದ್ದಾರೆ. ಮಿಷನ್ ಸರ್ಕಾರದಾದ್ಯಂತ ಜೀವನ ವಿಧಾನ ವಾಗುತ್ತಿದ್ದಂತೆ ಕಾಲಾನಂತರದಲ್ಲಿ ಬಲಗೊಳ್ಳುತ್ತದೆ. ಬದಲಾವಣೆಯ ಬಗ್ಗೆ ಮಾತನಾಡಲು ಅನಾಮಧೇಯತೆಯನ್ನು ಕೋರಿದ ಶ್ವೇತಭವನದ ಅಧಿಕಾರಿಯೊಬ್ಬರು ಮಸ್ಕ್ ಅವರ ನಿರ್ಗಮನವನ್ನು ದೃಢಪಡಿಸಿದ್ದಾರೆ.

> ಸಿಬಿಎಸ್ ಒಂದು ಸಂದರ್ಶನದ ಭಾಗವನ್ನು ಬಿಡುಗಡೆ ಮಾಡಿದ ಒಂದು ದಿನದ ನಂತರ ಮಸ್ಕ್ ತಮ್ಮ ನಿರ್ಧಾರವನ್ನು ಘೋಷಿಸಿದರು, ಅದರಲ್ಲಿ ಅವರು ಟ್ರಂಪ್ ಅವರ ದೊಡ್ಡ ಸುಂದರ ಮಸೂದೆ ಎಂದು ಕರೆಯುವುದರಿಂದ ಅವರು ನಿರಾಶೆಗೊಂಡಿದ್ದಾರೆ ಎಂದು ಹೇಳುವ ಮೂಲಕ ಟೀಕಿಸಿದರು.

ಶಾಸನವು ತೆರಿಗೆ ಕಡಿತ, ವರ್ಧಿತ ವಲಸೆ ಜಾರಿಯ ಮಿಶ್ರಣವನ್ನು ಒಳಗೊಂಡಿದೆ. ಮಸ್ಕ್ ಇದನ್ನು ಫೆಡರಲ್ ಕೊರತೆಯನ್ನು ಹೆಚ್ಚಿಸುವ, ಅವರ ಸರ್ಕಾರಿ ದಕ್ಷತೆಯ ಇಲಾಖೆಯ ಕೆಲಸವನ್ನು ದುರ್ಬಲ ಗೊಳಿಸುವ ಬೃಹತ್ ಖರ್ಚು ಮಸೂದೆ ಎಂದು ಬಣ್ಣಿಸಿದ್ದಾರೆ. ಒಂದು ಮಸೂದೆ ದೊಡ್ಡದಾಗಿರಬಹುದು ಸುಂದರವಾಗಿರಬಹುದು ಎಂದು ನಾನು ಭಾವಿಸುತ್ತೇನೆ. ಆದರೆ ಅದು ಎರಡೂ ಆಗಿರಬಹುದೇ ಎಂದು ನನಗೆ ತಿಳಿದಿಲ್ಲ ಎಂದು ಮಸ್ಕ್ ಹೇಳಿದರು. ಓವಲ್ ಕಚೇರಿಯಲ್ಲಿ ಮಾತನಾಡಿದ ಟ್ರಂಪ್, ಶಾಸನದ ಮಾತುಕತೆಯಲ್ಲಿ ಒಳಗೊಂಡಿರುವ ಸೂಕ್ಷ್ಮ ರಾಜಕೀಯದ ಬಗ್ಗೆ ಮಾತನಾಡುವ ಮೂಲಕ ತಮ್ಮ ಕಾರ್ಯಸೂಚಿಯನ್ನು ಸಮರ್ಥಿಸಿಕೊಂಡಿದ್ದರು.

# ಭೂಮಿಗೆ ಅಪ್ಪಳಿಸಲಿವೆ ಮೂರು ಕ್ಷುದ್ರಗ್ರಹಗಳು

**ನವದೆಹಲಿ:** ಮುಂಬರುವ ಕೆಲವು ದಿನಗಳಲ್ಲಿ ಭೂಮಿಗೆ ಮೂರು ಕ್ಷುದ್ರಗ್ರಹಗಳು ಅಪ್ಪಳಿಸುವ ಸಾಧ್ಯತೆಗಳಿವೆ ಎಂದು ಖಗೋಳಶಾಸ್ತ್ರ ವಿಜ್ಞಾನಿಗಳು ಎಚ್ಚರಿಸಿದ್ದಾರೆ. ಒಂದು ಕ್ಷುದ್ರಗ್ರಹ ಭೂಮಿಗೆ ಅಪ್ಪಳಿಸಿದರೆ ಇಡೀ ಒಂದು ನಗರವೇ ನಾಶವಾಗ ಬಲ್ಲದು ಎಂದು ಖಗೋಳ ವಿಜ್ಞಾನ, ಖಗೋಳ ಭೌತಶಾಸ್ತ್ರ ಜರ್ನಲ್‌ನಲ್ಲಿ ವಿಜ್ಞಾನಿಗಳ ಅಭಿಪ್ರಾಯ ಬರೆಯಲ್ಪಟ್ಟಿದೆ. ಶುಕ್ರ ಗ್ರಹದ ಕಕ್ಷೆಯನ್ನು ಹಂಚಿಕೊಂಡಿರುವ 2020. 524522, 2002 1 ಎಂಬ ಮೂರು ಬಾಹ್ಯಾಕಾಶ ಶಿಲೆಗಳು ಭೂಮಿಯತ್ತ ಅತಿ ವೇಗವಾಗಿ ಧಾವಿಸಿ ಬರತ್ತಿದ್ದು ಕೆಲವೇ ದಿನಗಳಲ್ಲಿ ಭೂಮಿಗೆ ಅಪ್ಪಳಿಸುವ ಸಾಧ್ಯತೆಗಳಿವೆ ಎಂದು ವರದಿಯಾಗಿದೆ. ಬ್ರೆಜಿಲ್‌ನ ಸಾವೊ ಪಾಲೊ ಸ್ಟೇಟ್ ಯೂನಿವರ್ಸಿಟಿಯ ವ್ಯಾಲೆರಿಯೊ ಕಾರುಬಾ ನೇತೃತ್ವದ ಅಂತರರಾಷ್ಟ್ರೀಯ ಸಂಶೋಧನಾ ತಂಡದ ಪ್ರಕಾರ, ಕ್ಷುದ್ರ ಗ್ರಹಗಳು ಸೂರ್ಯನ ಪ್ರಜ್ವಲಿಸುವಿಕೆಯಲ್ಲಿ ಅಡಗಿಕೊಂಡಿವೆ. ಇದರಿಂದಾಗಿ ಭೂಮಿಯ ಮೇಲಿನ ದೂರದರ್ಶಕಗಳೊಂದಿಗೆ ಅವುಗಳನ್ನು ಪತ್ತೆಹಚ್ಚುವುದು ಅಸಾಧ್ಯವಾಗಿದೆ. ಅವುಗಳ ಪ್ರಸ್ತುತ ಮಾರ್ಗಗಳು ಅವುಗಳನ್ನು ಶುಕ್ರಕ್ಕೆ ಹತ್ತಿರ ತರದಿದ್ದರೂ, ಸಣ್ಣ ಗುರುತ್ವಾಕರ್ಷಣೆಯ ಅಡಚಣೆಯು ಸಹ ಅವುಗಳ ಕಕ್ಷೆಗಳನ್ನು ಭೂಮಿಯ ಕಡೆಗೆ ಬದಲಾಯಿಸಬಹುದು.



ಇದು ಸಂಭಾವ್ಯವಾಗಿ ವಿನಾಶಕಾರಿ ಪರಿಣಾಮಗಳನ್ನು ಬೀರುತ್ತದೆ ಎಂದು ಸಂಶೋಧಕರು ಎಚ್ಚರಿಸಿದ್ದಾರೆ. ಒಂದು ವೇಳೆ ಇವುಗಳಲ್ಲಿ ಒಂದು ಡಿಕ್ಕಿ ಹೊಡೆದರೆ, ಪರಿಣಾಮವು 3 ಕಿಲೋ ಮೀಟಗಳಿಗಿಂತ ಹೆಚ್ಚು ಅಗಲದ ಕುಳಿಯನ್ನು ಸೃಷ್ಟಿಸಬಹುದು, ಹಿರೋಷಿಮಾದ ಮೇಲೆ ಬೀಳಿಸಿದ ಪರಮಾಣು ಬಾಂಬ್‌ಗಿಂತ ಒಂದು ಮಿಲಿಯನ್ ಪಟ್ಟು ಹೆಚ್ಚಿನ ಶಕ್ತಿಯನ್ನು ಬಿಡುಗಡೆ ಮಾಡಬಹುದು ಎಂದು ಫಾಕ್ಸ್ ನ್ಯೂಸ್ ವರದಿ ಮಾಡಿದೆ. ಈ ಸಹ-ಕಕ್ಷೆಯ ಕ್ಷುದ್ರಗ್ರಹಗಳು ಶುಕ್ರನೊಂದಿಗಿನ ನಿಕಟ ಮುಖಾಮುಖಿಗಳಿಂದ ರಕ್ಷಿಸಲ್ಪಟ್ಟಿವೆ. ಆದರೆ ಭೂಮಿಯೊಂದಿಗಿನ ಅಲ್ಲ ಎಂದು ಸಂಶೋಧಕರು ಹೇಳಿದ್ದಾರೆ ಎಂದು ದಿ ಡೈಲಿ ಗ್ಯಾಲಕ್ಸಿ ಉಲ್ಲೇಖಿಸಿದೆ. ಈ ವಸ್ತುಗಳು ವಿಶೇಷವಾಗಿ ಅಪಾಯಕಾರಿ ಏಕೆಂದರೆ ಸೂರ್ಯನಿಗೆ ಹೋಲಿಸಿದರೆ ಅವುಗಳ ಸ್ಥಾನವು ಕಾಸ್ಮಿಕ್ ಬ್ಲೈಂಡ್ ಸ್ಪಾಟ್‌ನಂತೆ ಕಾರ್ಯನಿರ್ವಹಿಸುತ್ತದೆ.


### ನಾಲ್ಕು ವಾರಗಳ ಸೂಚನೆ

ಇದು ಕೊನೆಯ ಕ್ಷಣದ ಪತ್ತೆ ಹಚ್ಚುವಿಕೆ ಅತ್ಯಂತ ಕಷ್ಟಕರವಾಗಿಸುತ್ತದೆ. ಅಂತಹ ಬೆದರಿಕೆಗಳನ್ನು ಮೇಲ್ವಿಚಾರಣೆ ಮಾಡುವ ಚಿಲಿಯಲ್ಲಿರುವ ರೂಬಿನ್ ವೀಕ್ಷಣಾಲಯವು ಯಾವುದೇ ಸಂಭಾವ್ಯ ಪರಿಣಾಮದ ಮೊದಲು ಕೇವಲ ಎರಡರಿಂದ ನಾಲ್ಕುವಾರಗಳ ಸೂಚನೆಯನ್ನು ಹೊಂದಿರುತ್ತದೆ. ಶುಕ್ರನ ಬಳಿ ಮೀಸಲಾದ ಬಾಹ್ಯಾಕಾಶ ಆಧಾರಿತ ಕಾರ್ಯಾಚರಣೆಯು ಮಾತ್ರ ಈ ಗುಪ್ತ, ಸಂಭಾವ್ಯ ಅಪಾಯಕಾರಿ ಕ್ಷುದ್ರಗ್ರಹಗಳನ್ನು ಪರಿಣಾಮಕಾರಿಯಾಗಿ ಪತ್ತೆ ಮಾಡುತ್ತದೆ ಎಂದು ಅಧ್ಯಯನವು ಸೂಚಿಸುತ್ತದೆ.

# ಮುರ್ಷಿದಾಬಾದ್ ಗಲಭೆ, ನೇಮಕಾತಿ ಹಗರಣ
## ಟಿಎಂಸಿ ಸರ್ಕಾರದ ವಿರುದ್ಧ ಗುಡುಗಿದ ಮೋದಿ

**ಅಲಿಪುರ್‌ದೌರ್:** ಪಶ್ಚಿಮ ಬಂಗಾಳದಲ್ಲಿ ಅಸ್ತಿತ್ವದಲ್ಲಿರುವ ತೃಣಮೂಲ ಕಾಂಗ್ರೆಸ್ ಸರ್ಕಾರದ ವಿರುದ್ಧ ಗುರುವಾರ ವಾಗ್ದಾಳಿ ನಡೆಸಿರುವ ಪ್ರಧಾನಿ ನರೇಂದ್ರ ಮೋದಿ, ರಾಜ್ಯವನ್ನು ಗಲಭೆ, ಭ್ರಷ್ಟಾಚಾರ ಮತ್ತು ಅರಾಜಕತೆಯು ತೀವ್ರವಾಗಿ ಬಾಧಿಸುತ್ತಿದೆ ಎಂದು ಗುಡುಗಿದ್ದಾರೆ. ಅಲಿಪುರ್‌ದೌರ್‌ನಲ್ಲಿ ನಡೆದ ಸಮಾವೇಶದಲ್ಲಿ ಮಾತನಾಡಿದ ಮೋದಿ, ಮುರ್ಷಿದಾಬಾದ್, ಮಾಲ್ದಾದಲ್ಲಿ ಇತ್ತೀಚೆಗೆ ನಡೆದ ಗಲಭೆಗಳು ಟಿಎಂಸಿ ಆಡಳಿತದ ನಿಷ್ಕರುಣೆ, ಉದಾಸೀನತೆಗೆ ಸಾಕ್ಷಿ ಎಂದು ಪ್ರತಿಪಾದಿಸಿದ್ದಾರೆ.

ಪಶ್ಚಿಮ ಬಂಗಾಳವು ಇದೀಗ ಸರಣಿ ಬಿಕ್ಕಟ್ಟುಗಳನ್ನು ಎದರಿಸುತ್ತಿದೆ. ಜನರಿಗೆ 'ಕ್ರೂರ ಸರ್ಕಾರ' ಬೇಡವಾಗಿದೆ. ಅವರು ಬದಲಾವಣೆ ಬಯಸಿದ್ದು, ಉತ್ತಮ ಆಡಳಿತವನ್ನು ಎದುರು ನೋಡುತ್ತಿದ್ದಾರೆ. ಆ ಕಾರಣಕ್ಕಾಗಿಯೇ, ಕ್ರೌರ್ಯ ಮತ್ತು ಭ್ರಷ್ಟಾಚಾರ ಬೇಕಾಗಿಲ್ಲ ಎಂದು ಇಡೀ ಬಂಗಾಳ ಹೇಳುತ್ತಿದೆ ಎಂದು ಹೇಳಿದ್ದಾರೆ. ಮೊದಲನೆಯದಾಗಿ, ಹಿಂಸಾಚಾರ, ಅವ್ಯವಸ್ಥೆಯು ಸಮಾಜದ ಚೌಕಟ್ಟನ್ನು ಹರಿದುಹಾಕುತ್ತಿದೆ. ಎರಡನೆಯದ್ದು, ತಮ್ಮ ವಿರುದ್ಧ ನಡೆದ ಅಪರಾಧ ಕೃತ್ಯಗಳಿಂದಾಗಿ ರಾಜ್ಯದ ತಾಯಂದಿರು, ಸಹೋದರಿಯರಲ್ಲಿ ಅಭದ್ರತೆಯ ಭಾವನೆ ಗಟ್ಟಿಯಾಗುತ್ತಿದೆ ಎಂದು ವಿವರಿಸಿದ್ದಾರೆ. ಮುಂದುವರಿದು, ನಿರುದ್ಯೋಗದ ಏರಿಕೆ, ಅವಕಾಶಗಳ ಕೊರತೆಯಿಂದಾಗಿ ಯುವಕರಲ್ಲಿ ಹತಾಶೆ ಭಾವನೆ ಹೆಚ್ಚುತ್ತಿರುವುದು ಮೂರನೇ ಸಮಸ್ಯೆಯಾಗಿದೆ. ವ್ಯವಸ್ಥೆಯ ಮೇಲೆ ಸಾರ್ವಜನಿಕರ ವಿಶ್ವಾಸ ಕಳೆದು ಕೊಳ್ಳುವುದಕ್ಕೆ ಕಾರಣವಾಗಿರುವ ವ್ಯಾಪಕ ಭ್ರಷ್ಟಾಚಾರ ನಾಲ್ಕನೇಯದು ಎಂದು ಪ್ರತಿಪಾದಿಸಿದ್ದಾರೆ. ಆಡಳಿತ ಪಕ್ಷದ ಸ್ವಾರ್ಥ ರಾಜಕಾರಣ ಐದನೇ ಬಿಕ್ಕಟ್ಟಾಗಿದೆ. ಇದು, ಬಡವರ ಹಕ್ಕುಗಳನ್ನು ಕಸಿದುಕೊಳ್ಳುತ್ತಿದೆ.



ಮುರ್ಷಿ ದಾಬಾದ್, ಮಾಲ್ಡಾದಲ್ಲಿ ನಡೆದ ಘಟನೆಗಳು ಟಿಎಂಸಿ ಸರ್ಕಾರದ ಕ್ರೌರ್ಯ, ಕಾನೂನು, ಸುವ್ಯವಸ್ಥೆ ಕಾಪಾಡಲು ವಿಫಲವಾಗಿರುವುದಕ್ಕೆ ಉದಾ ಹರಣೆಗಳಾಗಿವೆ ಎಂದು ಸಾರಿದ್ದಾರೆ. ಶಿಕ್ಷಕರ ನೇಮಕಾತಿ ಹಗರಣದ ಕುರಿತೂ ಮಾತನಾಡಿರುವ ಮೋದಿ, ಭ್ರಷ್ಟಾಚಾರ, ಅಕ್ರಮದ ಮೂಲಕ ಟಿಎಂಸಿ ಸರ್ಕಾರವು ಸಾವಿರಾರು ಶಿಕ್ಷಕರು, ಅವರ ಕುಟುಂಬಗಳ ಭವಿಷ್ಯವನ್ನು ನಾಶ ಮಾಡಿದೆ ಎಂದು ಕಿಡಿಕಾರಿದ್ದಾರೆ.

## ಕೊರೋನಾ ರೂಪಾಂತರ ತಳಿಯ ಆತಂಕ ಹೆಚ್ಚಿದ್ದು, ಮುನ್ನೆಚ್ಚರಿಕೆ ಅಗತ್ಯ
# ಸೋಂಕಿನ ಲಕ್ಷಣಗಳಿದ್ದರೆ ತಕ್ಷಣ ಪರೀಕ್ಷೆಗೆ ತಜ್ಞರ ಸೂಚನೆ

### ಯಾವೆಲ್ಲಾ ಲಕ್ಷಣಗಳಿದ್ದರೆ ಸೋಂಕು ಪರೀಕ್ಷೆ?

- ಗಂಟಲು ನೋವು
- ಸುಸ್ತು
- ಕೆಮ್ಮು
- ಜ್ವರ,
- ಸ್ನಾಯು ನೋವು
- ಮೂಗು ಕಟ್ಟುವಿಕೆ
- ತಲೆನೋವು
- ವಾಕರಿಕೆ
- ಹೊಟ್ಟೆ ನೋವು

**ಹೊಸದಿಲ್ಲಿ:** ದೇಶದಲ್ಲಿ ಕೋವಿಡ್ ಸೋಂಕು ಪ್ರಕರಣಗಳು ಹೆಚ್ಚಿರುವ ಪ್ರದೇಶಗಳಲ್ಲಿ ಕರ್ನಾಟಕ ಅದರಲ್ಲೂ ಬೆಂಗಳೂರು ಒಂದಾಗಿದೆ. ಸದ್ಯ ಕೊರೋನಾ ರೂಪಾಂತರ ತಳಿಯ ಆತಂಕ ಹೆಚ್ಚಿರುವ ಹಿನ್ನೆಲೆ ಹೆಚ್ಚಿನ ಮುಂಜಾಗ್ರತಾ ಕ್ರಮವಹಿಸುವ ಜತೆಗೆ ಸೋಂಕು ಲಕ್ಷಣ ಕಂಡಕೂಡಲೇ ಪರೀಕ್ಷೆ ಮಾಡಿಸಿಕೊಳ್ಳಲು ತಜ್ಞರು ಸೂಚನೆ ನೀಡಿದ್ದಾರೆ. ಕೇಂದ್ರ ಸರ್ಕಾರದ ಆರೋಗ್ಯ ಇಲಾಖೆ ಮಾಹಿತಿ ಪ್ರಕಾರ, ದೇಶದಲ್ಲಿ ದೆಹಲಿ, ಆಂಧ್ರ ಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಮತ್ತು ಕರ್ನಾಟಕದ ಬೆಂಗಳೂರಿನಲ್ಲಿ ಹೆಚ್ಚಿನ ಪ್ರಕರಣಗಳು ವರದಿಯಾಗಿವೆ. ಸದ್ಯ ದೇಶದಾದ್ಯಂತ ಒಟ್ಟಾರೆ 1,010 ಸಕ್ರಿಯ ಕೇಸ್‌ಗಳಿದ್ದು, ಈ ಕೇಸ್‌ಗಳ ಪೈಕಿ ಬೆಂಗಳೂರಿನಲ್ಲಿ ಶೇಕಡಾ 10 ಕ್ಕಿಂತಲೂ ಹೆಚ್ಚಿವೆ.

**ಕರ್ನಾಟಕ ಬೆಂಗಳೂರಿನಲ್ಲಿ ಕೊರೋನಾ ಕೇಸ್ ಹೇಗಿದೆ?**



ಕರ್ನಾಟಕದಲ್ಲಿ ಬುಧವಾರ ಒಂದೇ ದಿನ 40 ಮಂದಿಯಲ್ಲಿ ಕೊರೋನಾ ದೃಢಪಟ್ಟಿದೆ. 400ಕ್ಕೂ ಅಧಿಕ ಪರೀಕ್ಷೆಗಳನ್ನು ಮಾಡಿದ್ದು ಪಾಸಿಟಿವಿಟಿ (ಸೋಂಕು ದೃಢಪ್ರಮಾಣ) ಶೇಕಡಾ 10 ರಷ್ಟಿದೆ. ಅಂದರೆ, ಸೋಂಕು ಪರೀಕ್ಷೆಗೆ ಒಳಪಡುವ ಪ್ರತಿ 100 ಮಂದಿಯಲ್ಲಿ 10 ಮಂದಿಯಲ್ಲಿ ಸೋಂಕು ದೃಢಪಡುತ್ತಿದೆ. ಸದ್ಯ ಕರ್ನಾಟಕದಲ್ಲಿ 126 ಸಕ್ರಿಯ ಸೋಂಕಿತರಿದ್ದು, ಬೆಂಗಳೂರಿನಲ್ಲಿಯೇ 100 ಕ್ಕೂ ಅಧಿಕ ಮಂದಿ ಇದ್ದಾರೆ. ಇವರೆಲ್ಲಾ ಆಸ್ಪತ್ರೆ ಮನೆಗಳಲ್ಲಿ ಚಿಕಿತ್ಸೆ/ ಆರೈಕೆಯಲ್ಲಿದ್ದಾರೆ.

**ಸೋಂಕಿನ ಲಕ್ಷಣಗಳು ಇದ್ದರೆ ಪರೀಕ್ಷೆ ಮಾಡಿಸಿ:** ಕೋವಿಡ್ NB 1.8.1, NF.7 ಎಂಬ ಹೊಸ ರೂಪಾಂತರಗಳು ಕಂಡುಬಂದಿವೆ. ಸೋಂಕು ಹೆಚ್ಚುತ್ತಿರುವ ಕಾರಣ, ತಜ್ಞರು ಕೆಲವು ಲಕ್ಷಣಗಳನ್ನು ಗಮನಿಸಲು, ಸೋಂಕು ಪರೀಕ್ಷೆ ಮಾಡಿಸಿಕೊಳ್ಳಲು ಸಲಹೆ ನೀಡಿದ್ದಾರೆ.

**ಲಸಿಕೆ ಹಾಕಿಸಿಕೊಳ್ಳದವರಿಗೆ ಕಾಡಲಿದೆ ಕೊರೋನಾ:** ಕೊರೋನಾ ಸೋಂಕಿನ ತಡೆ ಲಸಿಕೆಯನ್ನು ಹಾಕಿಸಿಕೊಳ್ಳದವರಿಗೆ ರೂಪಾಂತರವು ಕಾಡಲಿದೆ ಎನ್ನುತ್ತಾರೆ ತಜ್ಞರು. ವಯಸ್ಕರಿಗೆ ತಗಲುವ ಸಾಧ್ಯತೆ ಇದೆ. ಇದರ ತೀವ್ರತೆ ಕಡಿಮೆ ಅಥವಾ ಮಧ್ಯಮವಾಗಿರಬಹುದು. ಆಸ್ಪತ್ರೆಗೆ ದಾಖಲಾಗುವ ಸಾಧ್ಯತೆಗಳು ಕಡಿಮೆ ಎಂದು ಹೇಳಲಾಗಿದೆ.

**ಭಾರತದಲ್ಲಿ ಹೊಸ ರೂಪಾಂತರಗಳು ಎಲ್ಲಿ ಮೊದಲು ಪತ್ತೆ?**
2025 ಏಪ್ರಿಲ್‌ನಲ್ಲಿ ತಮಿಳುನಾಡಿನಲ್ಲಿ -NB.1.8.1
2025 ಮೇನಲ್ಲಿ ಗುಜರಾತ್‌ನಲ್ಲಿ - NF. 7

### ಸೋಂಕಿನ ಲಕ್ಷಣಗಳಿದ್ದರೆ ಏನು ಮಾಡಬೇಕು?

> ತಜ್ಞರು ಹೇಳುವಂತೆ, ಕೊರೋನಾ ಪರೀಕ್ಷೆಯಲ್ಲಿ ಪಾಸಿಟಿವ್ ಬಂದವರಿಗೆ ಸಣ್ಣ ಪ್ರಮಾಣದ ಲಕ್ಷಣಗಳು ಕಾಣಿಸಿಕೊಂಡಿವೆ. ರುಚಿ ಅಥವಾ ವಾಸನೆ ಕಳೆದುಕೊಳ್ಳುವಿಕೆ ಕಂಡುಬಂದಿಲ್ಲ. ತೀವ್ರ ಆಯಾಸವಾದರೆ ಮನೆಯಲ್ಲಿ ರಕ್ತದಲ್ಲಿರುವ ಆಮ್ಲಜನಕದ ಮಟ್ಟವನ್ನು ಪರೀಕ್ಷಿಸಿ. ಒಂದು ವೇಳೆ ಕಡಿಮೆ ಇದ್ದರೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ. ಸಾರ್ವಜನಿಕ ಸ್ಥಳಗಳಿಗೆ ಹೋಗುವುದನ್ನು ತಪ್ಪಿಸಿ. ಸಾಕಷ್ಟು ನೀರು ಕುಡಿಯಿರಿ. 3-4 ದಿನಗಳಲ್ಲಿ ರೋಗ ಲಕ್ಷಣಗಳು ಕಡಿಮೆಯಾಗಲಿವೆ ಎನ್ನುತ್ತಾರೆ ತಜ್ಞರು.

## ಮಿನಿ ನ್ಯೂಸ್

### ಭಾರತ-ಪಾಕ್ ಯುದ್ಧ ತಪ್ಪಿಸಲು ಟ್ರಂಪ್‌ರಿಂದ ವ್ಯಾಪಾರ ಅಸ್ತ್ರ ಬಳಕೆ

**ವಾಷಿಂಗ್ಟನ್:** ಭಾರತ, ಪಾಕಿಸ್ತಾನ ನಡುವಿನ ಪೂರ್ಣ ಪ್ರಮಾಣದ ಯುದ್ಧವನ್ನು ತಪ್ಪಿಸಲು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವ್ಯಾಪಾರದ ಕೊಡುಗೆಯನ್ನು ಬಳಸಿದ್ದಾರೆ ಎಂದು ಅಮೆರಿಕದ ಆಡಳಿತ ನ್ಯೂಯಾರ್ಕ್ ಸಫೆಡರಲ್ ನ್ಯಾಯಾಲಯಕ್ಕೆ ಲಿಖಿತ ದಾಖಲೆಯಲ್ಲಿ ತಿಳಿಸಿದೆ. ಎಲ್ಲಾ ಆಮದುಗಳ ಮೇಲೆ ಶೇ.10ರಷ್ಟು ಸುಂಕ ವಿಧಿಸುವುದು ಮತ್ತು ನಿರ್ದಿಷ್ಟ ದೇಶಗಳನ್ನು ಗುರಿಯಾಗಿಸಿ ಹೆಚ್ಚುವರಿ ಸುಂಕ ವಿಧಿಸುವ ಟ್ರಂಪ್ ಆಡಳಿತದ ಕ್ರಮವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯ ವಿಚಾರಣೆ ಸಂದರ್ಭ ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಡಬ್ಲ್ಯು. ಲುಟ್ನಿಕ್ ಮೇ 23ರಂದು ನೀಡಿದ್ದ ಹೇಳಿಕೆಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. ರಾಷ್ಟ್ರೀಯ ತುರ್ತು ಅಗತ್ಯದ ಸಂದರ್ಭದಲ್ಲಿ ಆರ್ಥಿಕ ನಿರ್ಬಂಧಗಳನ್ನು ವಿಧಿಸಲು ಸರ್ಕಾರಕ್ಕೆ ಅಧಿಕಾರ ನೀಡುವ ಕಾಯ್ದೆಯಡಿ ಸುಂಕ ಹೇರಿಕೆ ಕ್ರಮವನ್ನು ಟ್ರಂಪ್ ಬಳಸಿರುವುದನ್ನು ಈ ಹೇಳಿಕೆಯಲ್ಲಿ ಲುಟ್ನಿಕ್ ಸಮರ್ಥಿಸಿಕೊಂಡಿದ್ದಾರೆ. ಕೆಲವು ನಡವಳಿಕೆಗಳು ಗಂಭೀರ ಪರಿಣಾಮವನ್ನು ಉಂಟು ಮಾಡುತ್ತದೆ ಎಂಬ ಎಚ್ಚರಿಕೆಯನ್ನು ಇಂತಹ ಕ್ರಮಗಳು ವಿದೇಶಿ ಸರಕಾರಕ್ಕೆ ರವಾನಿಸುತ್ತವೆ. ಉದಾಹರಣೆಗೆ, ಭಾರತ-ಪಾಕ್ ಯುದ್ಧ. ಎರಡು ಪರಮಾಣು ಶಸ್ತ್ರಸಜ್ಜಿತ ದೇಶಗಳ ನಡುವಿನ ಯುದ್ಧವನ್ನು ತಪ್ಪಿಸಿ ಕದನ ವಿರಾಮ ಒಪ್ಪಂದವನ್ನು ಸಾಧ್ಯ ವಾಗಿಸಿದ್ದ ಟ್ರಂಪ್ ಅವರು ಎರಡೂ ದೇಶಗಳಿಗೆ ನೀಡಿದ ವ್ಯಾಪಾರ ಕೊಡುಗೆ ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ.

### ಗುಂಡಿಕ್ಕಿ ಬಿಷ್ಣೋಯಿ ಗ್ಯಾಂಗ್ ಸಹಚರನ ಹತ್ಯೆ

**ನವದೆಹಲಿ:** ಗ್ಯಾಂಗ್ ಸ್ಟಾರ್ ಲಾರೆನ್ಸ್ ಬಿಷ್ಣೋಯಿ ಗ್ಯಾಂಗ್‌ನ ಶಾರ್ಪ್ ಶೂಟರ್‌ನನ್ನು ಎನ್‌ಕೌಂಟರ್‌ನಲ್ಲಿ ಹತ್ಯೆ ಮಾಡಲಾಗಿದೆ. ಇಲ್ಲಿನ ಕೊತ್ವಾಲಿ ಪ್ರದೇಶದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಶಾರ್ಪ್ ಶೂಟರ್ ನವೀನ್ ಕುಮಾರ್‌ನನ್ನು ಹತ್ಯೆ ಮಾಡಲಾಗಿದೆ ಎಂದು ಉತ್ತರಪ್ರದೇಶ ಪೊಲೀಸರು ಹೇಳಿದ್ದಾರೆ. ನವೀನ್ ಕುಮಾರ್ ವಿರುದ್ಧ ದೆಹಲಿ, ಮಹಾರಾಷ್ಟ್ರ, ಉತ್ತರಪ್ರದೇಶದಲ್ಲಿ ಸುಮಾರು 20ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿದ್ದವು. ಉತ್ತರಪ್ರದೇಶ ಪೊಲೀಸರ ವಿಶೇಷ ಕಾರ್ಯಪಡೆ, ದೆಹಲಿ ಪೊಲೀಸರ ಜಂಟಿ ಕಾರ್ಯಾಚರಣೆಯಲ್ಲಿ ಎನ್‌ಕೌಂಟರ್ ನಡೆದಿತ್ತು ಎಂದು ಪೊಲೀಸರು ಹೇಳಿದ್ದಾರೆ. ಕೊತ್ವಾಲಿ ಪ್ರದೇಶದಲ್ಲಿ ನವೀನ್ ಮತ್ತು ಗ್ಯಾಂಗ್ ಇರುವ ಖಚಿತ ಮಾಹಿತಿ ಆಧರಿಸಿ ಪೊಲೀಸರು ಕಾರ್ಯಾ ಚರಣೆ ನಡೆಸಿದರು. ಈ ವೇಳೆ ನವೀನ್ ಮತ್ತು ಗ್ಯಾಂಗ್ ಪೊಲೀಸರ ಮೇಲೆ ಪ್ರತಿದಾಳಿ ನಡೆಸಿತ್ತು.

ಕಾರ್ಯಾಚರಣೆಯಲ್ಲಿ ಗಾಯಗೊಂಡಿದ್ದ ನವೀನ್ ಆಸ್ಪತ್ರೆಗೆ ಹೋಗುವ ಮಾರ್ಗ ಮಧ್ಯದಲ್ಲಿ ಮೃತಪಟ್ಟಿದ್ದಾನೆ. ಗ್ಯಾಂಗ್‌ನ ಇತರರು ಪರಾರಿಯಾಗಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಘಾಜಿಯಾಬಾದ್‌ನ ಲೋನಿ ನಿವಾಸಿ ನವೀನ್ ಬಿಷ್ಣೋಯಿ ಗ್ಯಾಂಗ್‌ನ ಸಕ್ರಿಯ ಶಾರ್ಪ್‌ಶೂಟರ್ ಆಗಿದ್ದ. ಗ್ಯಾಂಗ್‌ನ ಹಷಿಮ್ ಬಾಬಾನೊಂದಿಗೆ ನವೀನ್ ಕೆಲಸ ಮಾಡುತ್ತಿದ್ದ ಎಂದು ಅವರು ಹೇಳಿದ್ದಾರೆ.

### ಮೋದಿ ಸ್ವಾಗತಿಸಲು ಆಪರೇಷನ್ ಸಿಂಧೂರ್, ಬ್ರಹ್ಮೋಸ್ ಪೋಸ್ಟರ್


**ಪಾಟ್ನಾ:** ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರದಿಂದ ಎರಡು ದಿನ ಬಿಹಾರಗೆ ಭೇಟಿ ನೀಡುತ್ತಿದ್ದು, ಅವರನ್ನು ಸ್ವಾಗತಿಸಲು ಪಾಟ್ನಾದಲ್ಲಿ ಆಪರೇಷನ್ ಸಿಂಧೂರ್, ಬ್ರಹ್ಮೋಸ್‌ನ ನೂರಾರು ಪೋಸ್ಟರ್‌ಗಳು, ಹೋರ್ಡಿಂಗ್‌ಗಳನ್ನು ಹಾಕಲಾಗಿದೆ. ರಾಜ್ಯ ವಿಧಾನಸಭಾ ಚುನಾವಣೆಗೆ ಕೆಲವೇ ತಿಂಗಳುಗಳ ಬಾಕಿ ಇದ್ದು, ಪ್ರಧಾನಿ ಮೋದಿ ಅವರು ಗುರುವಾರ ಸಂಜೆ 4:45ರ ಸುಮಾರಿಗೆ ಪಾಟ್ನಾ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ಅಲ್ಲಿ ಅವರು ಹೊಸದಾಗಿ ನಿರ್ಮಿಸಲಾದ ಪ್ರಯಾಣಿಕರ ಟರ್ಮಿನಲ್ ಅನ್ನು ಉದ್ಘಾಟಿಸಲಿದ್ದಾರೆ ಮತ್ತು ಬಿಹ್ತಾ ವಿಮಾನ ನಿಲ್ದಾಣದಲ್ಲಿ ಹೊಸ ನಾಗರಿಕ ಎನ್‌ಕ್ಲೇವ್‌ಗೆ ಶಂಕು ಸ್ಥಾಪನೆ ಮಾಡಲಿದ್ದಾರೆ. ಸುಮಾರು 1,200 ಕೋಟಿ ರೂ. ವೆಚ್ಚದಲ್ಲಿ ಟರ್ಮಿನಲ್ ಅನ್ನು ನಿರ್ಮಿಸಲಾಗಿದ್ದು, ವಾರ್ಷಿಕವಾಗಿ ಒಂದು ಕೋಟಿ ಪ್ರಯಾಣಿಕರನ್ನು ನಿರ್ವಹಿಸಬಹುದಾಗಿದೆ.

ಇದೇ ವೇಳೆ 1,410 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವ ಬಿಹ್ತಾ ವಿಮಾನ ನಿಲ್ದಾಣದ ಹೊಸ ನಾಗರಿಕ ಎನ್‌ಕ್ಲೇವ್‌ಗೆ ಪ್ರಧಾನಿ ಮೋದಿ ಶಂಕು ಸ್ಥಾಪನೆ ಮಾಡಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಂತರ, ಪ್ರಧಾನಿ ಮೋದಿ ಅವರು ವಿಮಾನ ನಿಲ್ದಾಣದಿಂದ ರಾಜ್ಯ ಬಿಜೆಪಿ ಕಚೇರಿ ವರೆಗೆ ರೋಡ್ ಶೋ ನಡೆಸಲಿದ್ದಾರೆ. ರೋಡ್ ಶೋ ಮಾರ್ಗದುದ್ದಕ್ಕೂ ಪೋಸ್ಟರ್‌ಗಳು ಮತ್ತು ಜಾಹೀರಾತು ಫಲಕಗಳನ್ನು ಹಾಕಲಾಗಿದ್ದು, 'ಆಪರೇಷನ್ ಸಿಂಧೂರ್' ಯಶಸ್ಸಿಗಾಗಿ ಪ್ರಧಾನಿ ಮತ್ತು ಭಾರತೀಯ ಸಶಸ್ತ್ರ ಪಡೆಗಳನ್ನು ಶ್ಲಾಘಿಸಲಾಗಿದೆ. ಕಾರ್ಯಾಚರಣೆಯ ಸಮಯದಲ್ಲಿ ಬಳಸಲಾದ ಬ್ರಹ್ಮೋಸ್ ಕ್ಷಿಪಣಿಗಳ ಮಾದರಿಯ ಪೋಸ್ಟರ್‌ಗಳನ್ನು ನಗರದ ವಿವಿಧ ಭಾಗಗಳಲ್ಲಿ ಹಾಕಲಾಗಿದೆ.


### ರಕ್ತದ ಮಾದರಿ ತಿರುಚಿದ್ದ ವೈದ್ಯ ಈಗ ಕಿಡ್ನಿ ಕಸಿ ಜಾಲದಲ್ಲಿ ಬಂಧನ

**ಪುಣೆ:** ಪುಣೆಯ ಪ್ರಮುಖ ಖಾಸಗಿ ಆಸ್ಪತ್ರೆಯಲ್ಲಿ ನಡೆದ ಕಿಡ್ನಿ ಕಸಿ ಜಾಲಕ್ಕೆ ಸಂಬಂಧಿಸಿದಂತೆ ಪುಣೆಯ ಸಸೂನ್ ಜನರಲ್ ಆಸ್ಪತ್ರೆಯ ಮಾಜಿ ವೈದ್ಯಕೀಯ ಸೂಪರಿಂಟೆಂಡೆಂಟ್ ಡಾ. ಅಜಯ್ ಟವರೆ ಅವರನ್ನು ಪೊಲೀಸರು ಗುರುವಾರ ಬಂಧಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪುಣೆಯ ಕಲ್ಯಾಣಿ ನಗರದಲ್ಲಿ 17ವರ್ಷದ ಬಾಲಕ ಚಲಾಯಿಸುತ್ತಿದ್ದ ಪೋರ್ಷೆ ಕಾರು ಅಪಘಾತ ಪ್ರಕರಣದಲ್ಲಿ ಬಾಲಕನ ರಕ್ತದ ಮಾದರಿ ತಿರುಚಿದ ಆರೋಪದ ಮೇಲೆ ಕಳೆದವರ್ಷ ಬಂಧನಕ್ಕೊಳಗಾಗಿದ್ದ ಟವರೆ ಅವರನ್ನು ಈಗ ಕಿಡ್ನಿ ಕಸಿ ಜಾಲ ದಲ್ಲಿ ಬಂಧಿಸಿದ್ದು, ಯೆರ್ವಾಡಾ ಕೇಂದ್ರ ಜೈಲಿನಲ್ಲಿದ್ದಾರೆ.

ಇಲ್ಲಿನ ಪ್ರಮುಖ ಖಾಸಗಿ ಆಸ್ಪತ್ರೆಯಾದ ರೂಬಿ ಹಾಲ್ ಕ್ಲಿನಿಕ್‌ನಲ್ಲಿ 2022 ರಲ್ಲಿ ನಡೆದ ಮೂತ್ರಪಿಂಡ ಕಸಿ ಜಾಲಕ್ಕೆ ಸಂಬಂಧಿಸಿದಂತೆ ನಗರ ಅಪರಾಧ ವಿಭಾಗವು ಟವರೆಯನ್ನು ಈಗ ವಶಕ್ಕೆ ಪಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಿಡ್ನಿ ಜಾಲ ಪ್ರಕರಣದಲ್ಲಿ ನಾವು ಡಾ. ಅಜಯ್ ಟವರೆ ಅವರನ್ನು ವಶಕ್ಕೆ ಪಡೆದಿದ್ದೇವೆ ಮತ್ತು ಅವರನ್ನು ಇಂದು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುವುದು ಎಂದು ಉಪ ಪೊಲೀಸ್ ಆಯುಕ್ತ (ಅಪರಾಧ) ನಿಖಿಲ್ ಪಿಂಗಲೆ ಹೇಳಿದ್ದಾರೆ. ಡಾ. ಅಜಯ್ ಟವರೆ ಅವರು 2022 ರಲ್ಲಿ, ಮೂತ್ರಪಿಂಡ ಕಸಿ ಮಾಡಲು ಅನುಮೋದನೆ ನೀಡಿದ ಪ್ರಾದೇಶಿಕ ಅಧಿಕಾರ ಸಮಿತಿಯ ಮುಖ್ಯಸ್ಥರಾಗಿದ್ದರು. ಆ ವರ್ಷದ ಮಾರ್ಚ್‌ನಲ್ಲಿ ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸೆಯ ಸಮಯದಲ್ಲಿ ನಡೆದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಪುಣೆ ಪೊಲೀಸರು ಮೇ 2022 ರಲ್ಲಿ ರೂಬಿ ಹಾಲ್ ಕ್ಲಿನಿಕ್‌ನ ವ್ಯವಸ್ಥಾಪಕ ಟ್ರಸ್ಟಿ ಮತ್ತು ಅದರ ಕೆಲವು ಉದ್ಯೋಗಿಗಳು ಸೇರಿದಂತೆ 15 ಜನರ ವಿರುದ್ಧ ಪ್ರಕರಣ ದಾಖಲಿಸಿದರು.



# ಈ ಸಲ ಕಪ್ ನಮ್ದೆ ಬಂದ್ರು ಎಬಿಡಿ



ಈ ಸಲ ಕಪ್ ನಮ್ದೇ ಎನ್ನುವ ಘೋಷವಾಕ್ಯದೊಂದಿಗೆ ಶುರುವಾಗುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಅಭಿಮಾನಿಗಳ ಟ್ರೋಫಿ ಗೆಲ್ಲುವ ಕನಸು ಇದೀಗ 18ನೇ ಸೀಸನ್ ಅಂತ್ಯಕ್ಕೆ ಬಂದು ನಿಂತಿದೆ. ಅದರಂತೆ ಆರ್‌ಸಿಬಿ ತಂಡವು ಫೈನಲ್‌ಗೇರಲು ಇನ್ನು ಒಂದು ಹೆಜ್ಜೆಯಷ್ಟೇ ದೂರದಲ್ಲಿದೆ. ಅಂದರೆ ಇಂದು ನಡೆಯಲಿರುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಜಯ ಸಾಧಿಸಿದರೆ, ನೇರವಾಗಿ ಫೈನಲ್‌ಗೇರಲಿದೆ.

ಈ ನಿರ್ಣಾಯಕ ಪಂದ್ಯವನ್ನು ವೀಕ್ಷಿಸಲು ಆರ್‌ಸಿಬಿ ತಂಡದ ಮಾಜಿ ಆಟಗಾರ ಎಬಿ ಡಿವಿಲಿಯರ್ಸ್ ಆಗಮಿಸಿದ್ದಾರೆ. ಬುಧವಾರ ಮುಂಬೈಗೆ ಬಂದಿಳಿದಿರುವ ಎಬಿಡಿ, ಅಲ್ಲಿಂದ ಚಂಡೀಗಢ್‌ಗೆ ತೆರಳುವುದಾಗಿ ತಿಳಿಸಿದ್ದಾರೆ. ಅದರಂತೆ ಇಂದು ಮುಲ್ಲನ್‌ಪುರ್‌ನಲ್ಲಿ ಜರುಗಲಿರುವ ಆರ್‌ಸಿಬಿ ಮತ್ತು ಪಂಜಾಬ್ ಕಿಂಗ್ಸ್ ನಡುವಣ ಪಂದ್ಯದ ವೇಳೆ ಎಬಿಡಿ ಕಾಣಿಸಿಕೊಳ್ಳಲಿದ್ದಾರೆ.

ಇದಕ್ಕೂ ಮುನ್ನ ಆರ್‌ಸಿಬಿ ತಂಡ ಕಪ್ ಗೆಲ್ಲುವ ಭರವಸೆಯನ್ನು ಎಬಿಡಿ ವ್ಯಕ್ತಪಡಿಸಿದ್ದರು. ಅಲ್ಲದೆ ಈ ಬಾರಿ ರಾಯಲ್ ಪಡೆ ಫೈನಲ್‌ಗೇರಿದರೆ ಟ್ರೋಫಿ ಎತ್ತಿ ಹಿಡಿಯಲು ನಾನು ಸಹ ಹಾಜರಿರಲಿದ್ದೇನೆ ಎಂದಿದ್ದರು. ಆದರೆ ಇದೀಗ ಪ್ಲೇಆಫ್ ಪಂದ್ಯಕ್ಕೂ ಮುನ್ನವೇ ಎಬಿಡಿ ಭಾರತಕ್ಕೆ ಆಗಮಿಸಿದ್ದಾರೆ. ಈ ಮೂಲಕ ಈ ಬಾರಿ ಆರ್‌ಸಿಬಿ ತಂಡ ಕಪ್ ಗೆಲ್ಲುವುದು ಖಚಿತ ಎಂಬ ವಿಶ್ವಾಸವನ್ನು ಡಿವಿಲಿಯರ್ಸ್ ವ್ಯಕ್ತಪಡಿಸಿದ್ದಾರೆ.

2008 ರಿಂದ ಐಪಿಎಲ್ ಆಡುತ್ತಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಈವರೆಗೆ ಕಪ್ ಗೆದ್ದಿಲ್ಲ. ಆರ್‌ಸಿಬಿ ತನ್ನ ಇತಿಹಾಸದಲ್ಲಿ ಕ್ರಮವಾಗಿ 2009, 2011 ಮತ್ತು 2016 ರಲ್ಲಿ ಮೂರು ಬಾರಿ ಐಪಿಎಲ್ ಫೈನಲ್ ತಲುಪುವಲ್ಲಿ ಯಶಸ್ವಿಯಾಗಿದೆ.

# ಫೈನಲ್‌ಗೆ 4ನೇ ಬಾರಿ ಎಂಟ್ರಿಕೊಟ್ಟ ಆರ್‌ಸಿಬಿ

## ಬೌಲಿಂಗ್‌ನಲ್ಲಿ ಪರಾಕ್ರಮ ಮೆರೆದಿರುವ ಆರ್‌ಸಿಬಿಯ ಆಟಗಾರರು




ಪಂಜಾಬ್ ಕಿಂಗ್ಸ್ ವಿರುದ್ಧದ ಐಪಿಎಲ್‌ನ ಕ್ವಾಲಿಫೈಯರ್-1ರ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ವಿಜಯ ಸಾಧಿಸಿ ನೇರವಾಗಿ ಫೈನಲ್‌ಗೆ ಎಂಟ್ರಿ ಕೊಟ್ಟಿದೆ. ಇದರಿಂದ 2009, 2011, 2016ರ ಬಳಿಕ 4ನೇ ಬಾರಿಗೆ ಆರ್‌ಸಿಬಿ ಫೈನಲ್‌ಗೆ ಹೋಗಿದೆ. ಇದರಿಂದ ಅಭಿಮಾನಿಗಳಲ್ಲಿ ದೊಡ್ಡ ಮಟ್ಟದ ಸಂತಸ ಮೂಡಿದೆ.

ಮುಲ್ಲನಪುರದ ನ್ಯೂ ಪಿಸಿಎ ಸ್ಟೇಡಿಯಂನಲ್ಲಿ ನಡೆದ ಐಪಿಎಲ್ ಪಂದ್ಯದಲ್ಲಿ ಟಾಸ್ ಗೆದ್ದ ಆರ್‌ಸಿಬಿ ನಾಯಕ ರಜತ್ ಪಾಟಿದಾರ್, ಬೌಲಿಂಗ್ ಆಯ್ಕೆ ಮಾಡಿದರು. ಇದರಿಂದ ಪಂಜಾಬ್ ಕಿಂಗ್ಸ್ ಮೊದಲ ಬ್ಯಾಟಿಂಗ್ ಮಾಡುವ ಅವಕಾಶ ಪಡೆಯಿತು. ಓಪನರ್ ಆಗಿ ಕ್ರೀಸ್‌ಗೆ ಆಗಮಿಸಿದ ಪ್ರಿಯಾಂಶ್ ಆರ್ಯ 7, ಪ್ರಭಾಸಿಮ್ರಾನ್ ಸಿಂಗ್ 18 ರನ್‌ಗೆ ಔಟ್ ಆದರು. ನಂತರ ನಾಯಕ ಶ್ರೇಯಸ್ ಅಯ್ಯರ್ ಕೂಡ ಕೇವಲ 2 ರನ್‌ಗೆ ಡ್ರೆಸ್ಸಿಂಗ್ ರೂಮ್‌ನತ್ತ ಹೆಜ್ಜೆ ಹಾಕಿದರು. ಇವರ ಬೆನ್ನಲ್ಲೇ ಜೋಶ್ ಇಂಗ್ಲಿಷ್ ಕೇವಲ 4 ರನ್‌ಗೆ ವಿಕೆಟ್ ಕಳೆದುಕೊಂಡರು.

ಬ್ಯಾಟಿಂಗ್ ಮಾಡಲು ಕ್ರೀಸ್‌ಗೆ ಬಂದ ನೆಹಾಲ್ ವಧೇರಾ, ಯಶ್ ದಯಾಳ್ ಬೌಲಿಂಗ್‌ನಲ್ಲಿ ಬೋಲ್ಡ್ ಆದರು, ಸುಯಶ್ ಶರ್ಮಾ ಬೌಲಿಂಗ್‌ನಲ್ಲಿ ಶಶಾಂಕ್ ಸಿಂಗ್ 3, ಮುಶೀರ್ ಖಾನ್, ಮಾರ್ಕಸ್ ಸ್ಟೊಯಿನಿಸ್ ಔಟ್ ಆದರು. ಇದರಿಂದ ಪಂಜಾಬ್ ಕಿಂಗ್ಸ್ ಕೇವಲ 14.1 ಓವರ್‌ಗಳಲ್ಲಿ ಆಲೌಟ್ ಆಗಿ 102 ರನ್‌ಗಳ ಟಾರ್ಗೆಟ್ ಅನ್ನು ಆರ್‌ಸಿಬಿಗೆ ನೀಡಿತ್ತು.

ಈ ಸುಲಭ ಟಾರ್ಗೆಟ್ ಅನ್ನು ಚೇಸ್ ಮಾಡಿದ ಆರ್‌ಸಿಬಿ 10 ಓವರ್‌ಗೆ ಎರಡು ವಿಕೆಟ್ ಕಳೆದುಕೊಂಡು 106 ರನ್ ಗಳಿಸುವ ಮೂಲಕ ಜಯ ಸಾಧಿಸಿತು.

### ಸುನೀಲ್ ಗವಾಸ್ಕರ್ ಕಿಡಿ



ಕ್ವಾಲಿಫೈಯರ್ ಹಂತದವರೆಗೂ ಬಂದು ಕೇವಲ 101 ರನ್ ಗಳಿಸಿರುವ ಪಂಜಾಬ್ ಕಿಂಗ್ಸ್ ವಿರುದ್ಧ ಮಾಜಿ ಕ್ರಿಕೆಟ್ ಆಟಗಾರ ಸುನೀಲ್ ಗವಾಸ್ಕರ್ ಕಿಡಿಕಾರಿದ್ದಾರೆ. ನಿರ್ಣಾಯಕವಾದ ಪಂದ್ಯದಲ್ಲಿ ಶ್ರೇಯಸ್ ಅಯ್ಯರ್ ಬೇಗನೆ ಔಟ್ ಆಗಿದ್ದಕ್ಕೆ ಸುನೀಲ್ ಗವಾಸ್ಕರ್ ಗರಂ ಆಗಿದ್ದಾರೆ. ಶ್ರೇಯಸ್ ಅಯ್ಯರ್ ಅವರ ಶಾಟ್ ಆಯ್ಕೆಯನ್ನು ಪ್ರಶ್ನಿಸಿದ್ದಾರೆ. ಅವರು ಶಾಟ್ ಹೊಡೆಯಲು ಹೋಗಬಾರದಿತ್ತು ಎಂದು ಹೇಳಿದ್ದಾರೆ.

# ಭಾರತಕ್ಕೆ ಬರಲಿವೆ ಆಸ್ಟ್ರೇಲಿಯಾ, ಆಫ್ರಿಕಾ ತಂಡಗಳು

**ವೇಳಾಪಟ್ಟಿ ಪ್ರಕಟಿಸಿದ ಬಿಸಿಸಿಐ**

ಆಸ್ಟ್ರೇಲಿಯಾ ತಂಡದ ಭಾರತ ಪ್ರವಾಸ ವೇಳಾಪಟ್ಟಿಯನ್ನು ಬಿಸಿಸಿಐ ಇಂದು ಬಿಡುಗಡೆ ಮಾಡಿದೆ. ಈ ಬಾರಿಯ ಆಸ್ಟ್ರೇಲಿಯಾ ಪ್ರವಾಸವು ಹಿರಿಯ ಪುರುಷರ ಕ್ರಿಕೆಟ್ ತಂಡದದ್ದಾಗಿರುವುದಿಲ್ಲ, ಬದಲಾಗಿ ಮಹಿಳಾ ತಂಡ ಮತ್ತು 'ಎ' ತಂಡದದ್ದಾಗಿರಲಿದೆ. ಆಸ್ಟ್ರೇಲಿಯಾದ ಎರಡು ತಂಡಗಳಲ್ಲದೆ, ದಕ್ಷಿಣ ಆಫ್ರಿಕಾದ ಎ ತಂಡವೂ ಭಾರತ ಪ್ರವಾಸ ಮಾಡಲಿದೆ. ಆಸ್ಟ್ರೇಲಿಯಾದ ಎರಡೂ ತಂಡಗಳು ಸೆಪ್ಟೆಂಬರ್‌ನಿಂದ ಅಕ್ಟೋಬರ್‌ವರೆಗೆ ಭಾರತ ಪ್ರವಾಸ ಕೈಗೊಳ್ಳಲಿವೆ. ಆದರೆ ದಕ್ಷಿಣ ಆಫ್ರಿಕಾ 'ಎ' ತಂಡ ಅಕ್ಟೋಬರ್-ನವೆಂಬರ್‌ನಲ್ಲಿ ಭಾರತ ಪ್ರವಾಸ ಕೈಗೊಳ್ಳಲಿದೆ.

ಮೂರು ತಂಡಗಳ ಪ್ರವಾಸ ಸೇರಿದಂತೆ ಒಟ್ಟು 13 ಪಂದ್ಯಗಳ ವೇಳಾಪಟ್ಟಿಯನ್ನು ಬಿಸಿಸಿಐ ಬಿಡುಗಡೆ ಮಾಡಿದೆ. ಆಸ್ಟ್ರೇಲಿಯಾ ಮಹಿಳಾ ತಂಡವು ಸೆಪ್ಟೆಂಬರ್ 14 ರಿಂದ 20 ರವರೆಗೆ ಭಾರತ ವಿರುದ್ಧ 3 ಪಂದ್ಯಗಳ ಏಕದಿನ ಸರಣಿಯನ್ನು ಆಡಲಿದೆ. ಅದೇ ಸಮಯದಲ್ಲಿ, ಆಸ್ಟ್ರೇಲಿಯಾ ಎ ತಂಡವು 2 ಬಹು-ದಿನದ ಪಂದ್ಯಗಳು ಮತ್ತು 3 ಏಕದಿನ ಪಂದ್ಯಗಳಿಗಾಗಿ ಪ್ರವಾಸ ಮಾಡಲಿದೆ. ಈ ತಂಡವು ಸೆಪ್ಟೆಂಬರ್ 16 ರಿಂದ ಅಕ್ಟೋಬರ್ 5 ರವರೆಗೆ ಭಾರತ ಪ್ರವಾಸದಲ್ಲಿರುತ್ತದೆ.



ಆಸ್ಟ್ರೇಲಿಯಾದ ಎರಡೂ ತಂಡಗಳು ಹಿಂದಿರುಗಿದ ನಂತರ, ದಕ್ಷಿಣ ಆಫ್ರಿಕಾದ ಎ ತಂಡವು ಭಾರತ ಪ್ರವಾಸ ಕೈಗೊಳ್ಳಲಿದೆ. ಹರಿಣಗಳ ಪ್ರವಾಸವು ಅಕ್ಟೋಬರ್ 30 ರಿಂದ ಪ್ರಾರಂಭವಾಗಿ ನವೆಂಬರ್ 19 ರವರೆಗೆ ಮುಂದುವರಿಯುತ್ತದೆ. ಅಂದರೆ ಈ ಪ್ರವಾಸವು 20 ದಿನಗಳ ಕಾಲ ಇರುತ್ತದೆ. ಈ ಅವಧಿಯಲ್ಲಿ, 2 ಬಹು-ದಿನದ ಪಂದ್ಯಗಳ ಹೊರತಾಗಿ, 3 ಏಕದಿನ ಪಂದ್ಯಗಳ ಸರಣಿಯನ್ನು ಆಡಲಾಗುವುದು.

ಈಗ ಪ್ರಶ್ನೆ ಏನೆಂದರೆ, ಸೆಪ್ಟೆಂಬರ್‌ನಿಂದ ನವೆಂಬರ್ ವರೆಗೆ ನಡೆಯಲಿರುವ ಈ ಪಂದ್ಯಗಳಿಗೆ ಸ್ಥಳ ಯಾವುದು ಆಸ್ಟ್ರೇಲಿಯಾ ಮಹಿಳಾ ತಂಡವು ಭಾರತದ ವಿರುದ್ಧ ತನ್ನ ಮೂರು ಏಕದಿನ ಪಂದ್ಯಗಳನ್ನು ಚೆನ್ನೈನಲ್ಲಿ ಆಡಲಿದೆ. ಮೊದಲ ಪಂದ್ಯ ಸೆಪ್ಟೆಂಬರ್ 14 ರಂದು, ಎರಡನೇ ಪಂದ್ಯ ಸೆಪ್ಟೆಂಬರ್ 17 ರಂದು ಮತ್ತು ಮೂರನೇ ಪಂದ್ಯ ಸೆಪ್ಟೆಂಬರ್ 20 ರಂದು ನಡೆಯಲಿದೆ. ಭಾರತ ಪ್ರವಾಸದ ವೇಳೆ ಆಸ್ಟ್ರೇಲಿಯಾ ಎ ತಂಡವು ಲಕ್ನೋ ಮತ್ತು ಕಾನ್ಪುರದಲ್ಲಿ ತನ್ನ ಪಂದ್ಯಗಳನ್ನು ಆಡಬೇಕಾಗುತ್ತದೆ.

ಮೊದಲು ಬಹು-ದಿನದ ಪಂದ್ಯಗಳನ್ನು ಆಡಲಿದ್ದು, ಮೊದಲ ಪಂದ್ಯ ಸೆಪ್ಟೆಂಬರ್ 16 ರಿಂದ ನಡೆಯಲಿದೆ. ಎರಡನೇ ಬಹು-ದಿನದ ಪಂದ್ಯ ಸೆಪ್ಟೆಂಬರ್ 23 ರಿಂದ ನಡೆಯಲಿದೆ. ಈ ಎರಡೂ ಪಂದ್ಯಗಳು ಲಕ್ನೋದಲ್ಲಿ ನಡೆಯಲಿವೆ. ಆಸ್ಟ್ರೇಲಿಯಾ ಎ ತಂಡವು ಸೆಪ್ಟೆಂಬರ್ 30, ಅಕ್ಟೋಬರ್ 3 ಮತ್ತು ಅಕ್ಟೋಬರ್ 5 ರಂದು ಕಾನ್ಪುರದಲ್ಲಿ ಮೂರು ಏಕದಿನ ಪಂದ್ಯಗಳನ್ನು ಆಡಲಿದೆ. ದಕ್ಷಿಣ ಆಫ್ರಿಕಾ 'ಎ' ತಂಡವು ಭಾರತ ಪ್ರವಾಸದ ಸಂದರ್ಭದಲ್ಲಿ ಬಿಸಿಸಿಐನ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ಬಹುದಿನಗಳ ಪಂದ್ಯಗಳನ್ನು ಆಡಲಿದೆ. ಆ ಬಳಿಕ ಏಕದಿನ ಪಂದ್ಯಗಳು ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿವೆ.

# ಯಾಕೆ ಅವಮಾನ ಮಾಡುತ್ತೀರಿ ಪಂತ್‌ಗೆ ಜಾಡಿಸಿದ ಅಶ್ವಿನ್



ಐಪಿಎಲ್‌ನ 70ನೇ ಪಂದ್ಯವು ಹಲವು ನಾಟಕೀಯ ಸನ್ನಿವೇಶಗಳಿಗೆ ಸಾಕ್ಷಿಯಾಗಿತ್ತು. ಈ ನಾಟಕೀಯ ಸನ್ನಿವೇಶಗಳ ನಡುವೆ ಎಲ್ಲಾರ ಗಮನ ಸೆಳೆದದ್ದು ಎಲ್‌ಎಸ್‌ಜಿ ತಂಡದ ದಿಗ್ವೇಶ್ ರಾಥಿ. ಆರ್‌ಸಿಬಿ ವಿರುದ್ಧದ ಪಂದ್ಯವನ್ನು ಗೆಲ್ಲಲೇಬೇಕು ಎಂದು ಪಣತೊಟ್ಟಿದ್ದ ಯುವ ಸ್ಪಿನ್ನರ್ ಸಿಕ್ಕ ಅವಕಾಶದಲ್ಲಿ ಜಿತೇಶ್ ಶರ್ಮಾ ಅವರನ್ನು ಮಂಕಡ್ ರನೌಟ್ ಮಾಡಿದ್ದರು. ನಾನ್-ಸ್ಟ್ರೈಕರ್ ಎಂಡ್‌ನಲ್ಲಿ ರನೌಟ್ ಮಾಡಿ ದಿಗ್ವೇಶ್ ಮಾಡಿದ ಮನವಿಯನ್ನು ರಿಷಭ್ ಪಂತ್ ಹಿಂತೆಗೆದುಕೊಂಡಿದ್ದರು. ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕನ ಈ ನಿರ್ಧಾರಕ್ಕೆ ಟೀಮ್ ಇಂಡಿಯಾದ ಮಾಜಿ ಆಟಗಾರ ರವಿಚಂದ್ರನ್ ಅಶ್ವಿನ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದಿಗ್ವೇಶ್ ರಾಥಿ ಮಾಡಿದ ಮಂಕಡ್ ರನೌಟ್ ಬಗ್ಗೆ ತಮ್ಮ ಯುಟ್ಯೂಬ್ ಚಾನೆಲ್‌ನಲ್ಲಿ ಅನಿಸಿಕೆಗಳನ್ನು ಹಂಚಿಕೊಂಡಿರುವ ಅಶ್ವಿನ್, ದಿಗ್ವೇಶ್ ರಾಥಿ ನನ್ನ ಸಂಬಂಧಿ ಅಲ್ಲ, ಅವರು ಯಾರೆಂದು ನನಗೆ ತಿಳಿದಿಲ್ಲ. ಆದರೆ ನಾನು ಹೇಳಲು ಬಯಸುವುದೇನೆಂದರೆ ರಿಷಭ್ ಪಂತ್ ತೆಗೆದುಕೊಂಡ ನಿರ್ಧಾರವು ಬೌಲರ್ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಯಾರೂ ಕೂಡ ಬೌಲರ್ ಬಗ್ಗೆ ಕಾಳಜಿ ವಹಿಸುತ್ತಿಲ್ಲ. ಅವರ ಮನವಿಯನ್ನು ಏಕೆ ಹಿಂತೆಗೆದುಕೊಳ್ಳಬೇಕು. ಕೋಟ್ಯಂತರ ಜನರ ಮುಂದೆ ಅವರನ್ನು ಏಕೆ ಅವಮಾನಿಸಬೇಕು. ದಿಗ್ವೇಶ್ ರಾಥಿ ನಿಯಮಗಳ ಪ್ರಕಾರವೇ ರನೌಟ್‌ಗೆ ಮನವಿ ಮಾಡಿದ್ದರು. ಇದಾಗ್ಯೂ ರಿಷಭ್ ಪಂತ್ ಈ ಮನವಿಯನ್ನು ಏಕೆ ಹಿಂಪಡೆದರು ಇದು ಬೌಲರ್‌ಗೆ ಮಾಡುವಂತಹ ಅವಮಾನವಲ್ಲವೇ ಎಂದು ರವಿಚಂದ್ರನ್ ಅಶ್ವಿನ್ ಪ್ರಶ್ನಿಸಿದ್ದಾರೆ.

**ಪಂತ್ ತಮ್ಮ ಬೌಲರ್ ಪರ ವಹಿಸಬೇಕಿತ್ತು**

ನಾಯಕ ಎನಿಸಿಕೊಂಡವನು ಬೌಲರ್‌ಗಳಿಗೆ ಬೆಂಬಲ ನೀಡಬೇಕು. ಪಂತ್ ತಮ್ಮ ಬೌಲರ್ ಪರ ವಹಿಸಬೇಕಿತ್ತು. ಆದರೆ ಕ್ಯಾಪ್ಟನ್‌ಗಳು ನಾನ್ ಸ್ಟ್ರೈಕರ್ ಎಂಡ್‌ನಲ್ಲಿ ರನೌಟ್ ಆಗುವ ಬ್ಯಾಟ್ಸ್‌ಮನ್‌ಗಳ ಪರ ನಿಲ್ಲುತ್ತಿದ್ದಾರೆ. ದಿಗ್ವೇಶ್ ರಾಥಿ ವಿಷಯದಲ್ಲೂ ಅದೇ ಆಗಿದೆ ಎಂದು ಅಶ್ವಿನ್ ಆಕ್ರೋಶ ಹೊರಹಾಕಿದ್ದಾರೆ. ಕೋಟ್ಯಂತರ ಜನರ ಮುಂದೆ ಯುವ ಆಟಗಾರನಿಗೆ ಮಾನಹಾನಿ ಮಾಡಿದ್ದಾರೆ. ಇಂತಹವುಗಳನ್ನೆಲ್ಲಾ ನಿಲ್ಲಿಸಿ. ನಾವು ಬೇರೆಯವರಿಗೆ ಹೀಗೆ ಮಾಡುತ್ತೇವೆಯೇ ಒಬ್ಬ ಬೌಲರ್ ನಿಮಗೆ ಏಕೆ ಸಣ್ಣದಾಗಿ ಕಾಣುತ್ತಾನೆ ಇದು ನಿಜಕ್ಕೂ ಅವಮಾನ ಎಂದು ರಿಷಭ್ ಪಂತ್ ನಡೆಯನ್ನು ಅಶ್ವಿನ್ ಟೀಕಿಸಿದ್ದಾರೆ. ನಾಯಕ ಎನಿಸಿಕೊಂಡವನು ಈ ರೀತಿ ಮಾಡಿದ್ರೆ, ಒಬ್ಬ ಬೌಲರ್ ತಾನು ಎಂದಿಗೂ ಸಣ್ಣವನೆಂದು ಭಾವಿಸುತ್ತಾನೆ. ಮುಂದೆ ಅವನು ಹಾಗೆ ಮಾಡುವುದಿಲ್ಲ. ಜನರು ಕೂಡ ಕಾಮೆಂಟ್‌ಗಳ ವಿಭಾಗದಲ್ಲಿ ಅವನು ಹಾಗೆ ಮಾಡಬಾರದು ಎಂದು ಹೇಳುತ್ತಾರೆ. ಏಕೆ ಅವನು ಹಾಗೆ ಏಕೆ ಮಾಡಬಾರದು ಎಂದು ಅಶ್ವಿನ್ ಪ್ರಶ್ನಿಸಿದ್ದಾರೆ.

**ಸಿನಿ ವಾಹಿನಿ**

# ಯಶ್ ಪಾತ್ರದ ಮೊದಲ ಆಕ್ಷನ್ ಸೀಕ್ವೆನ್ಸ್ ಲುಕ್ ರಿವೀಲ್



ಬಹುನಿರೀಕ್ಷಿತ ರಾಮಾಯಣ ಸಿನಿಮಾದಲ್ಲಿ ರಾವಣ ಪಾತ್ರದ ಮೂಲಕ ಕಾಣಿಸಿಕೊಳ್ಳುತ್ತಿರುವ ರಾಕಿಂಗ್ ಸ್ಟಾರ್ ಯಶ್ ಅವರ ಮೊದಲ ಆಕ್ಷನ್ ಸೀಕ್ವೆನ್ಸ್ ಲುಕ್ ರಿವಿಲ್ ಆಗಿದೆ. ನಿತೇಶ್ ತಿವಾರಿ ನಿರ್ದೇಶನ ಹಾಗೂ ಬಹುಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ರಾಮಾಯಣ ಸಿನಿಮಾದಲ್ಲಿ ಯಶ್ ನಟನಾಗಿಯೂ ಹಾಗೂ ನಿರ್ಮಾಪಕನಾಗಿಯೂ ಕಾಣಿಸಿಕೊಳ್ಳುತ್ತಿರುವುದು ಬಹು ವಿಶೇಷ. ರಾಮನ ಪಾತ್ರದಲ್ಲಿ ರಣಬೀರ್ ಕಪೂರ್, ಸೀತಾ ಪಾತ್ರದಲ್ಲಿ ಸಾಯಿ ಪಲ್ಲವಿ ಹಾಗೂ ರಾವಣನ ಪಾತ್ರದಲ್ಲಿ ಯಶ್ ಕಾಣಿಸಿಕೊಳ್ಳುತ್ತಿದ್ದಾರೆ

ಯಶ್ ರಾವಣನಾಗಿ ಅಬ್ಬರಿಸುವುದನ್ನು ಕಣ್ತುಂಬಿಕೊಳ್ಳಲು ಕನ್ನಡಿಗರು ಮಾತ್ರವಲ್ಲದೇ ಭಾರತೀಯ ಸಿನಿಮಾರಂಗ ಕಾತುರದಿಂದ ಕಾಯುತ್ತಿದ್ದು, ಇದೀಗ ಆಕ್ಷನ್ ಸೀಕ್ವೆನ್ಸ್‌ನ ಮೊದಲ ಲುಕ್ ರಿವಿಲ್ ಆಗಿದೆ. ಸಿನಿಮಾ ಶೂಟಿಂಗ್‌ನಲ್ಲಿ ಬೃಹತ್ ಸೆಟ್‌ಗಳು ತಲೆಯೆತ್ತಿ ನಿಂತಿದ್ದು, ಆಕ್ಷನ್ ಸೀಕ್ವೆನ್ಸ್‌ಗಳನ್ನು ಹಾಲಿವುಡ್‌ನ ಖ್ಯಾತ ಮ್ಯಾಡ್ ಮ್ಯಾಕ್ಸ್ ಸ್ಟಂಟ್ ನಿರ್ದೇಶಕ ಗೈ ನೋರಿಸ್ ನಿರ್ದೇಶನ ಮಾಡುತ್ತಿದ್ದಾರೆ. ರಾಮಾಯಣ ಭಾಗ 1ಕ್ಕಾಗಿ ಯಶ್ 60-70 ದಿನಗಳ ಕಾಲ ಚಿತ್ರೀಕರಣ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ರಾಮಾಯಣ ಸಿನಿಮಾ 2 ಭಾಗಗಳಲ್ಲಿ ಮೂಡಿ ಬರಲಿದ್ದು, ಮೊದಲ ಭಾಗ 2026ರಲ್ಲಿ ರಿಲೀಸ್ ಆಗಲಿದೆ.



# ಕನ್ನಡದ ಬಗ್ಗೆ ಕಮಲ್‌ಗೆ ಪ್ರೀತಿಯಿದೆ



ಕನ್ನಡದ ಬಗ್ಗೆ ಕಮಲ್ ಹಾಸನ್ ಅವರಿಗೂ ಪ್ರೀತಿ ಇದೆ. ಈಗ ಯಾಕೆ ಅದನ್ನ ದೊಡ್ಡ ವಿಚಾರ ಮಾಡುತ್ತೀರಾ ಎಂದು ವಿವಾದದ ಬಗ್ಗೆ ನಟ ಶಿವಣ್ಣ ಪ್ರತಿಕ್ರಿಯೆ ನೀಡಿದ್ದಾರೆ. ಕನ್ನಡ ತಮಿಳಿನಿಂದ ಹುಟ್ಟಿದ್ದು ಎಂಬ ಕಮಲ್ ಹಾಸನ್ ವಿವಾದಾತ್ಮಕ ಹೇಳಿಕೆ ಕುರಿತು ಮಾತನಾಡಿದ ಅವರು, ಕಮಲ್ ಹಾಸನ್ ನನಗೆ ಬಹಳ ಇಷ್ಟ. ನನ್ನ ತಂದೆ ಮತ್ತು ಕಮಲ್ ಅವರ ಸಂಬಂಧ ಬೇರೆ. ಅದಕ್ಕಾಗಿ ನಾನು ಅವರ ಅಭಿಮಾನಿಯಲ್ಲ. ನಾನು ಕಮಲ್ ಅವರನ್ನು ನನಗೆ ಸ್ಫೂರ್ತಿ ಎಂದು ಭಾವಿಸಿದ್ದೇನೆ. ನಮ್ಮನ್ನ ಅವರ ಕಾರ್ಯಕ್ರಮಕ್ಕೆ ಕರೆದಿದ್ದರು. ಹೀಗಾಗಿ ಹೋದ್ವಿ- ಬಂದ್ವಿ ಅಷ್ಟೇ ಎಂದರು. ಬರೀ ಬಾಯಿಯಲ್ಲಿ ಮಾತ್ರ ಕನ್ನಡ ಕನ್ನಡ ಅನ್ನಬಾರದು. ಕನ್ನಡಕ್ಕಾಗಿ ನಾನು ಹೋರಾಟ ಮಾಡುತ್ತೇನೆ, ಕನ್ನಡಕ್ಕಾಗಿ ನಾನು ಸಾಯುತ್ತೇನೆ. ಕನ್ನಡ ಅಂತೀರಾ, ಸ್ಟಾರ್ ನಟರಿಗೆ ಮಾತ್ರ ಬೆಂಬಲಿಸೋದು.

**ಯಾಕೆ ಅದನ್ನ ದೊಡ್ಡ ವಿಷಯ ಮಾಡ್ತೀರಾ**

# ದೀಪಿಕಾ ಬಗ್ಗೆ ನಿರ್ಮಾಪಕರಿಗೆ ಭಯ



ಇತ್ತೀಚೆಗೆ ದೀಪಿಕಾ ಪಡುಕೋಣೆ ಅವರು 'ಸ್ಪಿರಿಟ್' ಚಿತ್ರದಿಂದ ಹೊರಬಂದಿದ್ದು, ಅವರ ಮೇಲೆ ಕಥಾಸೋರಿಕೆ ಮತ್ತು ಅತಿಯಾದ ಬೇಡಿಕೆಗಳ ಆರೋಪ ಕೇಳಿಬಂದಿದೆ. ಇದರಿಂದಾಗಿ ನಿರ್ಮಾಪಕರಲ್ಲಿ ಆತಂಕ ಮೂಡಿದೆ. ಅವರ ವೃತ್ತಿಪರತೆಯ ಬಗ್ಗೆ ಚರ್ಚೆಗಳು ನಡೆಯುತ್ತಿದ್ದು, ಅವರ 20 ಕೋಟಿ ರೂಪಾಯಿ ಸಂಭಾವನೆ ಮತ್ತು ಲಾಭದಲ್ಲಿ ಪಾಲು ಕೇಳಿದ್ದಾರೆ ಎಂಬ ವದಂತಿಗಳೂ ಇವೆ. ಇತ್ತೀಚೆಗೆ ದೀಪಿಕಾ ಪಡುಕೋಣೆ ಅವರು ಸಾಕಷ್ಟು ಸುದ್ದಿಯಲ್ಲಿರೋದು ಗೊತ್ತೇ ಇದೆ. ಅವರು 'ಸ್ಪಿರಿಟ್' ಚಿತ್ರದಿಂದ ಹೊರ ಬಂದರು ಮತ್ತು ಕಥೆಯನ್ನು ಸೋರಿಕೆ ಮಾಡಿದರು ಎನ್ನುವ ಆರೋಪ ಅವರ ಮೇಲೆ ಇದೆ. ಅಲ್ಲದೆ ಅವರು ಸುಮಾರು ಬೇಡಿಕೆ ಇಟ್ಟರು ಎಂದು ಕೂಡ ಹೇಳಲಾಗುತ್ತಿದೆ. ಅವರು ವೃತ್ತಿಪರತೆ ಇಲ್ಲದೆ ನಡೆದುಕೊಂಡಿದ್ದು, ಅವರ ಮುಂದಿನ ಸಿನಿಮಾಗಳ ಬಗ್ಗೆ ನಿರ್ಮಾಪಕರಿಗೆ ಆತಂಕ ಶುರುವಾಗಿದೆಯಂತೆ. ಸಂದೀಪ್ ರೆಡ್ಡಿ ವಂಗ ಅವರು 'ಸ್ಪಿರಿಟ್' ಚಿತ್ರವನ್ನು ನಿರ್ದೇಶನ ಮಾಡಬೇಕಿದೆ. ಈ ಚಿತ್ರದ ಕಲಾವಿದರ ಆಯ್ಕೆಯಲ್ಲಿ ಅವರು ಬ್ಯುಸಿ ಇದ್ದಾರೆ. ಈ ಚಿತ್ರಕ್ಕೆ ಮೊದಲು ದೀಪಿಕಾಗೆ ಅವರು ಅವಕಾಶ ಕೊಟ್ಟರು. ಆ ಬಳಿಕ ಅವರು ಕಥೆಯನ್ನು ಒಪ್ಪಿದರು ಆ ಬಳಿಕ ಬೇಡ ಎಂದರು. ಇದಕ್ಕೆ ಅವರು ಇಟ್ಟ ಬೇಡಿಕೆ ಕಾರಣ ಎಂದು ಹೇಳಲಾಗುತ್ತಿದೆ. ಹೀಗಿರುವಾಗಲೇ ಅವರ ಮುಂದಿನ ಚಿತ್ರದ ಬಗ್ಗೆ ನಿರ್ಮಾಪಕರಿಗೆ ಚಿಂತೆ ಶುರುವಾಗಿದೆ. ಪಡುಕೋಣೆ ಅವರು ವೃತ್ತಿಪರವಾಗಿಲ್ಲ ಎಂದು ಕೆಲವರು ಹೇಳಿದರೆ ಇನ್ನೂ ಕೆಲವರು ಅವರು ತಮ್ಮ ಮೌಲ್ಯಕ್ಕೆ ತಕ್ಕಂತೆ ಡಿಮ್ಯಾಂಡ್ ಮಾಡುವುದರಲ್ಲಿ ತಪ್ಪೇನಿದೆ ಎಂದು ಕೇಳಿದ್ದಾರೆ.

**ಮೌಲ್ಯಕ್ಕೆ ತಕ್ಕಂತೆ ಡಿಮ್ಯಾಂಡ್ ಮಾಡುವುದರಲ್ಲಿ ತಪ್ಪೇನಿದೆ**


# ಹುಡುಗನ ಜೊತೆ ರಂಜನಿ ರಾಘವನ್ ಸುತ್ತಾಟ

ನಟಿ ರಂಜನಿ ರಾಘವನ್ ಅವರು 'ಕನ್ನಡತಿ' ಧಾರಾವಾಹಿ ಮೂಲಕ ಭುವಿ ಎಂದೇ ಫೇಮಸ್ ಆದವರು. ಈಗ ಅವರು ಸಿನಿಮಾ ನಿರ್ದೇಶನ ಮಾಡಿದ್ದಾರೆ. ಈ ಚಿತ್ರ ಶೀಘ್ರವೇ ಬಿಡುಗಡೆ ಕಾಣಲಿದೆ. ಅದಕ್ಕೂ ಮೊದಲು ತಮ್ಮ ಹುಡುಗನ ಜೊತೆ ಅವರು ಸುತ್ತಾಟ ನಡೆಸಿದ್ದಾರೆ.

ರಂಜನಿ ರಾಘವನ್ ಅವರು ತಮ್ಮ ಹುಡುಗನ ಜೊತೆ ಸುತ್ತಾಟ ನಡೆಸಿದ್ದಾರೆ. ಕಾರಿನಲ್ಲಿ ಅವರು ಜಾಲಿ ರೈಡ್ ಹೋಗಿದ್ದಾರೆ. ಈ ಸಂದರ್ಭದ ಫೋಟೋಗಳನ್ನು ಅವರು ಹಂಚಿಕೊಂಡು ಗಮನ ಸೆಳೆದಿದ್ದಾರೆ. ಈ ಫೋಟೋಗೆ ಫ್ಯಾನ್ಸ್ ಕಡೆಯಿಂದ ಭರ್ಜರಿ ಲೈಕ್ಸ್ ಸಿಕ್ಕಿದೆ. ಈ ಬಾರಿ ಮಳೆಗಾಲ ಮೊದಲೇ ಶುರುವಾಗಿದೆ. ಹೀಗಾಗಿ ನಿಸರ್ಗದಲ್ಲಿ ಹಸಿರು ರಾರಾಜಿಸುತ್ತಿದೆ. ಅಷ್ಟೇ ಅಲ್ಲ, ತುಂತುರು ಮಳೆಗೆ ವಾತಾವರಣ ಕೂಡ ಕೂಲ್ ಆಗಿದೆ. ಈ ಕಾರಣದಿಂದಲೇ ರಂಜನಿ ಅವರು ಈ ಸಂದರ್ಭದಲ್ಲಿ ಸುತ್ತಾಟ ನಡೆಸಲು ನಿರ್ಧರಿಸಿದ್ದರು. ರಂಜನಿ ರಾಘವನ್ ಅವರು ಸಾಗರ್ ಭಾರಧ್ವಜ್ ಅವರನ್ನು ಮದುವೆ ಆಗುತ್ತಿದ್ದಾರೆ. ಅವರು ವೃತ್ತಿಯಲ್ಲಿ ಅಥ್ಲೆಟ್ ಎನ್ನಲಾಗಿದೆ. ಇಬ್ಬರೂ ಒಟ್ಟಾಗಿ ಸಮಯ ಕಳೆದಿದ್ದಾರೆ. ರಂಜನಿ ಅವರಿಗೆ ನಿತ್ಯದ ಜಂಜಾಟದಿಂದ ಒಂದು ಸಣ್ಣ ಬ್ರೇಕ್ ಸಿಕ್ಕಂತೆ ಆಗಿದೆ. ರಂಜನಿ ರಾಘವನ್ ಅವರು ಕಲರ್ಸ್ ಕನ್ನಡದ 'ಕನ್ನಡತಿ' ಧಾರಾವಾಹಿಯಲ್ಲಿ ಭುವನೇಶ್ವರಿ (ಭುವಿ) ಪಾತ್ರ ಮಾಡಿದ್ದರು. ಈ ಪಾತ್ರದ ಮೂಲಕ ಅವರು ಸಾಕಷ್ಟು ಗಮನ ಸೆಳೆದರು. ಈಗ ಅವರು ಸಿನಿಮಾ ಮಾಡುತ್ತಾ ಇದ್ದಾರೆ ಅನ್ನೋದು ವಿಶೇಷ. ರಂಜನಿ ಅವರು ಸಿನಿಮಾಗೆ ನಿರ್ದೇಶನ ಮಾಡುತ್ತಿದ್ದಾರೆ. ಈ ಚಿತ್ರಕ್ಕೆ 'ಡಿ ಡಿ ಢಿಕ್ಕಿ' ಎನ್ನುವ ಟೈಟಲ್ ಇಡಲಾಗಿದೆ. ಈ ಸಿನಿಮಾ ಬಗ್ಗೆ ನಿರೀಕ್ಷೆ ಇದೆ. ನಿರ್ದೇಶನದಲ್ಲಿ ಅವರಿಗೆ ಇದು ಮೊದಲ ಅನುಭವ. ಈ ಚಿತ್ರದ ರಿಲೀಸ್‌ಗಾಗಿ ಫ್ಯಾನ್ಸ್ ಕಾದಿದ್ದಾರೆ. ರಂಜನಿ ರಾಘವನ್ ಅವರು ಬರಹಗಾರ್ತಿ ಕೂಡ ಹೌದು. ಅವರು ಕಥೆ ಪುಸ್ತಕಗಳನ್ನು ಬರೆದಿದ್ದಾರೆ. 'ಡಿ ಡಿ ಢಿಕ್ಕಿ' ಚಿತ್ರಕ್ಕೆ ಅವರದ್ದೇ ಕಥೆ ಇದೆ ಅನ್ನೋದು ವಿಶೇಷ. ಶೀಘ್ರವೇ ಈ ಚಿತ್ರ ಬಿಡುಗಡೆ ಕಾಣುವ ನಿರೀಕ್ಷೆ ಇದೆ.

**ಚಿಲ್ ವೆದರ್‌ನಲ್ಲಿ ರಿಲ್ಯಾಕ್ಸ್**

# ಮಿಂಚು ಬಳ್ಳಿಯಂತೆ ಕಂಗೊಳಿಸಿದ ರಶ್ಮಿಕಾ





**ವಿಜಯ್ ಕ್ಲಿಕ್ ಮಾಡಿದ್ದು ಅಂದ್ರು**

ನಟಿ ರಶ್ಮಿಕಾ ಮಂದಣ್ಣ ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಸೀರೆಯುಟ್ಟು ಮಿಂಚುತ್ತಿರುವ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಈ ಫೋಟೋಗಳಿಗೆ ಕ್ಯಾಮೆರಾಮೆನ್ ವಿಜಯ್ ದೇವರಕೊಂಡನಾ ಅಂತ ಅಭಿಮಾನಿಗಳು ಕಾಮೆಂಟ್ ಮಾಡಿದ್ದಾರೆ. ಈ ಫೋಟೋಗೆ ಸುಂದರ ಸಾಲುಗಳ ಕ್ಯಾಪ್ಷನ್ ಕೊಟ್ಟಿರೋ ರಶ್ಮಿಕಾ ಈ ಚಿತ್ರಗಳಲ್ಲಿ ಇರೋದೆಲ್ಲ ನನ್ನ ನೆಚ್ಚಿನವು. ಬಣ್ಣ, ವೈಬ್, ಈ ಸ್ಥಳ, ನನಗೆ ಈ ಸೀರೆಯನ್ನು ಉಡುಗೊರೆಯಾಗಿ ನೀಡಿದ ಮಹಿಳೆ, ಛಾಯಾಗ್ರಾಹಕ ಮತ್ತು ಈ ಫೋಟೋದಲ್ಲಿರುವ ಎಲ್ಲಾವೂ ಬೇರೆಯಾವುದಕ್ಕೂ ಸರಿಸಾಟಿ ಇಲ್ಲದ್ದು ಎಂದು ಬರೆದುಕೊಂಡಿದ್ದಾರೆ. ಇದು ನಟ ವಿಜಯ್ ದೇವರಕೊಂಡ ಅವರೇ ಕ್ಲಿಕ್ ಮಾಡಿರಬಹುದು. ಸೆಟ್ಟಿಂಗ್ ನೋಡಿದ್ರೆ, ವಿಜಯ್ ಅವರ ಮನೆಯಂತೆಯೇ ಇದೆ ಎಂದು ನೆಟ್ಟಿಗರು ಈ ಫೋಟೋಗಳಿಗೆ ಕಾಮೆಂಟ್ ಮಾಡಿದ್ದಾರೆ. ರಶ್ಮಿಕಾ ಮತ್ತು ವಿಜಯ್ ಕೆಲವು ಸಮಯದಿಂದ ಡೇಟಿಂಗ್‌ನಲ್ಲಿದ್ದಾರೆ ಎಂಬ ವದಂತಿ ಇದೆ. ಇಬ್ಬರೂ ಸಾರ್ವಜನಿಕವಾಗಿ ಈ ವಿಚಾರವನ್ನು ದೃಢಪಡಿಸಿಲ್ಲ. ಇಬ್ಬರೂ ಈ ಹಿಂದೆ 'ಗೀತಾ ಗೋವಿಂದಂ' ಮತ್ತು 'ಡಿಯರ್ ಕಾಮ್ರೇಡ್' ಚಿತ್ರಗಳಲ್ಲಿ ಒಟ್ಟಿಗೆ ಕೆಲಸ ಮಾಡಿದ್ದರು. ಅನೇಕ ಕಾರ್ಯಕ್ರಮಗಳಲ್ಲಿ ಇಬ್ಬರೂ ಆಗಾಗ ಒಟ್ಟಿಗೆ ಕಾಣಿಸಿಕೊಳ್ಳುತ್ತಿರುತ್ತಾರೆ. ಏನೇ ಆದ್ರೂ, ರಶ್ಮಿಕಾ ನಿಗೂಢ ಛಾಯಾಗ್ರಾಹಕನ ಹೆಸರು ಬಹಿರಂಗಪಡಿಸದಿದ್ದರೂ, ನೆಟ್ಟಿಗರು ಮಾತ್ರ, ದೇವರಕೊಂಡ ಅವರೇ ಆ ಛಾಯಾಗ್ರಾಹಕ ಎಂದು ಊಹಿಸಿದ್ದಾರೆ.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966